೨೩ ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 252 | ನವದೆಹಲಿ | ಬೆಲೆ ₹ 10 | ಮಾರ್ಚ್ 18, 2026, ಬುಧವಾರ





## ನಿತ್ಯ ಪಂಚಾಂಗ 18.03.2026 ಬುಧವಾರ



ಶ್ರೀ ಕ್ರೋಧಿ ನಾಮ ಸಂವತ್ಸರ, ದಕ್ಷಿಣಾಯನ–ಶರದ್ ಋತು, ಚಾಂದ್ರಮಾನ, ಕಾರ್ತಿಕ ಶುದ್ಧ

ಪುಷ್ಯ ಬಹುಳ ಚತುರ್ದಶಿ, ಉತ್ತರಾಷಾಢ ನಕ್ಷತ್ರ, ತ್ರೈಅವರಾತ್ರಿ ಅಮಾವಾಸ್ಯೆ, ಪುರಂದರದಾಸ ಪುಣ್ಯದಿನ ಗರುಡ ಜ., ನರಹರಿ ಸದಾಶಿವ ಪ್ರತಿಷ್ಠಾ ವರ್ಧಂತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಶಾಸಕರ ಪ್ರಶ್ನೆಗಳಿಗೆ ಉತ್ತರ ನೀಡುವಲ್ಲಿ ನಿರ್ಲಕ್ಷ್ಯ: ಅಧಿಕಾರಿಗಳಿಗೆ ನೋಟಿಸ್

## ವಾರದೊಳಗೆ ಅಧಿಕಾರಿಗಳು ಉತ್ತರ ಕಳುಹಿಸಲು ಮುಖ್ಯ ಕಾರ್ಯದರ್ಶಿ ಸೂಚನೆ

**ಬೆಂಗಳೂರು, ಮಾ.17:** ಶಾಸಕರ ಪ್ರಶ್ನೆಗಳಿಗೆ ಉತ್ತರ ನೀಡುವಲ್ಲಿ ನಿರ್ಲಕ್ಷ್ಯ ತೋರಿದ ಹಿನ್ನೆಲೆ ಇಲಾಖೆ ಪ್ರಧಾನ ಕಾರ್ಯದರ್ಶಿ ಹಾಗೂ ಕಾರ್ಯದರ್ಶಿಗಳಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ನೋಟೀಸ್ ನೀಡಿದ್ದಾರೆ.



ನೋಟೀಸ್‌ನಲ್ಲಿ ಕರ್ನಾಟಕ ವಿಧಾನಸಭೆಯ 16ನೇ ವಿಧಾನಸಭೆ (2023–2026)ಯ 1ನೇ ಅಧಿವೇಶನದಿಂದ 9ನೇ ಅಧಿವೇಶನದವರೆಗೆ ಉತ್ತರ ಬಾರದಿರುವ ಕುರಿತು ಮುಖ್ಯಮಂತ್ರಿಗಳು ಮತ್ತು ಸಭಾಧ್ಯಕ್ಷರೊಂದಿಗೆ ಸೋಮವಾರ ಸಭೆ ನಡೆಸಲಾಗಿದೆ. ಸಕಾಲದಲ್ಲಿ ಉತ್ತರ ನೀಡದಿರುವ ಬಗ್ಗೆ ಸ್ಪೀಕರ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದಿದ್ದಾರೆ.


ತಮ್ಮ ಇಲಾಖೆಗೆ ಸಂಬಂಧಿಸಿದಂತೆ ಇದುವರೆಗೂ ಉತ್ತರಗಳನ್ನು, ವಿಧಾನ ಮಂಡಲಕ್ಕೆ ಸಲ್ಲಿಸದ ಬಾಕಿ ಪ್ರಶ್ನೆಗಳ ವಿವರವನ್ನು ಇದರೊಂದಿಗೆ ಲಗತ್ತಿಸಿದೆ. ಈ ಸಂಬಂಧ ವೈಯಕ್ತಿಕವಾಗಿ ಗಮನಹರಿಸಿ, ಒಂದು ವಾರದೊಳಗಾಗಿ ವಿಧಾನ ಮಂಡಲಕ್ಕೆ ಉತ್ತರಗಳನ್ನು ಕಳುಹಿಸಿಕೊಡಲು ಸೂಚಿಸಿದೆ. ಈ ಅವಧಿಯೊಳಗೆ ಒಂದು ವೇಳೆ ಉತ್ತರವನ್ನು ಕಳುಹಿಸದೇ ಇದ್ದಲ್ಲಿ ಏಕೆ ಉತ್ತರವನ್ನು ಕಳುಹಿಸಲು ಎಂಬ ಬಗ್ಗೆ ವಿವರಣೆಯನ್ನು ಸಲ್ಲಿಸುವಂತೆ ಸೂಚಿಸಿದ್ದಾರೆ.

### ಯಾವ ಇಲಾಖೆಯಲ್ಲಿ ಎಷ್ಟು?

ನಗರಾಭಿವೃದ್ಧಿ ಇಲಾಖೆ + ಬಿ.ಬಿ.ಎಂ.ಪಿ – 140, ಆರ್ಥಿಕ ಇಲಾಖೆ – 83, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ – 51, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ – 39, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ – 35, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ – 34, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ – 34, ಕಂದಾಯ ಇಲಾಖೆ – 27, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ – 25, ಸಹಕಾರ ಇಲಾಖೆ – 25, ವಸತಿ ಇಲಾಖೆ – 14, ಪ್ರವಾಸೋದ್ಯಮ ಇಲಾಖೆ – 12, ಸಮಾಜ ಕಲ್ಯಾಣ ಇಲಾಖೆ – 11, ಜಲಸಂಪನ್ಮೂಲ ಇಲಾಖೆ (ಭಾರಿ ಮತ್ತು ಮಧ್ಯಮ) – 11, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ – 10, ಮೂಲಸೌಲಭ್ಯ ಅಭಿವೃದ್ಧಿ, ಇಲಾಖೆ – 8, ಇಂಧನ ಇಲಾಖೆ – 8, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ – 7, ಲೋಕೋಪಯೋಗಿ ಇಲಾಖೆ – 7, ಕನ್ನಡ ಮತ್ತು ಸಂಸ್ಕೃತಿ ಇಲಾಖೆ – 6, ಮಾಹಿತಿ ತಂತ್ರಜ್ಞಾನ ಇಲಾಖೆ – 6, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ – 5, ಕೃಷಿ ಇಲಾಖೆ – 4, ಒಳಾಡಳಿತ ಇಲಾಖೆ – 4, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ – 4, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ – 4, ಕಾರ್ಮಿಕ ಇಲಾಖೆ – 3, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ – 3, ಸಾರ್ವಜನಿಕ ಉದ್ದಿಮೆಗಳ ಇಲಾಖೆ (ಆರ್ಥಿಕ ಇಲಾಖೆ) – 2, ಅಲ್ಪ ಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ – 2, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ – 2, ವೈದ್ಯಕೀಯ ಶಿಕ್ಷಣ ಇಲಾಖೆ – 2, ಕೌಶಲ್ಯಾಭಿವೃದ್ಧಿ, ಇಲಾಖೆ – 2, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ – 1, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ – 1, ಸಾರಿಗೆ ಇಲಾಖೆ – 1 ಸೇರಿ ಒಟ್ಟು 632

## ಮಾಹಿತಿ ಒದಗಿಸುವ ನಿರ್ದಿಷ್ಟ ಸಮಯ ತಿಳಿಸಿ: ಸಿಎಂ ಸಿದ್ದರಾಮಯ್ಯ ಸೂಚನೆ

ವಿಧಾನ ಮಂಡಲ ಶಾಸಕರ ಪ್ರಶ್ನೆಗಳಿಗೆ ಸಕಾಲದಲ್ಲಿ ಉತ್ತರ ನೀಡದಿರುವ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಸಚಿವರುಗಳಿಗೆ ಪತ್ರ ಬರೆದಿದ್ದಾರೆ. ಪತ್ರದಲ್ಲಿ ಕರ್ನಾಟಕ ವಿಧಾನಸಭೆಯ 16ನೇ ವಿಧಾನಸಭೆ (2023–2026)ಯ 1ನೇ ಅಧಿವೇಶನದಿಂದ 9ನೇ ಅಧಿವೇಶನದವರೆಗೆ ಉತ್ತರ ಬಾರದಿರುವ ಇಲಾಖಾವಾರು ಪ್ರಶ್ನೆಗಳ ಪಟ್ಟಿಯನ್ನು ಮತ್ತು ದಿನಾಂಕ: 16.03.2026 ರಂದು ನಡೆದ ಸದನ ಸಭೆಯಲ್ಲಿ 245 ಪ್ರಶ್ನೆಗಳಲ್ಲಿ ಇದುವರೆಗೂ 90 ಪ್ರಶ್ನೆಗಳಿಗೆ ಮಾತ್ರ ಉತ್ತರವನ್ನು ಒದಗಿಸಿರುವುದು ಕಂಡುಬಂದಿದೆ ಎಂದು ವಿವರಿಸಿದ್ದಾರೆ.



ತಮ್ಮ ಇಲಾಖೆಗೆ ಸಂಬಂಧಿಸಿದಂತೆ ಸದನದಲ್ಲಿ ಉತ್ತರಿಸಲು ಬಾಕಿ ಇರುವ ಪ್ರಶ್ನೆಗಳಿಗೆ ಉತ್ತರಗಳನ್ನು ಇದುವರೆಗೂ ಕಳುಹಿಸದೇ ಇರುವುದು ವಿಧಾನಸಭಾ ಸದಸ್ಯರುಗಳು ಸದನದಲ್ಲಿ ಚರ್ಚಿಸಲು ಅನಾನುಕೂಲ ಉಂಟು ಮಾಡಿದೆ.

ಇದು ಸರ್ಕಾರಕ್ಕೆ ತೀವ್ರ ಮುಜುಗರ ಉಂಟು ಮಾಡುವುದರೊಂದಿಗೆ ಶಾಸಕರ ಹಕ್ಕಿಗೆ ಮತ್ತು ಸದನದ ಘನತೆಗೆ ಚ್ಯುತಿಯನ್ನುಂಟು ಮಾಡಿರುತ್ತದೆ ಎಂದು ತಿಳಿಸಿದ್ದಾರೆ. ಈ ಸಂಬಂಧ ಸೋಮವಾರ ನಡೆದ ಸಭೆಯಲ್ಲಿ ಸಭಾಧ್ಯಕ್ಷರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆದುದರಿಂದ ತಮ್ಮ ಇಲಾಖೆಯ ವತಿಯಿಂದ ಉತ್ತರಿಸಬೇಕಾದ ಪ್ರಶ್ನೆಗಳಿಗೆ ಉತ್ತರವನ್ನು ಸಕಾಲದಲ್ಲಿ ವಿಧಾನ ಮಂಡಲಕ್ಕೆ ಕಳುಹಿಸದೇ ಇರುವ ಬಗ್ಗೆ ಇಲಾಖಾ ಕಾರ್ಯದರ್ಶಿಗಳ ವಿವರಣೆಯನ್ನು ತಕ್ಷಣ ನೀಡಲು ಸೂಚಿಸಲಾಗಿದೆ. ಅಲ್ಲದೇ, ಉತ್ತರ ಕಳುಹಿಸದ ಸಂದರ್ಭದಲ್ಲಿ ಸಂಬಂಧ ಪಟ್ಟ ಶಾಸಕರಿಗೆ ಪ್ರತ್ಯೇಕ ಪತ್ರವನ್ನು ಕಳುಹಿಸಿ ಹಾಗೂ ಮಾಹಿತಿ ಒದಗಿಸುವ ನಿರ್ದಿಷ್ಟ ಸಮಯವನ್ನು ತಿಳಿಸುವಂತೆ ಸೂಚಿಸಿದ್ದಾರೆ.

## ಎಷ್ಟು ಉತ್ತರ ಬಂದಿವೆ ಪಟ್ಟಿ ಓದಿದ ಸ್ಪೀಕರ್

- ಸದಸ್ಯರ ಎಲ್ಲ ಪ್ರಶ್ನೆಗಳಿಗೂ ಉತ್ತರ ಸಿಗಲಿದೆ ಸಚಿವ ಡಾ.ಜಿ. ಪರಮೇಶ್ವರ್

ವಿಧಾನಸಭೆಯಲ್ಲಿ ಲಿಖಿತ ಪ್ರಶ್ನೆಗಳಿಗೆ ಉತ್ತರ ಬರುತ್ತಿಲ್ಲ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ಪೀಠದಿಂದ ಹೊರ ನಡೆದ ಬೆನ್ನಲ್ಲೇ ಸರ್ಕಾರ ಎಚ್ಚೆತ್ತುಕೊಂಡಿದ್ದು, ಸದನದಲ್ಲಿ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರ ನೀಡುವ ಪ್ರಕ್ರಿಯೆಯನ್ನು ಸುಧಾರಿಸಲಾಗುವುದು. ನಾಳೆಯಿಂದ ಎಲ್ಲವೂ ಸರಿಹೋಗಲಿದೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದ ಬೆನ್ನಲ್ಲೆ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಯಾವ ಇಲಾಖೆಯಿಂದ ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಪೈಕಿ ಎಷ್ಟು ಉತ್ತರ ಬಂದಿವೆ, ಎಷ್ಟು ಉತ್ತರ ಬಂದಿಲ್ಲ ಎಂಬ ಪಟ್ಟಿಯನ್ನು ಓದಿದರು.

ಪ್ರಶ್ನೋತ್ತರ ಅವಧಿಯ ಸಂದರ್ಭದಲ್ಲಿ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಸದನದಲ್ಲಿ ಉತ್ತರಿಸಬೇಕಾದ 131 ಪ್ರಶ್ನೆಗಳ ಪೈಕಿ 54 ಪ್ರಶ್ನೆಗಳಿಗೆ ಉತ್ತರ ಒದಗಿಸಲಾಗಿದೆ ಎಂದಾಗ ವಿಪಕ್ಷಗಳು ಇಂದೂ ಸಹ ಹೆಚ್ಚು ಉತ್ತರಗಳು ಬಂದಿಲ್ಲ ಎಂದವು. ಗೃಹ ಸಚಿವರು, ಸಭಾಧ್ಯಕ್ಷರು ನಿನ್ನೆ ನಮಗೆ ಸೂಚನೆ ಕೊಟ್ಟಿದ್ದಾರೆ. ಅದರಂತೆ ಮುಖ್ಯಮಂತ್ರಿಗಳು ಸಹ ಎಲ್ಲ ಸಚಿವರುಗಳಿಗೆ ಸೂಚನೆ ಕೊಟ್ಟಿದ್ದಾರೆ. ನಾಳೆಯಿಂದ ಎಲ್ಲ ಸರಿ ಹೋಗುತ್ತದೆ. ಸದಸ್ಯರ ಎಲ್ಲರ ಪ್ರಶ್ನೆಗಳಿಗೂ ಉತ್ತರ ಸಿಗಲಿದೆ ಎಂದರು. ಈ ಹಂತದಲ್ಲಿ ಮಧ್ಯ ಪ್ರವೇಶಿಸಿ ಮಾತನಾಡಿದ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ರೋಗಿಗಳಿಗೆ ಮದ್ದು ನೀಡಿದ ನಂತರ ಆರೋಗ್ಯ ಸುಧಾರಿಸಲು 2–3 ದಿನಗಳು ಬೇಕಾಗುತ್ತದೆ. ಆದೇ ರೀತಿ ನಾವು ನಿನ್ನೆ ಸರ್ಕಾರಕ್ಕೆ ಸೂಚನೆ ಕೊಟ್ಟಿದ್ದೇನೆ. ಎಲ್ಲವೂ ಸರಿ ಹೋಗಬಹುದು. ಎಂದರು. ಆಗ ಗೃಹ ಸಚಿವರು ಸಂಬಂಧಪಟ್ಟ ಅಧಿಕಾರಿಗಳಿಗೂ ಸೂಚನೆ ನೀಡಲಾಗಿದೆ ಎಂದರು. ಗೃಹ ಸಚಿವ ಡಾ.ಜಿ. ಪರಮೇಶ್ವರ್ ನಾಳೆಯಿಂದ ಸದನದಲ್ಲಿ ಉತ್ತರಿಸುವ ಪ್ರಶ್ನೆಗಳಿಗೆ ಸಮರ್ಪಕ ಉತ್ತರಗಳು ಇರಲಿವೆ ಎಂದು ಹೇಳಿದ ನಂತರ ಸಭಾಧ್ಯಕ್ಷರು, ಯಾವ ಇಲಾಖೆಗೆ ಎಷ್ಟು ಪ್ರಶ್ನೆ ಕೇಳಲಾಗಿತ್ತು, ಎಷ್ಟು ಉತ್ತರ ಬಂದಿದೆ ಎಂಬ ಪಟ್ಟಿಯನ್ನು ಓದಿದರು.

## ಗಮನ ಸೆಳೆಯುವ ಸೂಚನೆಗಳಿಗೆ ನಿಗದಿಯೊಳಗೆ ಉತ್ತರ ನೀಡಿ

### ಅಧಿಕಾರಿಗಳಿಗೆ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಸೂಚನೆ

**ಬೆಂಗಳೂರು, ಮಾ.17:** ವಿಧಾನಸಭೆಯ ಕಲಾಪದಲ್ಲಿ ಸರ್ಕಾರದ ಗಮನ ಸೆಳೆಯಲು ಶಾಸಕರು ಪ್ರಶ್ನೆಗಳನ್ನು ಸಲ್ಲಿಸುತ್ತಾರೆ. ಆದರೆ ನಿಗದಿತ ಸಮಯದಲ್ಲಿ ಇಲಾಖೆಗಳು ಉತ್ತರಗಳನ್ನು ಸಲ್ಲಿಸುತ್ತಿಲ್ಲ . ಮುಂದಿನ ದಿನಗಳಲ್ಲಿ ನಿಗದಿತ ಸಮಯಕ್ಕೆ ಉತ್ತರಗಳನ್ನು ನೀಡುವಂತೆ ಸಭಾಧ್ಯಕ್ಷ ಯು.ಟಿ.ಖಾದರ್ ವಿಧಾನಸಭೆಯಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕಲಾಪದ ವೇಳೆ ವಿವಿಧ ಇಲಾಖೆಗಳು ನಿಗದಿತ ಸಮಯಕ್ಕೆ ಉತ್ತರಗಳನ್ನು ನೀಡುತ್ತಿಲ್ಲ. ಯಾವ ಯಾವ ಇಲಾಖೆಯಲ್ಲಿ ಎಷ್ಟೆಷ್ಟು ಉತ್ತರಗಳು ಸಲ್ಲಿಸಲ್ಪಟ್ಟಿವೆ ಎಂದು ಸದನಕ್ಕೆ ವಿವರಿಸಿದರು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ 22 ಗಮನ ಸೆಳೆಯುವ ಸೂಚನೆಗೆ 6 ಉತ್ತರಗಳನ್ನು, ಆರ್ಥಿಕ ಇಲಾಖೆ 33ಕ್ಕೆ 6 ಉತ್ತರಗಳು, ಪರಿಶಿಷ್ಟ ಜಾತಿ ಮತ್ತು ಪಂಗಡ ಇಲಾಖೆ 9ಕ್ಕೆ ಒಂದು ಉತ್ತರ ನೀಡಿಲ್ಲ, ಯುವ ಸಬಲೀಕರಣ ಇಲಾಖೆ 10ಕ್ಕೆ ಒಂದೂ ಉತ್ತರ ನೀಡಿಲ್ಲ. ಸಹಕಾರ ಇಲಾಖೆ 12ಕ್ಕೆ ಒಂದೂ ಉತ್ತರ ನೀಡಿಲ್ಲ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಒಂದಕ್ಕೆ ಒಂದು ಉತ್ತರ ನೀಡಿದೆ. ಜಲಸಂಪನ್ಮೂಲ ಇಲಾಖೆ 33ಕ್ಕೆ 4, ನಗರಾಭಿವೃದ್ಧಿ ಇಲಾಖೆ 23ಕ್ಕೆ 8 ಉತ್ತರಗಳನ್ನು, ಒಳಾಡಳಿತ 35ಕ್ಕೆ 26 ಉತ್ತರಗಳನ್ನು, ಕಾನೂನು ಇಲಾಖೆ 5ಕ್ಕೆ 3 ಉತ್ತರಗಳನ್ನು, ಪ್ರವಾಸೋದ್ಯಮ ಇಲಾಖೆ 25ಕ್ಕೆ ಒಂದು ಉತ್ತರವನ್ನು, ಸಣ್ಣ ನೀರಾವರಿ ಇಲಾಖೆ 19ಕ್ಕೆ 13 ಉತ್ತರಗಳನ್ನು ನೀಡಿದೆ. ಮಾಹಿತಿ ತಂತ್ರಜ್ಞಾನ ಇಲಾಖೆ 2 ಗಮನ ಸೆಳೆಯುವ ಸೂಚನೆಗೆ 2ಕ್ಕೆ ಉತ್ತರ ನೀಡಲಾಗಿದೆ ಎಂದು ಸಭಾಧ್ಯಕ್ಷರು ತಿಳಿಸಿದರು. ಈ ಕುರಿತು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ನಿಗದಿತ ಸಮಯಕ್ಕೆ ಉತ್ತರಗಳನ್ನು ನೀಡಲು ಗಮನಹರಿಸುವಂತೆ ಸೂಚಿಸಿದರು.




ಲೆಟ್ಸ್ ನ್ಯಾಷನಲ್ ಮೊಬಿಲಿಟಿ ವತಿಯಿಂದ ಹೈದರಾಬಾದ್‌ನ ಖಾಸಗಿ ಹೋಟೆಲ್‌ನಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಲೆಟ್ಸ್ ಮೊಬಿಲಿಟಿ ಎಕ್ಸಲೆನ್ಸ್ 2026 ರಾಷ್ಟ್ರೀಯ ಪ್ರಶಸ್ತಿ ಕೆಎಸ್‌ಆರ್‌ಟಿಸಿಯ ನಿರ್ದೇಶಕಿ ಕೆ.ಎಂ. ಗಾಯತ್ರಿ ಅವರು ಸ್ವೀಕರಿಸಿದರು. ತೆಲಂಗಾಣ ಸರ್ಕಾರದ ಸಾರಿಗೆ ಇಲಾಖೆ ಆಯುಕ್ತ ಕೆ. ಇಳಂಬರಿತಿ, ಮತ್ತು ಎಲೆಟ್ಸ್ ಟೆಕ್ನೋ ಮೀಡಿಯಾ ಸಂಸ್ಥಾಪಕ, ಸಿಇಓ ಹಾಗೂ ಮುಖ್ಯ ಸಂಪಾದಕ ಡಾ. ರವಿ ಗುಪ್ತಾ ಮತ್ತಿತರರು ಇದ್ದರು.

## ಕೇಂದ್ರದ ಅನುದಾನ ಸಕಾಲದಲ್ಲಿ ಬಳಸದೆ ವಾಪಸ್: ಅಶೋಕ್ ವಾಗ್ದಾಳಿ

**ಬೆಂಗಳೂರು, ಮಾ.17:** ಸಕಾಲದಲ್ಲಿ ಕೇಂದ್ರ ಸರ್ಕಾರದ ಅನುದಾನವನ್ನು ಬಳಸದೆ ರಾಜ್ಯ ಸರ್ಕಾರ ವಾಪಸ್ ಕಳಿಸುತ್ತಿದೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.



ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಅಭಿವೃದ್ಧಿ ಶೂನ್ಯ ಕಾಂಗ್ರೆಸ್ ಸರ್ಕಾರಕ್ಕೆ ಕೇಂದ್ರ ಕೊಟ್ಟ ಹಣವನ್ನೂ ಬಳಸಲಾಗದ ದೌರ್ಭಾಗ್ಯ. ದೇವರು ಕೊಟ್ಟರೂ ಪೂಜಾರಿ ಕೊಡಲಿಲ್ಲ ಎನ್ನುವಂತಿದೆ ರಾಜ್ಯ ಕಾಂಗ್ರೆಸ್ ಸರ್ಕಾರದ ಸ್ಥಿತಿ ಎಂದು ಟೀಕಿಸಿದ್ದಾರೆ.

ಒಂದೆಡೆ ರಾಜ್ಯದ ಖಜಾನೆ ಖಾಲಿ ಮಾಡಿ, ಅಭಿವೃದ್ಧಿ ಕೆಲಸಗಳಿಗೆ ನಯಾಪೈಸೆ ಅನುದಾನ ನೀಡಲು ಯೋಗ್ಯತೆ ಇಲ್ಲದೆ ದಿವಾಳಿಯಾಗಿರುವ ಈ ಸರ್ಕಾರ, ಇನ್ನೊಂದೆಡೆ ಕೇಂದ್ರದ ಅನುದಾನವನ್ನು ಬಳಸಲಾಗದೆ ವಾಪಸ್ ನೀಡುತ್ತಿದೆ ಎಂದು ಆಪಾದಿಸಿದ್ದಾರೆ.

ಸಿಟೀಸ್ 2.0 ಯೋಜನೆಯಡಿ ನಗರಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ್ದ ಮೊದಲ ಕಂತಿನ ಹಣವನ್ನು ಬಳಸುವಲ್ಲಿ ವಿಫಲವಾಗಿರುವ ಕಾಂಗ್ರೆಸ್ ಸರ್ಕಾರ, ಈಗ ಆ ಹಣವನ್ನು ಕೇಂದ್ರಕ್ಕೆ ವಾಪಸ್ ನೀಡಬೇಕಾದ ಪರಿಸ್ಥಿತಿ ತಂದೊಡ್ಡಿದೆ. ಇದು ಕೇವಲ ಆಡಳಿತಾತಕ ವೈಫಲ್ಯವಲ್ಲ, ರಾಜ್ಯದ ಜನತೆಗೆ ಮಾಡುತ್ತಿರುವ ಮಹಾ ದ್ರೋಹ ಎಂದಿದ್ದಾರೆ.

ಬರೀ ಡಿನ್ನರ್ ಮೀಟಿಂಗ್‌ಗಳು, ಔತಣಕೂಟಗಳು, ರಾಜಕೀಯ ಮೇಲಾಟಗಳಲ್ಲೇ ಕಾಲ ಕಳೆಯುತ್ತಿರುವ ಸಿಎಂ ಹಾಗೂ ಡಿಸಿಎಂ ಅವರೇ, ಅನುದಾನ ಬಳಸಲು ನಿಮ ಸರ್ಕಾರಕ್ಕೆ ಯೋಗ್ಯತೆ ಇಲ್ಲದಿದ್ದರೆ ಅಧಿಕಾರ ಬಿಟ್ಟು ತೊಲಗಿ. ನಿಮ ಈ ನಿಷ್ಕ್ರಿಯತೆಯಿಂದಾಗಿ ರಾಜ್ಯದ ಅಭಿವೃದ್ಧಿ ಹಳಿ ತಪ್ಪುತ್ತಿದೆ. ಈ ಭ್ರಷ್ಟ ಮತ್ತು ಅದಕ್ಷ ಕಾಂಗ್ರೆಸ್ ಸರ್ಕಾರ ತೊಲಗುವವರೆಗೂ ಕರ್ನಾಟಕದ ಪ್ರಗತಿ ಸಾಧ್ಯವೇ ಇಲ್ಲ. ಇದು ಮಾತ್ರ ಗ್ಯಾರೆಂಟಿ ಎಂದು ಅವರು ವ್ಯಂಗ್ಯವಾಡಿದ್ದಾರೆ.

## ಆಕ್ಷೇಪಾರ್ಹ ಹೇಳಿಕೆ: ಶ್ರೀಲಂಕಾ ಸುಪ್ರೀಂ ನ್ಯಾಯಮೂರ್ತಿ ಅರ್ಜಿಗೆ ಗೂಗಲ್, ಕೇಂದ್ರ ಐಟಿ ಸಚಿವಾಲಯ ಆಕ್ಷೇಪ

**ಬೆಂಗಳೂರು, ಮಾ.17:** ತಮ್ಮ ವಿರುದ್ಧ ಆಕ್ಷೇಪಾರ್ಹ ಹೇಳಿಕೆಗಳನ್ನು ಪ್ರಕಟಿಸಿರುವ ಕ್ರಮ ಪ್ರಶ್ನಿಸಿ ಶ್ರೀಲಂಕಾ ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಎಎಚ್‌ಎಂಡಿ ನವಾಜ್ ಸಲ್ಲಿಸಿರುವ ಅರ್ಜಿಗೆ ಗೂಗಲ್ ಎಲ್‌ಎಲ್‌ಸಿ ಮತ್ತು ಕೇಂದ್ರ ಮಾಹಿತಿ ತಂತ್ರಜ್ಞಾನ ಸಚಿವಾಲಯ ಆಕ್ಷೇಪ ವ್ಯಕ್ತಪಡಿಸಿವೆ.

ಶ್ರೀಲಂಕಾ ನ್ಯಾಯಮೂರ್ತಿ ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಸಚ್ಚಿನ್ ಶಂಕರ್ ಮಗದಂ ಅವರಿದ್ದ ನ್ಯಾಯಪೀಠ ನಡೆಸಿತು. ವಿಚಾರಣೆ ವೇಳೆ ಗೂಗಲ್ ಪರ ವಕೀಲರು, ಶ್ರೀಲಂಕಾ ನ್ಯಾಯಮೂರ್ತಿ ಅವರು ಕರ್ನಾಟಕ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸುವುದಕ್ಕೆ ಅವಕಾಶವಿದೆಯೇ, ಅರ್ಜಿದಾರರ ವಿರುದ್ಧದ ಆರೋಪ ಪ್ರಕಟಣೆಗಳು ಶ್ರೀಲಂಕಾದಲ್ಲಿ ಪ್ರಕಟವಾಗಿವೆ, ಗೂಗಲ್ ಅಮೆರಿಕದಲ್ಲಿ ನೋಂದಾಯಿತ ಕಂಪನಿ ಆಗಿದೆ. ಇಂತಹ ಅರ್ಜಿಗಳನ್ನು ಪರಿಗಣಿಸಿದರೆ ಮತ್ತಷ್ಟು ಅರ್ಜಿಗಳು ಸಲ್ಲಿಕೆಯಾಗುವ ಸಾಧ್ಯತೆಯಿದೆ ಎಂದು ಪೀಠಕ್ಕೆ ವಿವರಿಸಿದರು.

ಕೇಂದ್ರ ಸರ್ಕಾರದ ಪರ ವಕೀಲರು, ಬೇರೊಂದು ದೇಶದ ನ್ಯಾಯಾಧೀಶರು ಕರ್ನಾಟಕ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಕೆಗೆ ಅವಕಾಶವಿಲ್ಲ. ಈ ಅರ್ಜಿ ಇಲ್ಲಿ ವಿಚಾರಣೆ ನಡೆಸುವುದಕ್ಕೆ ಸಾಧ್ಯವೇ ಎಂಬುದರ ಬಗ್ಗೆ ಅರ್ಜಿದಾರರು ಸಮರ್ಪಕವಾಗಿ ವಿವರಿಸಿಲ್ಲ ಎಂದು ತಿಳಿಸಿದರು.

ಅರ್ಜಿದಾರರ ಪರ ವಕೀಲರು, ಭಾರತ ಸಂವಿಧಾನದ ಪರಿಚ್ಛೇದ 14(ಸಮಾನತೆ) ಭಾರತೀಯ ನಾಗರಿಕರು ಮಾತ್ರವಲ್ಲದೇ, ಇತರ ಭಾಗಗಳ ನಾಗರೀಕರಿಗೂ ಅನ್ವಯವಾಗಲಿದೆ. ಜಗತ್ತಿನ ಯಾವ ನ್ಯಾಯಮೂರ್ತಿಯನ್ನೂ ಅವಹೇಳನಾತ್ಮಕ ವಿಷಯಗಳಿಂದ ಬೆದರಿಸಲು ಅವಕಾಶ ನೀಡಬಾರದು ಎಂದು ಪೀಠಕ್ಕೆ ತಿಳಿಸಿದರು.

ಅಲ್ಲದೇ, ಆಕ್ಷೇಪಾರ್ಹ ಹೇಳಿಕೆಗಳು ಗೂಗಲ್‌ನಲ್ಲಿ ಪ್ರಕಟವಾಗಿದ್ದು, ಗೂಗಲ್ ಮಧ್ಯವರ್ತಿ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. ತನ್ನ ವೇದಿಕೆಯ ಮೂಲಕ ಅಪವಾದಾತ್ಮಕ ವಿಷಯಗಳು ಭಾರತ ಸೇರಿದಂತೆ ಹಲವು ದೇಶಗಳಲ್ಲಿ ಹರಡಲು ಕಾರಣವಾಗಿದೆ. ಈ ಕುರಿತು ದೂರು ನೀಡಿದ ನಂತರ ಸಮಂಜಸವಾದ ಸಮಯದೊಳಗೆ ವಿಷಯವನ್ನು ತೆಗೆದುಹಾಕದಿದ್ದರೆ ಗೂಗಲ್ ಹೊಣೆಗಾರಿಯಾಗುತ್ತದೆ ಎಂದು ವಿವರಿಸಿದರು., ಪ್ರಕರಣ ವಿಚಾರಣಾ ಹಂತದಲ್ಲಿರುವಾಗಲೇ ಆಕ್ಷೇಪಾರ್ಹ ಹೇಳಿಕೆಗಳ ಪ್ರಕಟ ಮಾಡಲಾಗುತ್ತಿದೆ. ಇದು ನ್ಯಾಯಾಲಯಕ್ಕೆ ಅಪಮಾನ ಮಾಡಿದಂತಾಗಲಿದೆ. ಒಬ್ಬ ನ್ಯಾಯಮೂರ್ತಿಗೆ ಆಗುವ ಅವಮಾನ ಇಡೀ ನ್ಯಾಯಾಂಗ ವ್ಯವಸ್ಥೆಗೆ ಆಗುವ ಅವಮಾನವೇ ಆಗಿದೆ. ನ್ಯಾಯಾಂಗದ ಗೌರವವನ್ನು ಕಾಪಾಡಬೇಕು ಎಂದು ಪೀಠಕ್ಕೆ ವಿವರಿಸಿದರು.

## ಶಕ್ತಿ ಯೋಜನೆಯಿಂದ ಮಹಿಳೆಯರ ಏಕಾಂಗಿ ಬಸ್ ಪ್ರಯಾಣ ಶೇ.70ರಷ್ಟು ಹೆಚ್ಚಳ; ರೆಡ್‌ಬಸ್ ಸಮೀಕ್ಷೆ

**ನವದೆಹಲಿ, ಮಾ.17:** ಇತ್ತೀಚೆಗಿನ ದಿನಗಳಲ್ಲಿ ಭಾರತದಲ್ಲಿ ಮಹಿಳೆಯರು ಅದರಲ್ಲೂ ಜೆನ್ ಝೀ ಯುವತಿಯರು ಉದ್ಯೋಗ, ಶಿಕ್ಷಣ ಹಾಗೂ ಪ್ರವಾಸಕ್ಕಾಗಿ ಇಂಟರ್ ಸಿಟಿ ಪ್ರಯಾಣಕ್ಕಾಗಿ ಹೆಚ್ಚಾಗಿ ಬಸ್ ಪ್ರಯಾಣವನ್ನೇ ಬಳಸುತ್ತಾರೆ ಎಂದು ರೆಡ್ ಬಸ್ ಪಿಂಕ್ ಸಮೀಕ್ಷಾ ವರದಿ ಹೇಳಿದೆ. ಕಳೆದ ಕೆಲವು ವರ್ಷಗಳಿಂದ ಪ್ರಯಾಣದ ಸಂಖ್ಯೆಯೂ ಗಮನಾರ್ಹವಾಗಿ ಹೆಚ್ಚಳವಾಗಿದೆ ಎಂದು ಕೂಡ ಹೇಳಿದೆ.



ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಮಹತ್ವದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯ ಬಗ್ಗೆ ಭಾರಿ ದೊಡ್ಡ ಮಟ್ಟದಲ್ಲಿ ಪರ–ವಿರೋಧ ಅಭಿಪ್ರಾಯಗಳು ಕೇಳಿ ಬಂದಿದ್ದವು. ಉಚಿತ ಯೋಜನೆಗಳ ಬಗ್ಗೆ ಬಿಜೆಪಿಯಂತೂ ತೀವ್ರ ಟೀಕಿಸಿತ್ತು. ಟೀಕಿಸಿದ್ದವರಲ್ಲಿ ಬಿಜೆಪಿ ನಾಯಕಿಯರೂ ಇದ್ದರು. ಶಕ್ತಿ ಯೋಜನೆಯಿಂದಾಗಿ ಮಹಿಳೆಯರು ಹೆಚ್ಚಾಗಿ ಸರ್ಕಾರಿ ಬಸ್‌ನಲ್ಲಿ ಪ್ರಯಾಣಿಸುತ್ತಿರುವುದು ಈಗ ದಾಖಲೆ. ರೆಡ್ ಬಸ್ ನಡೆಸಿದ ಈ ಸಮೀಕ್ಷೆ ರಾಜ್ಯ ಕಾಂಗ್ರೆಸ್ ಸರ್ಕಾರದ ಶಕ್ತಿ ಯೋಜನೆಯನ್ನು ಪ್ರಶಂಸಿಸುವಂತಿದೆ. ಇನ್ನೊಂದೆಡೆ ಸರ್ಕಾರದ ಉಚಿತ ಯೋಜನೆಗೂ ಮತ್ತು ರೆಡ್ ಬಸ್ ನಡೆಸಿರುವ ಸಮೀಕ್ಷಾ ವರದಿಗೂ ಅಜಗಜಾಂತರವಿದೆ ಎಂದು ಕೂಡ ಹೇಳಲಾಗುತ್ತಿದೆ.

ಅದೇನೇ ಇರಲಿ, ಸರ್ಕಾರೇತರ ಸಂಸ್ಥೆಯಾಗಿರುವ ರೆಡ್‌ಬಸ್ ಮಹಿಳೆಯರ ಬಸ್ ಪ್ರಯಾಣದ ಬಗ್ಗೆ ಅಂತರರಾಷ್ಟ್ರೀಯ ಮಹಿಳಾ ವಾರದ ಸಂದರ್ಭದಲ್ಲಿ ಬಿಡುಗಡೆ ಮಾಡಿರುವ ಸಮೀಕ್ಷಾ ವರದಿಯು, ಭಾರತದಾದ್ಯಂತ ಮಹಿಳೆಯರು ಬಸ್ ಪ್ರಯಾಣವನ್ನು ಹೆಚ್ಚಾಗಿ ಬಳಸುತ್ತಿರುವ ಪ್ರವೃತ್ತಿಯನ್ನು ಎತ್ತಿ ತೋರಿಸುತ್ತದೆ.

ಅದರಲ್ಲೂ ಯುವತಿಯರು ಹೆಚ್ಚಾಗಿ ಪ್ರವಾಸದ ದೃಷ್ಟಿಯಲ್ಲಿ ಹೆಚ್ಚಾಗಿ ಏಕಾಂಗಿ ಪ್ರಯಾಣಗಳನ್ನು ಬಸ್ಸುಗಳಲ್ಲೇ ಮಾಡುತ್ತಿದ್ದಾರೆ ಎಂದು ಹೇಳಿದೆ.

2019 ಮತ್ತು 2025ರ ನಡುವೆ ಭಾರತದಲ್ಲಿ ಮಹಿಳೆಯರ ಬಸ್ ಪ್ರಯಾಣವು 136%ರಷ್ಟು ಏರಿಕೆಯಾಗದೆ ಎಂದು ವರದಿ ಬಹಿರಂಗಪಡಿಸಿದೆ. ಮಾತ್ರವಲ್ಲದೇ, ಇದು ಅದೇ ಅವಧಿಯಲ್ಲಿ ಬಸ್ಸುಗಳಲ್ಲಿ ಪ್ರಯಾಣ ಬೆಳೆಸಿದ ಒಟ್ಟಾರೆ ಪ್ರಯಾಣಿಕರ ಪ್ರಮಾಣಕ್ಕಿಂತ ದುಪ್ಪಟ್ಟಾಗಿದೆ. ಈ ಹಿಂದೆ ಈ ಪ್ರಮಾಣ 72%ರಷ್ಟಿತ್ತು. ಇಂಟರ್‌ಸಿಟಿ ಬಸ್ ಪ್ರಯಾಣಗಳಲ್ಲಿ ಅಂದರೆ, ನಗರದಿಂದ ನಗರಕ್ಕೆ ಪ್ರಯಾಣ ಬೆಳೆಸುವ ಪ್ರಮಾಣದಲ್ಲಿ ಹೆಚ್ಚಳವಾಗಿದೆ. 2019ರಲ್ಲಿ ಶೇ. 23ರಷ್ಟಿದ್ದದ್ದು ಈಗ ಶೇ.33ರಷ್ಟಕ್ಕೆ ಏರಿದೆ (ಪ್ರತಿ ಮೂವರು ಪ್ರಯಾಣಿಕರಲ್ಲಿ ಒಬ್ಬರು ಮಹಿಳಾ ಪ್ರಯಾಣಿಕರು). ಇದು ಮಹಿಳೆಯರು ಹಾಗೂ ಯುವತಿಯರು ಏಕಾಂಗಿಯಾಗಿ, ಸ್ವತಂತ್ರರಾಗಿ ಪ್ರಯಾಣ ಬೆಳೆಸುವ ಪ್ರವೃತ್ತಿ ಹೆಚ್ಚಳವಾಗಿರುವುದನ್ನು ಸೂಚ್ಯವಾಗಿ ಹೇಳುತ್ತದೆ.

ಹೌದು, ಇದರಲ್ಲಿ ದಕ್ಷಿಣ ಭಾರತದ ಮಹಿಳೆಯರೇ ಹೆಚ್ಚಿನ ಪಾಲನ್ನು ಪಡೆದಿದ್ದಾರೆ ಎನ್ನುವುದನ್ನು ಗಮನಾರ್ಹ. 2019ರಲ್ಲಿ ಶೇ.24ರಷ್ಟಿದ್ದ ಮಹಿಳಾ ಪ್ರಯಾಣಿಕರ ಪ್ರಮಾಣ 2025ರಲ್ಲಿ ಶೇ.34ಕ್ಕೆ ಏರಿಕೆಯಾಗಿದೆ. ಈ ಪ್ರವೃತ್ತಿ ಉತ್ತರ, ಪೂರ್ವ ಹಾಗೂ ಪಶ್ಚಿಮ ಭಾರತದ ಮಹಿಳೆಯರಲ್ಲೂ ಗಣನೀಯವಾಗಿ ಏರಿಕೆಯಾಗುತ್ತಿದೆ ಎಂದು ವರದಿ ವಿವರಿಸಿದೆ. ಇದು ರಾಷ್ಟ್ರವ್ಯಾಪಿ ಮಹಿಳೆಯರ ಸಬಲೀಕರಣದ ಹೊಸ ಮಜಲು ಎಂದೇ ಇದನ್ನು ವಿಶ್ಲೇಷಿಸಲಾಗುತ್ತಿದೆ. ಇನ್ನು, ಸೋಲೋ ಟ್ರಿಪ್‌ಗಳನ್ನು ಹೆಚ್ಚಾಗಿ ಜೆನ್ ಝೀಗಳು ಹೆಚ್ಚಾಗಿ ಇಷ್ಟಪಡುತ್ತಾರೆ ಎಂದು ಇದು ಹೇಳಿದ್ದು, 14ರಿಂದ 29 ವರ್ಷಗಳ ಯುವತಿಯರೇ ಹೆಚ್ಚಾಗಿ ಬಸ್ ಪ್ರಯಾಣವನ್ನು ಹೆಚ್ಚಾಗಿ ಬಳಸುತ್ತಾರೆ ಎನ್ನುವುದು ಇಲ್ಲಿ ಮುಖ್ಯಾಂಶ. ಒಟ್ಟು ಶೇ.68ರಷ್ಟು ಇರುವ ಮಹಿಳಾ ಏಕಾಂಗಿ ಪ್ರಯಾಣಿಕರಲ್ಲಿ ಶೇ.60ರಷ್ಟು 14–29ರ ವಯಸ್ಸಿನ ಯುವತಿಯರು ಸೋಲೋ ಟ್ರಿಪ್‌ಗಳನ್ನು ಇಷ್ಟ ಪಡುತ್ತಾರೆ ಎನ್ನುವುದು ಉಲ್ಲೇಖನೀಯ. ಪ್ರಮುಖಾಂಶವೆಂದರೇ, ವರ್ಷದಲ್ಲಿ ಐದು ಬಾರಿ ಪ್ರಯಾಣ ಬೆಳೆಸಿದರೇ, ಆ ಪೈಕಿ ಎರಡು ಪ್ರಯಾಣವನ್ನು ಏಕಾಂಗಿಯಾಗಿಯೇ ಮಾಡಲು ಇಚ್ಛಿಸಿದ್ದಾರೆ. 500 ಕಿ.ಮೀಟರ್‌ಗಳಿಗಿಂತ ಹೆಚ್ಚು ಅಂತರವಿರುವ ಕಡೆಗಳಿಗೆ ಹೆಚ್ಚು ಯುವತಿಯರು ಪ್ರಯಾಣ ಬೆಳೆಸಲು ಇಚ್ಛಿಸುತ್ತಾರೆಂದು ಸಮೀಕ್ಷಾ ವರದಿ ಹೇಳಿರುವುದು, ಸುದೀರ್ಘ ಪ್ರಯಾಣದ ಸುರಕ್ಷತೆ ಮತ್ತು ವಿಶ್ವಾಸಾರ್ಹತೆಯನ್ನು ಹೆಚ್ಚಿಸಿದೆ ಎಂದು ರೆಡ್ ಬಸ್ ಪಿಂಕ್ ಸಮೀಕ್ಷಾ ವರದಿ ಹೇಳಿದೆ. ಇನ್ನು, ಅಸ್ಸಾಂ, ಕೇರಳ, ಪಂಜಾಬ್, ಆಂಧ್ರಪ್ರದೇಶ, ತೆಲಂಗಾಣ, ಪಂಜಾಬ್, ಪುದುಚೆರಿ, ಅರುಣಾಚಲ ಪ್ರದೇಶಗಳಿಗೆ ಹೆಚ್ಚಾಗಿ ಜೆನ್ ಝೀ ಯುವತಿರುವ ಪ್ರವಾಸಕ್ಕೆ ತೆರಳಲು ಬಯಸುತ್ತಾರೆ ಎಂದೂ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಸಮೀಕ್ಷಾ ವರದಿ, ಮಹಿಳೆಯರ ವಿಭಿನ್ನ ಪ್ರಯಾಣದ ನಡೆಗಳನ್ನೂ ಸಹ ಒತ್ತಿ ಹೇಳಿದೆ. ಪುರುಷರಿಗೆ ಹೋಲಿಕೆ ಮಾಡಿದರೇ, ಮಹಿಳೆಯರು ತಮ್ಮ ಪ್ರಯಾಣದ ಬಗ್ಗೆ ಪೂರ್ವ ಯೋಜನೆಗಳನ್ನು ಮಾಡಿಕೊಳ್ಳುತ್ತಾರೆ. ಬಸ್ ಟಿಕೆಟ್ ಬುಕಿಂಗ್ ಮಾಡುವಾಗಲೂ ಸುರಕ್ಷತೆ ಮತ್ತು ಬಸ್ ಸಂಸ್ಥೆಯ ವಿಶ್ವಾಸಾರ್ಹತೆಯನ್ನು ಆದ್ಯತೆಯ ಆಧಾರದಲ್ಲಿ ತುಲನೆ ಮಾಡಿ ನೋಡಿ ಬಸ್ ಟಿಕೆಟ್ ಬುಕ್ ಮಾಡುತ್ತಾರೆ.

## ನಾಡು, ನುಡಿ, ಜಲ ವಿಚಾರದಲ್ಲಿ ಪಕ್ಷಭೇದ ಮರೆತು ಒಗ್ಗಟ್ಟು: ಬೊಮ್ಮಾಯಿ ಸಂಕಲ್ಪ

**ನವದೆಹಲಿ, ಮಾ.17:** ನಾಡು, ನುಡಿ, ಜಲದ ವಿಚಾರವಾಗಿ ರಾಜ್ಯದ ಹಿತದೃಷ್ಟಿಯಿಂದ ಪಕ್ಷಭೇದ ಮರೆತು ಒಂದಾಗಿರುತ್ತೇವೆ. ಸಮಸ್ಯೆಗಳ ನಿವಾರಣೆಗೆ ಕೇಂದ್ರದ ಮೇಲೆ ಒತ್ತಡ ಹಾಕುತ್ತೇವೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಹಳ ದಿನಗಳಿಂದ ನನೆಗುದಿಗೆ ಬಿದ್ದ ಎತ್ತಿನಹೊಳೆ ಯೋಜನೆ ಕುರಿತು ಅರಣ್ಯ ಇಲಾಖೆ ಅನುಮತಿ ಸಿಕ್ಕಿದೆ. ಇವತ್ತು ಸಂಸದರ ಸಭೆ ಕರೆದಿದ್ದರು. ಆದರೆ, ಕರ್ನಾಟಕದಲ್ಲೂ ಉ ಪ ಚು ನಾ ವ ಣೆ ಘೋಷಣೆಯಾಗಿದೆ. ಅದೇ ಕ್ಷೇತ್ರಗಳಲ್ಲಿ ಈ ಯೋಜನೆಗಳು ಬರಲಿವೆ. ಎಷ್ಟರಮಟ್ಟಿಗೆ ಮಾತಾಡಬೇಕು ಎನ್ನುವುದು ತಾಂತ್ರಿಕ ಸಮಸ್ಯೆ ಇದೆ. ಆದರೆ, ರಾಜ್ಯದ ಹಿತದೃಷ್ಟಿಯಿಂದ ಏನು ಮಾಡಬೇಕು ಅದನ್ನು ಮಾಡುತ್ತೇವೆ. ಸಂಸತ್‌ನಲ್ಲಿ ಎಲ್ಲಾ ಯೋಜನೆಗಳ ಬಗ್ಗೆ ಮಾತಾಡಿದ್ದೇನೆ. ಈಗ ರಾಜ್ಯ ಸರ್ಕಾರ ಯೋಜನೆಗಳ ಸದ್ಯದ ಸ್ಥಿತಿಯ ಬಗ್ಗೆ ವಿವರಣೆ ನೀಡಿದ ನಂತರ ಅವುಗಳ ನಿವಾರಣೆಗೆ ನಾವು ಕೇಂದ್ರದ ಮೇಲೆ ಒತ್ತಡ ಹಾಕುತ್ತೇವೆ ಎಂದು ಹೇಳಿದರು.

ರಾಜ್ಯದಲ್ಲಿ ನಡೆಯುವ ಎರಡು ಕ್ಷೇತ್ರಗಳ ಉಪ ಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಅಭ್ಯರ್ಥಿಗಳ ಕುರಿತು ಈಗಾಗಲೇ ಕೋರ್ ಕಮಿಟಿಯಲ್ಲಿ ಚರ್ಚೆಯಾಗಿದೆ. ಎರಡು ಮೂರು ದಿನಗಳಲ್ಲಿ ಅಭ್ಯರ್ಥಿಗಳ ಆಯ್ಕೆ ಅಂತಿಮಗೊಳ್ಳಲಿದೆ ಎಂದು ಹೇಳಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮಾರ್ಚ್ 18, 2026, ಬುಧವಾರ

## ಒಳಪುಟಗಳಲ್ಲಿ

ಬೆಳಗಾವಿಯಲ್ಲಿ ಐಟಿ - ಸೆಮಿಕಂಡಕ್ಟರ್ ಪಾರ್ಕ್ ಸ್ಥಾಪನೆ: ಸಚಿವ ಪ್ರಿಯಾಂಕ್ ಖರ್ಗೆ- ಪು.4

ಇರಾನ್ ಶಾಂತಿ ಮಾತುಕತೆ ತಿರಸ್ಕರಿಸಿದ್ದರಿಂದ ಲಾರಿಜಾನಿ ಹತ್ಯೆ: ಇಸ್ರೇಲ್ ಹೇಳಿಕೆ, ಹಾರ್ಮುಜ್ ಉದ್ವಿಗ್ನತೆ- ಪು.8

ಭಾರತಕ್ಕೆ 46,000 ಟನ್ ಎಲ್‌ಪಿಜಿ ಹೊತ್ತು ತಂದ ನಂದಾದೇವಿ ಹಡಗು- ಪು.8

# ಕಾಬೂಲ್ ಆಸ್ಪತ್ರೆ ಮೇಲೆ ಪಾಕ್ ವಾಯುದಾಳಿ: 400 ಸಾವು

**ಕಾಬೂಲ್, ಮಾ. 17: ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷವು ಮತ್ತಷ್ಟು ತೀವ್ರಗೊಂಡಿದೆ. ಸೋಮವಾರ ರಾತ್ರಿ ಪಾಕಿಸ್ತಾನದ ಮಿಲಿಟರಿ ವಿಮಾನಗಳು ಅಫ್ಘಾನ್ ರಾಜಧಾನಿ ಕಾಬೂಲ್ನಲ್ಲಿರುವ ಬೃಹತ್ ಆಸ್ಪತ್ರೆಯ ಮೇಲೆ ವಾಯುದಾಳಿ ನಡೆಸಿವೆ. ದಾಳಿಯಲ್ಲಿ ಸುಮಾರು 400 ಮಂದಿ ಸಾವನ್ನಪ್ಪಿದ್ದಾರೆ ಎಂದು ಅಫ್ಘಾನ್ನ ತಾಲಿಬಾನ್ ಸರ್ಕಾರ ತಿಳಿಸಿದೆ.**

ಸುಮಾರು 2,000 ರೋಗಿಗಳನ್ನು ದಾಖಲಿಸಿಕೊಳ್ಳಬಹುದಾದ ಸಾಮರ್ಥ್ಯ ಹೊಂದಿರುವ ಕಾಬೂಲ್ನ ಉಮರ್ ಅಡಿಕ್ಷನ್ ಟ್ರೀಟ್ಮೆಂಟ್ ಆಸ್ಪತ್ರೆ ಮೇಲೆ ಪಾಕ್ ಭೀಕರ ದಾಳಿ ನಡೆಸಿದೆ. ಈ ದಾಳಿ ಇಡೀ ಜಗತ್ತನ್ನೇ ಬೆಚ್ಚಿಬೀಳಿಸಿದೆ. ನ್ಯಾಟೋ ತರಬೇತಿ ಕೇಂದ್ರವಾಗಿದ್ದ ಜಾಗವನ್ನು ಮಾದಕವಸ್ತು ಪುನರ್ವಸತಿ ಕೇಂದ್ರವಾಗಿ ಬದಲಾಗಿಸಲಾಗಿತ್ತು ಎಂದು ತಾಲಿಬಾನ್‌ನ ಉಪ ವಕ್ತಾರ ಹಮ್ದುಲ್ಲಾ ಫಿತ್ರಾತ್ ತಿಳಿಸಿದ್ದು, ದಾಳಿಯಲ್ಲಿ ಸರ್ಕಾರಿ ಸ್ವಾಮ್ಯದ ಓಮಿಡ್ ಆಸ್ಪತ್ರೆಯನ್ನು ಗುರಿಯಾಗಿಸಿಕೊಂಡಿದ್ದು, ಆದರೆ ದಾಳಿ ನಡೆದಿರುವುದು 2,000 ಹಾಸಿಗೆಗಳ ಮಾದಕವಸ್ತು ಪುನರ್ವಸತಿ ಕೇಂದ್ರದ ಮೇಲೆ ಎಂದು ಹೇಳಿದರು.

ಮತ್ತೊಂದೆಡೆ ಪಾಕಿಸ್ತಾನ ಈ ಹೇಳಿಕೆಯನ್ನು ಸುಳ್ಳು ಮತ್ತು ದಾರಿತಪ್ಪಿಸುವ ಹೇಳಿಕೆ ಎಂದು ತಿರಸ್ಕರಿಸಿದ್ದು, ಸೋಮವಾರ ರಾತ್ರಿ ಮಿಲಿಟರಿ ಸ್ಥಾಪನೆಗಳು ಮತ್ತು ಭಯೋತ್ಪಾದಕ ಬೆಂಬಲ ಮೂಲಸೌಕರ್ಯಗಳನ್ನು ನಿಖರವಾಗಿ ಗುರಿಯಾಗಿಸಿಕೊಂಡಿದ್ದಾಗಿದೆ ಎಂದು ಹೇಳಿದೆ. ದಾಳಿಗಳ ನಂತರದ ಗೋಚರಿಸುವ ದ್ವಿತೀಯ ಸ್ಫೋಟಗಳು ದೊಡ್ಡ ಮದ್ದುಗುಂಡುಗಳ ಡಿಪೋಗಳ ಉಪಸ್ಥಿತಿಯನ್ನು ಸ್ಪಷ್ಟವಾಗಿ ಸೂಚಿಸುತ್ತವೆ" ಎಂದು ಪಾಕಿಸ್ತಾನದ ಮಾಹಿತಿ ಸಚಿವ ಅತಾವುಲ್ಲಾ ತರಾರ್ ತಿಳಿಸಿದ್ದಾರೆ. ಪಾಕಿಸ್ತಾನದ ಮೇಲೆ ದಾಳಿ ನಡೆಸುವ ಉಗ್ರರಿಗೆ ಕಾಬೂಲ್ ಸುರಕ್ಷಿತ ತಾಣವಾಗಿದೆ ಎಂದು ಇಸ್ಲಾಮಾಬಾದ್ ಹೇಳುತ್ತದೆ. ಉಗ್ರ ಚಟುವಟಿಕೆಯನ್ನು ನಿಭಾಯಿಸುವುದು ಪಾಕಿಸ್ತಾನದ ಆಂತರಿಕ ಸಮಸ್ಯೆ ಎಂದಿರುವ ತಾಲಿಬಾನ್ ಪಾಕ್‌ನ ಆರೋಪವನ್ನು ತಳ್ಳಿಹಾಕಿದೆ. ಮಾದಕವಸ್ತು ಬಳಕೆದಾರರನ್ನು ಗುರಿಯಾಗಿಸಿಕೊಳ್ಳಲಾಗುತ್ತಿದೆ ಎಂಬ ಅಫ್ಘಾನ್ ಉಲ್ಲೇಖವನ್ನು ನಿರಂತರ ಸುಳ್ಳು ಎಂದಿರುವ ಪಾಕಿಸ್ತಾನದ ಪ್ರಧಾನ ಮಂತ್ರಿಯ ವಕ್ತಾರರು, "ಭಯೋತ್ಪಾದಕರು ಮತ್ತು ಅವರ ಮೂಲಸೌಕರ್ಯವನ್ನು" ನಿರ್ಮೂಲನೆ ಮಾಡುವವರೆಗೆ ಕಾರ್ಯಾಚರಣೆಗಳು ಮುಂದುವರಿಯುತ್ತದೆ ಎಂದಿದ್ದಾರೆ.



## ಪಾಕಿ ದಾಳಿ ಹೇಡಿತನದ್ದು: ಭಾರತ

**ನವದೆಹಲಿ, ಮಾ.17:**ಕಾಬೂಲ್ ಆಸ್ಪತ್ರೆಯ ಮೇಲೆ ಪಾಕಿಸ್ತಾನ ನಡೆಸಿದ ವಾಯುದಾಳಿಯನ್ನು ಭಾರತ ಮಂಗಳವಾರ ಖಂಡಿಸಿದೆ. ಈ ದಾಳಿಯಲ್ಲಿ ಕನಿಷ್ಠ 400 ಜನರು ಮೃತಪಟ್ಟಿದ್ದು, 250 ಜನರು ಗಾಯಗೊಂಡಿದ್ದರು. ಈ ಬಗ್ಗೆ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿಕೆ ನೀಡಿದ್ದು, ಕೃತ್ಯವನ್ನು ಹೇಡಿತನ ಮತ್ತು ಅವಿವೇಕಿತನದ್ದು ಎಂದು ಖಂಡಿಸಿದೆ. ಪಾಕಿಸ್ತಾನವು ಹತ್ಯಾಕಾಂಡವನ್ನು ಮಿಲಿಟರಿ ಕಾರ್ಯಾಚರಣೆಯಂತೆ ಬಿಂಬಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದೆ. ನೆರೆಹೊರೆಯವರ ನಡುವಿನ ಸಂಘರ್ಷದಲ್ಲಿ ತೀವ್ರ ಏರಿಕೆ ಕಂಡುಬರುತ್ತಿರುವಂತೆ ಕಂಡುಬರುತ್ತಿರುವಂತೆ, ಅಫ್ಘಾನ್ ತಾಲಿಬಾನ್ ಸರ್ಕಾರದ ವಕ್ತಾರರು, ದಾಳಿಯಲ್ಲಿ ಕನಿಷ್ಠ 400 ಜನರು ಸಾವನ್ನಪ್ಪಿದ್ದಾರೆ ಮತ್ತು 250 ಜನರು ಗಾಯಗೊಂಡಿದ್ದಾರೆ ಎಂದು ಹೇಳಿದರು.

### ಶಾಂತಿಗಾಗಿ ಚೀನಾ ಮನವಿ

**ಶಾಂತಿ ಮತ್ತು ಸಂಯಮಕ್ಕಾಗಿ ಮತ್ತು ಈ ಪ್ರದೇಶದಲ್ಲಿ ತನ್ನ ಯೋಜನೆಗಳು, ಸಿಬ್ಬಂದಿ ಮತ್ತು ಸಂಸ್ಥೆಗಳ ಸುರಕ್ಷತೆಯನ್ನು ಖಚಿತಪಡಿಸುವಂತೆ ಚೀನಾ ಮನವಿ ಮಾಡಿದೆ. ಉದ್ವಿಗ್ನತೆಯನ್ನು ಕಡಿಮೆ ಮಾಡಲು ಮತ್ತು ಎರಡೂ ದೇಶಗಳ ನಡುವಿನ ಸಂಬಂಧಗಳನ್ನು ಸುಧಾರಿಸಲು ಚೀನಾ ತನ್ನದೇ ಆದ ಮಾರ್ಗಗಳ ಮೂಲಕ ರಚನಾತ್ಮಕ ಪಾತ್ರವನ್ನು ವಹಿಸುವುದನ್ನು ಮುಂದುವರಿಸುತ್ತದೆ ಎಂದು ಚೀನಾ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್ ಹೇಳಿದ್ದಾರೆ.**




ಕೃಷ್ಣಾ ಮೇಲ್ದಂಡೆ ಯೋಜನೆ, ಮಹದಾಯಿ, ತುಂಗಭದ್ರಾ, ಮೇಕೆದಾಟು ಮತ್ತಿತರ ಯೋಜನೆಗಳ ಬಗ್ಗೆ ಅಡೆತಡೆಗಳ ನಿವಾರಣೆಗೆ ಕೈಗೊಳ್ಳಬೇಕಾದ ಕಾನೂನು ಕ್ರಮಗಳ ಬಗ್ಗೆ ದೆಹಲಿಯ ಕರ್ನಾಟಕ ಭವನದಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ವಕೀಲರೊಂದಿಗೆ ಚರ್ಚಿಸಿದರು. ಈ ಸಂದರ್ಭದಲ್ಲಿ ಸಚಿವರಾದ ಎಚ್.ಕೆ. ಪಾಟೀಲ, ಎಂ.ಬಿ. ಪಾಟೀಲ, ಬೋಸರಾಜು, ದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ, ರಾಜ್ಯ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್, ಸುಪ್ರೀಂ ಕೋರ್ಟ್ ವಕೀಲರಾದ ಮೋಹನ್ ಕಾತರಕಿ, ನಿಶಾಂತ್ ಪಾಟೀಲ, ಮಯಾಂಕ್ ಜೈನ್, ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಾದ ಗೌರವ್ ಗುಪ್ತಾ, ತುಷಾರ್ ಗಿರಿನಾಥ್ ಉಪಸ್ಥಿತರಿದ್ದರು.

# ಎತ್ತಿನಹೊಳೆಗೆ ಕೇಂದ್ರದಿಂದ ಷರತ್ತುಬದ್ಧ ಅನುಮತಿ

### ಅರಣ್ಯಭೂಮಿ ಬಳಕೆಗೆಕೇಂದ್ರ ಪರಿಸರ ಸಚಿವಾಲಯದ ಅರಣ್ಯ ಸಲಹಾ ಸಮಿತಿ ಒಪ್ಪಿಗೆ

**ನವದೆಹಲಿ, ಮಾ.17:** ಎತ್ತಿನಹೊಳೆ ಯೋಜನೆಗೆ ಹಾಸನ ಮತ್ತು ತುಮಕೂರು ಜಿಲ್ಲೆಗಳ 277 ಎಕರೆ (111 ಹೆಕ್ಟೇರ್) ಅರಣ್ಯ ಪ್ರದೇಶದ ಬಳಕೆಗೆ ಕೇಂದ್ರವು ಷರತ್ತುಬದ್ಧ ಅನುಮತಿ ನೀಡಿದೆ. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ರಾಜ್ಯಸಭೆಯಲ್ಲಿ ಈ ಬಗ್ಗೆ ಪ್ರಸ್ತಾಪಿಸಿ ಕೇಂದ್ರ ಸರ್ಕಾರದ ಮಧ್ಯಪ್ರವೇಶಕ್ಕೆ ಮನವಿ ಮಾಡಿದ್ದರು. ಎರಡು ಜಿಲ್ಲೆಗಳಲ್ಲಿ ಎತ್ತಿನಹೊಳೆ ಯೋಜನೆಗೆ ಅರಣ್ಯಭೂಮಿ ಬಳಕೆಗೆ ಕೇಂದ್ರ ಪರಿಸರ ಸಚಿವಾಲಯದ ಅರಣ್ಯ ಸಲಹಾ ಸಮಿತಿ ಷರತ್ತುಬದ್ಧ ಒಪ್ಪಿಗೆ ನೀಡಿದ್ದು, ದೇವೇಗೌಡರ ಪಯತ್ನದ ಫಲವಾಗಿ ಇದು ಸಾಧ್ಯವಾಗಿದೆ ಎಂದು ಮೂಲಗಳು ತಿಳಿಸಿವೆ.ಎತ್ತಿನಹೊಳೆ ಯೋಜನೆಯ ವಿಳಂಬಕ್ಕೆ ಕಾರಣಗಳೇನು ಎಂಬ ಬಗ್ಗೆ ಮಾರ್ಚ್ 9ರಂದು ದೇವೇಗೌಡರು ರಾಜ್ಯಸಭೆಯಲ್ಲಿ ಪ್ರಸ್ತಾಪ ಮಾಡಿದ್ದರು. ರಾಜ್ಯ ಕಾಂಗ್ರೆಸ್ ಸರ್ಕಾರದ ತಪ್ಪುಗಳಿಂದಾಗಿಯೇ ಈ ಯೋಜನೆ ವಿಳಂಬವಾಗಲು ಕಾರಣ ಎಂದು ಕಳವಳ ವ್ಯಕ್ತಪಡಿಸಿದ್ದರು. ರಾಜ್ಯ ಸರ್ಕಾರವು ತನ್ನ ತಪ್ಪುಗಳನ್ನು ಮರೆ ಮಾಚಲು ವಿನಾಕಾರಣ ಕೇಂದ್ರ ಸರ್ಕಾರದ ಮೇಲೆ ಸತತ ಆರೋಪಗಳನ್ನು ಮಾಡುತ್ತಿದೆ. ಯೋಜನೆಯ ವಿಳಂಬದಿಂದ ನುಣುಚಿಕೊಳ್ಳುತ್ತಿದೆ. ಹೀಗಾಗಿ ಕೇಂದ್ರ ಸರ್ಕಾರವು ಮಧ್ಯಪ್ರವೇಶಿಸಿ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಪ್ರಧಾನಿ ರಾಜ್ಯಸಭೆಯಲ್ಲಿ ಮನವಿ ಮಾಡಿದ್ದರು.



ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರು ಹರಿಸುವುದಾಗಿ ಎತ್ತಿನಹೊಳೆ ಯೋಜನೆಯನ್ನು ರೂಪಿಸಲಾಯಿತು. ಆ ಜಿಲ್ಲೆಗಳಿಗೆ ನೀರು ಹರಿಸುವುದು ಹಾಗಿರಲಿ, ಸಕಲೇಶಪುರಕ್ಕೆ ಹತ್ತಿರದಲ್ಲಿರುವ ಹಾಸನದಲ್ಲಿರುವ ಅರಸೀಕೆರೆಗೆ ಕೂಡ ನೀರು ಬಂದಿಲ್ಲ. ಅಲ್ಲದೆ, ಯೋಜನೆಗಳನ್ನು ಅನುಷ್ಠಾನ ಮಾಡುವ ನಿಟ್ಟಿನಲ್ಲಿ ಅನೇಕ ಉಲ್ಲಂಘನೆಗಳನ್ನು ಮಾಡಿದ್ದು, ಇದನ್ನು ಕೇಂದ್ರ ಸರಕಾರ ಗಮನಿಸಿ ಸರಿಪಡಿಸಬೇಕು ಎಂದು ದೇವೇಗೌಡರು ಕೋರಿದ್ದರು.ಆ ದಿನ ರಾಜ್ಯಸಭೆಯಲ್ಲಿ ಹಾಜರಿದ್ದ ಕೇಂದ್ರ ಅರಣ್ಯ ಮತ್ತು ಜೀವಿಶಾಸ್ತ್ರ ಖಾತೆ ಸಚಿವರಾದ ಭೂಪೇಂದ್ರ ಯಾದವ್ ಅವರು ದೇವೇಗೌಡರ ಮನವಿ ಸ್ಪಂದಿಸಿದ್ದರು. ಅಲ್ಲದೆ, ಈಬಗ್ಗೆ ಸಚಿವರನ್ನು ಭೇಟಿಯಾಗಿ ಎತ್ತಿನಹೊಳೆ ಬಗ್ಗೆ ಚರ್ಚೆ ನಡೆಸಿದ್ದರು.

# ವಿರೋಧ ಪಕ್ಷದ 8 ಸಂಸದರ ಅಮಾನತು ರದ್ದು

**ನವದೆಹಲಿ, ಮಾ.17:** ಲೋಕಸಭೆಯು ಮಂಗಳವಾರ 8 ಮಂದಿ ವಿರೋಧ ಪಕ್ಷದ ಸಂಸದರ ಅಮಾನತು ಆದೇಶವನ್ನು ಧ್ವನಿ ಮತದ ಮೂಲಕ ರದ್ದುಗೊಳಿಸಿದೆ. ಕಾಂಗ್ರೆಸ್ ಮುಖ್ಯ ಸಚೇತಕ ಕೆ. ಸುರೇಶ್ ಅವರು ಕೆಲವು ಸದಸ್ಯರ ಅಜಾಗರೂಕ ಅಚಾತುರ್ಯ ಕುರಿತು ವಿಷಾದ ವ್ಯಕ್ತಪಡಿಸಿದ ನಂತರ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಅಮಾನತು ರದ್ದುಪಡಿಸುವ ನಿರ್ಣಯವನ್ನು ಸದನದಲ್ಲಿ ಮಂಡಿಸಿದರು.

ಸಮಾಜವಾದಿ ಪಕ್ಷದ ಧರ್ಮೇಂದ್ರ ಯಾದವ್ ಮತ್ತು ಎನ್‌ಸಿಪಿ (ಎಸ್‌ಪಿ) ಯ ಸುಪ್ರಿಯಾ ಸುಳೆ ಅವರು ಈ ನಿರ್ಣಯವನ್ನು ಅನುಮೋದಿಸಿದರು.

ಗುರ್ಜೀತ್ ಸಿಂಗ್ ಔಜ್ಲಾ, ಹಿಬಿ ಈಡನ್, ಸಿ.ಕಿರಣ್ ಕುಮಾರ್ ರೆಡ್ಡಿ, ಅಮರಿಂದರ್ ಸಿಂಗ್ ರಾಜಾ ವಾರಿಂಗ್, ಮಾಣಿಕ್ಕಂ ಟ್ಯಾಗೋರ್, ಪ್ರಶಾಂತ್ ಪಡೋಲೆ, ಡೀನ್ ಕುರಿಯಾಕೋಸ್ ಮತ್ತು ಎಸ್. ವೆಂಟಕೇಸನ್ ಎಂಬ ಅಮಾನತುಗೊಂಡ 8 ಸಂಸದರ ಅಮಾನತನ್ನು ರದ್ದುಗೊಳಿಸಲು ಕಿರಣ್ ರಿಜಿಜು ಅವರು ವಿಧಿ 370ರ ಅಡಿಯಲ್ಲಿ ಪ್ರಸ್ತಾವನೆ ಮುಂದಿಟ್ಟರು. ಈ ಪ್ರಸ್ತಾವನೆಯನ್ನು ಸದನವು ಅಂಗೀಕರಿಸಿತು.

ಇದಾದ ಬಳಿಕ ಸದನವು 2026–27ನೇ ಸಾಲಿನ ಕೇಂದ್ರ ರೈಲ್ವೆ ಸಚಿವಾಲಯದ ಅನುದಾನ ಬೇಡಿಕೆಗಳ ಕುರಿತು ಚರ್ಚೆಯನ್ನು ಮುಂದುವರಿಸಲಿದೆ.

# ವಿವಿಧ ರಾಜ್ಯ ಚುನಾವಣೆ ಬಳಿಕ ಸರ್ವಪಕ್ಷ ಸಂಸದರ ನಿಯೋಗದಿಂದ ಪ್ರಧಾನಿ ಭೇಟಿ: ಡಿಕೆಶಿ

### ಒಟ್ಟಾಗಿ ಸೇರಿ ಕೆಲಸ ಮಾಡಬೇಕು ಎಂಬುದು ನಮ್ಮ ಆಶಯ | ಸಭೆಗೆ 24 ಲೋಕಸಭಾ ಸದಸ್ಯರು ಹಾಜರು

**ನವದೆಹಲಿ:** ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆ ಮುಗಿದ ನಂತರ ಮತ್ತೊಮ್ಮೆ ಸಭೆ ಸೇರಿ ಸರ್ವಪಕ್ಷ ನಿಯೋಗವು ಪ್ರಧಾನಿ ಮೋದಿ ಹಾಗೂ ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿ ಮಾಡಬೇಕು ಎಂದು ರಾಜ್ಯ ಸಂಸದರ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಕರ್ನಾಟಕ ಭವನದಲ್ಲಿ ರಾಜ್ಯದ ಸಂಸದರ ಜತೆಗಿನ ಸಭೆ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳನ್ನು ಉದ್ದೇಶಿಸಿ ಮಂಗಳವಾರ ರಾತ್ರಿ ಮಾತನಾಡಿದರು.

ಪ್ರಧಾನಿಯವರು ಹಾಗೂ ಸಚಿವರ ಭೇಟಿಗೆ ಸಮಯ ತೆಗೆದುಕೊಳ್ಳಬೇಕಿದೆ. ಕೆಲವು ರಾಜ್ಯಗಳ ಚುನಾವಣೆ ಮುಗಿದ ನಂತರ ದಿನಾಂಕ ನಿಗದಿ ಮಾಡಿ ಎಂದು ಸಂಸದರು ತಿಳಿಸಿದ್ದಾರೆ. ಅವರ ಮನವಿಗೆ ನಾವು ಗೌರವ ನೀಡಬೇಕಾಗಿದೆ. ಏಕೆಂದರೆ ನಾವೆಲ್ಲರೂ ಒಗ್ಗೂಡಿ ಕೆಲಸ ಮಾಡಬೇಕಿದೆ ಆದ ಕಾರಣ ಸಭೆಯನ್ನ ಮುಂದಿನ ದಿನಾಂಕದವರೆಗೆ ಮುಂದೂಡಿದ್ದೇವೆ ಎಂದು ಹೇಳಿದರು. ಕೆಲವೊಂದು ರಾಜ್ಯಗಳಲ್ಲಿ ಚುನಾವಣೆ ಘೋಷಣೆಯಾಗಿದೆ. ನಾವು ಮಾಡುವ ತೀರ್ಮಾನಗಳಿಂದ ಪರಿಣಾಮ ಬೀರಬಹುದು. ಆದ ಕಾರಣ ಮತ್ತೊಂದು ದಿನಾಂಕವನ್ನು ನಿಗದಿ ಮಾಡಿ ಎಂದಿದ್ದಾರೆ ಎಂದರು.

**ಒಟ್ಟಾಗಿ ಸೇರಿ ಕೆಲಸ ಮಾಡಬೇಕು ಎಂಬುದು ನಮ್ಮ ಆಶಯ:** "ರಾಜ್ಯದ ಹಿತಕ್ಕಾಗಿ ನಾವೆಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡೋಣ. ಹಿಂದೆಯೂ ಕೆಲಸ ಮಾಡಿದ್ದೇವೆ, ಮುಂದೆಯೂ ಮಾಡುತ್ತೇವೆ ಎನ್ನುವ ಅಭಿಪ್ರಾಯಗಳನ್ನು ಸಂಸದರು ವ್ಯಕ್ತಪಡಿಸಿದ್ದಾರೆ. ಸರ್ವ ಪಕ್ಷ ನಿಯೋಗ ತೆಗೆದುಕೊಂಡು ಹೋಗೋಣ ಎನ್ನುವ ದೃಷ್ಟಿ ನಮ್ಮದೂ ಆಗಿದೆ. ಎಲ್ಲರೂ ಸೇರಿ ರಾಜ್ಯದ ಹಿತಕ್ಕೆ ಒಟ್ಟಾಗಿ ಕೆಲಸ ಮಾಡಬೇಕು ಎಂಬುದು ನಮ್ಮ ಆಶಯ " ಎಂದರು.



"ಬಹಳಷ್ಟು ವರ್ಷಗಳಿಂದ ರಾಜ್ಯದ ನೀರಾವರಿ ಯೋಜನೆಗಳ ಸಮಸ್ಯೆಗಳಿಗೆ ಪರಿಹಾರ ಹತ್ತಿರತ್ತಿರ ಬರುತ್ತಿದೆ. ಮಹದಾಯಿ, ಕೃಷ್ಣಾ, ತುಂಗಭದ್ರಾ, ಭದ್ರಾ ಹೀಗೆ ನೀರಾವರಿ ಯೋಜನೆಗಳ ಸಣ್ಣ ತೊಡಕುಗಳನ್ನ ನಿವಾರಿಸುವ ಕುರಿತು ಹಾಗೂ ರಾಜ್ಯಕ್ಕೆ ಸಂಬಂಧಿಸಿದ ನೀರಾವರಿ ಯೋಜನೆಗಳು ಯಾವ ಸ್ಥಿತಿಯಲ್ಲಿವೆ, ಹೇಗೆ ಮುಂದುವರೆಸಬೇಕು ಎನ್ನುವ ವಿಚಾರ ಚರ್ಚೆ ನಡೆಸಲು ಕರ್ನಾಟಕದ ಸಂಸದರ ಜೊತೆ ಸಭೆ ನಡೆಸಲಾಯಿತು" ಎಂದು ಹೇಳಿದರು.

"ಯುಕೆಪಿ 3 ಯೋಜನೆಯಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ಆರಂಭಿಸಿದ್ದೇವೆ. ಒಪ್ಪಿತ ಪರಿಹಾರ ನಿಗದಿ ಮಾಡಿ 1.33 ಲಕ್ಷ ಎಕರೆ ಭೂಮಿ ಸ್ವಾಧೀನ ಪಡಿಸಿಕೊಳ್ಳಲು ಮುಂದಾಗಿದ್ದೇವೆ. ಇದಕ್ಕಾಗಿ ಬಜೆಟ್ ನಲ್ಲಿ ಸಾಕಷ್ಟು ಅನುದಾನ ಮೀಸಲಿಡಲಾಗಿದೆ. ದೇಶದ ಇತಿಹಾಸದಲ್ಲಿ ಇಂತಹ ದೊಡ್ಡ ತೀರ್ಮಾನ ಇದುವರೆಗೂ ಮಾಡಿರಲಿಲ್ಲ. ಕಾವೇರಿ ವಿಚಾರದಲ್ಲಿ ಸುಪ್ರೀಂ ಆದೇಶದಂತೆ ಮುನ್ನಡೆಯುತ್ತೇವೆ" ಎಂದು ತಿಳಿಸಿದರು.

**ಸಭೆಗೆ 24 ಸಂಸದರು ಹಾಜರು**

"ಕೇಂದ್ರ ಜಲ ಶಕ್ತಿ ಸಚಿವರು ಹಾಗೂ ಪ್ರಹ್ಲಾದ ಜೋಶಿ ಅವರ ಬಳಿ ಮಾತನಾಡಿಯೇ ಈ ಸಭೆ ನಿಗದಿ ಮಾಡಲಾಯಿತು. 24 ಸಂಸದರು ಈ ಸಭೆಯಲ್ಲಿ ಭಾಗವಹಿಸಿದ್ದರು. ಜಗದೀಶ್ ಶೆಟ್ಟರ್, ಬಸವರಾಜ ಬೊಮ್ಮಾಯಿ, ಗೋವಿಂದ ಕಾರಜೋಳ, ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಸೇರಿದಂತೆ ಅನೇಕರು ವಿಷಯಗಳ ಚರ್ಚೆ ನಡೆಸಿದ್ದಾರೆ. ನಮ್ಮ ಗಮನ ಸೆಳೆದಿದ್ದಾರೆ. ರಾಜ್ಯ ಸರ್ಕಾರ ಹೇಗೆ ನೀರಾವರಿ ವಿಚಾರಗಳಲ್ಲಿ ಮುಂದುವರೆಯುತ್ತಿದೆ ಎಂದು ಮನವರಿಕೆ ಮಾಡಿಕೊಂಡಿದ್ದಾರೆ. ಸಭೆಯಲ್ಲಿ ನಮ್ಮ ಜತೆ ನಿಲ್ಲುವುದಾಗಿ ತಿಳಿಸಿದ್ದು, ಸಭೆಯಲ್ಲಿ ಭಾಗವಹಿಸಿದ ಸಂಸದರಿಗೆ ಧನ್ಯವಾದ ತಿಳಿಸುತ್ತೇನೆ" ಎಂದು ಹೇಳಿದರು.

"ಬಿಜೆಪಿ ಸಮಯದಲ್ಲಿ ಏನೇನು ಆಗಿತ್ತು. ಈಗ ನಾವು ಹೇಗೆ ಮುಂದುವರಿಸಿದ್ದೇವೆ ಎಂದು ಅವರಿಗೆ ತಿಳಿಸಿದ್ದೇವೆ. ಅವರಿಗೂ ಸಹ ಮನವರಿಕೆಯಾಗಿದೆ. ಕೆಲವೊಂದು ದಾಖಲೆಗಳನ್ನು ತಲುಪಿಸಿದ್ದೇವೆ. ನಮ್ಮ ಸರ್ಕಾರ ಯಾವ ರೀತಿ ಹೆಜ್ಜೆಯಿಟ್ಟಿದೆ ಎಂದು ತಿಳಿಸಿದ್ದೇವೆ" ಎಂದರು.

"ನಾನು ಹಾಗೂ ನಮ್ಮ ಸಚಿವರು ನಮ್ಮ ಕಾನೂನು ತಂಡದ ಜೊತೆ ಸಭೆ ನಡೆಸಿದ್ದು, ರಾಜ್ಯದ ಜನರ ಹಿತಕ್ಕೆ ಬದ್ಧವಾಗಿ ನಾವು ಕೆಲಸ ಮಾಡುವ ವಿಶ್ವಾಸ ನಮಗಿದೆ. ನೀರಾವರಿಗೆ ಸಂಬಂಧಿಸಿದಂತೆ ಇರುವ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುತ್ತೇವೆ" ಎಂದು ತಿಳಿಸಿದರು.

ಎತ್ತಿನಹೊಳೆ ಯೋಜನೆಗೆ ಪರಿಸರ ಇಲಾಖೆಯ ಅನುಮತಿ ದೊರಕಿರುವ ಬಗ್ಗೆ ಕೇಳಿದಾಗ, "ನಾವು ಅನುಮತಿಗಾಗಿ ಕಳೆದ ಒಂದು ವರ್ಷದಿಂದ ಕಾಯುತ್ತಿದ್ದೆವು. ಈಗ ನಾವು ಕೂಡಲೇ ಕೆಲಸ ಮುಂದುವರಿಸುತ್ತೇವೆ. ಈಗಾಗಲೇ ಅರ್ಧ ಕೆಲಸ ಮುಗಿಸಿದ್ದೇವೆ. ಒಂದಷ್ಟು ಷರತ್ತುಗಳನ್ನು ಹಾಕಿದ್ದಾರೆ. ಅದರ ಅನ್ವಯ ನಾವು ಕೆಲಸ ಮಾಡುತ್ತೇವೆ" ಎಂದು ಉತ್ತರಿಸಿದರು.

ದೊಡ್ಡ ಮೊತ್ತದ ದಂಡ ವಿಧಿಸಿರುವ ಬಗ್ಗೆ ಕೇಳಿದಾಗ, "ಒಂದೊಂದು ಸಲ ಅವರು ಹೇಳಿದಂತೆ ಹೇಳಬೇಕಾಗುತ್ತದೆ. ನಮಗೆ ಯೋಜನೆ ಜಾರಿಗೊಳಿಸುವುದು ಮುಖ್ಯ" ಎಂದು ತಿಳಿಸಿದರು.

# ಕನಿಷ್ಠ 20 ಶಾಸಕರಿಗಾದರೂ ಸಚಿವ ಸ್ಥಾನ ನೀಡಿ: ಸಿಎಂಗೆ 40ಕ್ಕೂ ಹೆಚ್ಚು ಹಿರಿಯ ಶಾಸಕರ ಮನವಿ

**ಬೆಂಗಳೂರು, ಮಾ.17:** ರಾಜ್ಯ ರಾಜಕೀಯದಲ್ಲಿ ಸಂಪುಟ ಪುನಾರಚನೆ ಕೂಗು ಮತ್ತೆ ಜೋರಾಗಿದ್ದು, ಹಿರಿಯ ಶಾಸಕರು ಒಗ್ಗೂಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ಒತ್ತಡ ಹೇರಿದ್ದಾರೆ. ವಿಧಾನಸಭೆಯಲ್ಲಿ ಮುಖ್ಯಮಂತ್ರಿಯವರನ್ನು ಭೇಟಿಯಾದ ಹಿರಿಯ ಶಾಸಕರ ತಂಡ, ತಮಗೂ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕೆಂದು ಬಲವಾಗಿ ಆಗ್ರಹಿಸಿದೆ.

**ಮೂರು ಬಾರಿ ಗೆದ್ದವರಿಗೆ ಆದ್ಯತೆ::** ಮೂರು ಅಥವಾ ಅದಕ್ಕಿಂತ ಹೆಚ್ಚು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ನಮಗೆ ಅನುಭವವಿದೆ. ಹೀಗಾಗಿ ಮಂತ್ರಿ ಮಂಡಲ ಪುನರ್ ರಚನೆ ವೇಳೆ ಹಿರಿಯರಿಗೆ ಮೊದಲ ಆದ್ಯತೆ ನೀಡಬೇಕು. ಸುಮಾರು 40ಕ್ಕೂ ಹೆಚ್ಚು ಹಿರಿಯ ಶಾಸಕರು ಈ ಬೇಡಿಕೆಯನ್ನು ಇಟ್ಟಿದ್ದು, ಕನಿಷ್ಠ 20 ಶಾಸಕರಿಗೆ ಸಚಿವ ಸ್ಥಾನ ನೀಡಬೇಕು ಎಂಬುದು ಪ್ರಮುಖ ಮನವಿಯಾಗಿದೆ. ಈ ಹಿಂದೆ ಅವಕಾಶ ವಂಚಿತರಾದ ಹಿರಿಯ ಮುಖಂಡರು ಸಿದ್ದರಾಮಯ್ಯ ಅವರ ಎದುರು ಅಳಲನ್ನು ತೋಡಿಕೊಂಡಿದ್ದಾರೆ.

ಮುಖ್ಯಮಂತ್ರಿಯವರನ್ನು ಭೇಟಿಮಾಡಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಶಾಸಕ ಎಚ್.ಸಿ. ಬಾಲಕೃಷ್ಣ, ನಾವೆಲ್ಲರೂ ಮೂರಕ್ಕಿಂತ ಹೆಚ್ಚು ಬಾರಿ ಗೆದ್ದಿರುವ ಶಾಸಕರಾಗಿದ್ದೇವೆ. 40ಕ್ಕೂ ಹೆಚ್ಚು ಹಿರಿಯ ಶಾಸಕರು ಸಿಎಂ ಅವರನ್ನು ಭೇಟಿಯಾಗಿದ್ದೇವೆ. ಮಂತ್ರಿ ಮಂಡಲ ಪುನರ್ ರಚನೆ ಮಾಡುವ ಸಂದರ್ಭದಲ್ಲಿ ನಮ್ಮನ್ನು ಪರಿಗಣಿಸಬೇಕು ಎಂದು ಕೇಳಿಕೊಂಡಿದ್ದೇವೆ ಎಂದು ತಿಳಿಸಿದರು.



ಭೋಜನ ವಿರಾಮದ ಸಮಯದಲ್ಲಿ ಸಿಎಂ ಭೇಟಿಯಾಗಿ ಈ ಮನವಿಯನ್ನು ಮಾಡಿದ್ದಾರೆ. ಶಾಸಕರಾದಂತ ಎನ್ ಎ ಹ್ಯಾರಿಸ್, ಹಂಪನಗೌಡ ಬಾದರ್ಲಿ, ಎಚ್.ಸಿ ಬಾಲಕೃಷ್ಣ, ನಾರಾಯಣಸ್ವಾಮಿ, ಅಶೋಕ್ ಪಟ್ಟಣ, ಯಶವಂತರಾಯಗೌಡ ಪಾಟೀಲ್, ತನ್ವೀರ್ ಸೇಠ್, ರಾಘವೇಂದ್ರ ಹಿಟ್ನಾಳ್ ಸೇರಿದಂತೆ 16 ಶಾಸಕರಿಂದ ಸಿಎಂ ಸಿದ್ದರಾಮಯ್ಯಗೆ ಮನವಿ ಮಾಡಲಾಗಿದೆ. ಲೋಕಸಭಾ ಚುನಾವಣೆಗಳ ಬಳಿಕ ಅಥವಾ ಸರ್ಕಾರದ ಮಧ್ಯಂತರ ಅವಧಿಯಲ್ಲಿ ಸಂಪುಟ ಪುನರ್ ರಚನೆಯಾಗುವ ಸಾಧ್ಯತೆಗಳ ಬಗ್ಗೆ ಚರ್ಚೆ ನಡೆಯುತ್ತಿರುವ ಬೆನ್ನಲ್ಲೇ, ಈ ಸೀನಿಯರ್ ಶಾಸಕರ ಒಗ್ಗಟ್ಟು ಕಾಂಗ್ರೆಸ್ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ. ಮುಖ್ಯಮಂತ್ರಿಯವರು ಈ ಮನವಿಗೆ ಹೇಗೆ ಸ್ಪಂದಿಸಲಿದ್ದಾರೆ ಮತ್ತು ಹೈಕಮಾಂಡ್ ಯಾರಿಗೆ ಮಣೆ ಹಾಕಲಿದೆ ಎಂಬುದನ್ನು ಕಾದು ನೋಡಬೇಕಿದೆ.ಅನುಭವದ ಆಧಾರದ ಮೇಲೆ ಸಚಿವ ಸ್ಥಾನ ಬೇಕೆಂದು ಹಿರಿಯ ಶಾಸಕರು ಪಟ್ಟು ಹಿಡಿದಿದ್ದು, ಇದು ಸಿದ್ದರಾಮಯ್ಯ ಅವರಿಗೆ ಹೊಸ ಸವಾಲಾಗಿ ಪರಿಣಮಿಸಿದೆ.

# ಇಂದಿನಿಂದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ

## ವಿದ್ಯಾರ್ಥಿಗಳಿಗೆ ಶುಭ ಕೋರಿದ ಮುಖ್ಯಮಂತ್ರಿ ಸಿದ್ದರಾಮಯ್ಯ





**ಬೆಂಗಳೂರು, ಮಾ.17:** ಮಾರ್ಚ್ 18 ರಿಂದ ಎಸ್.ಎಸ್.ಎಲ್.ಸಿ ಪರೀಕ್ಷೆ ಪ್ರಾರಂಭವಾಗುತ್ತಿದ್ದು, ಪರೀಕ್ಷೆಗೆ ಹಾಜರಾಗುವ ಎಲ್ಲಾ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸದನದಲ್ಲಿ ಶುಭಾಶಯ ಕೋರಿದರು.

ಪ್ರಸ್ತುತ ಸಾಲಿನಲ್ಲಿ 8,65,968 ಮಕ್ಕಳು ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುತ್ತಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆಗಳನ್ನು ತರಲಾಗಿದ್ದು, ಮೂರು ಹಂತದಲ್ಲಿ ಪರೀಕ್ಷೆಗಳು ನಡೆಯುತ್ತವೆ. ಒಂದು ವೇಳೆ ಮೊದಲ ಹಂತದ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿದ್ದಾಗ್ಯೂ ಎರಡನೇ ಹಂತ, ಮೂರನೇ ಹಂತದಲ್ಲಿ ಪರೀಕ್ಷೆಗೆ ಅವಕಾಶ ಇರುವುದರಿಂದ ಯಾವುದೇ ವಿದ್ಯಾರ್ಥಿಗಳು ಆತಂಕಗೊಳ್ಳದೆ ಪರೀಕ್ಷೆಯನ್ನು ಎದುರಿಸುವಂತೆ ತಿಳಿಸಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಧೈರ್ಯವಾಗಿ ಪರೀಕ್ಷೆ ಬರೆಯಲು ತಿಳಿಸಿದರು.

**ವಿದ್ಯಾರ್ಥಿಗಳಿಗೆ ಮಧುಬಂಗಾರಪ್ಪ ಶುಭಾಶಯ:** ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಶಿಕ್ಷಣ ಮಂತ್ರಿ ಮಧು ಬಂಗಾರಪ್ಪ ಶುಭಾಶಯ ಕೋರಿ ಈ ಹಿಂದೆ ಮಕ್ಕಳು ಒತ್ತಡದಿಂದ ಪರೀಕ್ಷೆಗೆ ಹಾಜರಾಗುತ್ತಿದ್ದರು. ಈಗ ಶಿಕ್ಷಣ ಕ್ಷೇತ್ರದಲ್ಲಿ ಅನೇಕ ಸುಧಾರಣೆಗಳನ್ನು ಜಾರಿಗೆ ತರಲಾಗಿದೆ. ಮೂರು ಹಂತದಲ್ಲಿ ಪರೀಕ್ಷೆಗಳು ನಡೆಸುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ಯಾವುದೇ ಆತಂಕ ಪಡದೆ ಪರೀಕ್ಷೆಗೆ ಹಾಜರಾಗಲು ತಿಳಿಸಿ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದರು.

**ಆರ್.ಅಶೋಕ್ ಶುಭ ಹಾರೈಕೆ:** ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿ ಪೋಷಕರು ಮಕ್ಕಳಿಗೆ ಮಾನಸಿಕ ಹಿಂಸೆ ನೀಡಬಾರದು ಎಂದು ಕಿವಿಮಾತು ಹೇಳಿದರು. ಇತ್ತೀಚೆಗೆ ಸಾಮಾಜಿಕ ಜಾಲತಾಣದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಆಗುತ್ತಿದೆ ಎಂದು ಸುದ್ದಿಗಳು ಬರುತ್ತಿವೆ. ಈ ಬಗ್ಗೆ ಶಿಕ್ಷಣ ಸಚಿವರು ಸುದ್ದಿ ಗೋಷ್ಠಿ ನಡೆಸಿ ಈ ಬಗ್ಗೆ ಎಚ್ಚರಿಕೆ ನೀಡುವಂತೆ ತಿಳಿಸಿದರು.

# ರಾಯಚೂರು ಜಿಲ್ಲೆಯಲ್ಲಿ ಹೊಸ ಕೆಎಸ್‌ಆರ್‌ಪಿ ಪಡೆ ಸ್ಥಾಪನೆ



■ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಗೃಹ ಸಚಿವ ಡಾ: ಜಿ.ಪರಮೇಶ್ವರ್

**ಬೆಂಗಳೂರು, ಮಾ.17:** ರಾಯಚೂರು ಜಿಲ್ಲೆಯಲ್ಲಿ ಹೊಸದಾಗಿ ಕೆ.ಎಸ್.ಆರ್.ಪಿ ಪಡೆಯನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಅಗತ್ಯ ಆಧಾರದ ಮೇಲೆ ರಾಯಚೂರು ಜಿಲ್ಲೆಯಲ್ಲಿ ಕೆ.ಎಸ್.ಆರ್.ಪಿ ಪಡೆ ಸ್ಥಾಪಿಸಲಾಗುವುದು ಎಂದು ಗೃಹ ಸಚಿವ ಡಾ: ಜಿ.ಪರಮೇಶ್ವರ್ ವಿಧಾನಸಭೆಗಿಂದು ತಿಳಿಸಿದರು.

ಪ್ರಶ್ನೋತ್ತರ ಕಲಾಪದ ವೇಳೆ ಮಸ್ಕಿ ಕ್ಷೇತ್ರದ ಶಾಸಕ ಬಸನಗೌಡ ತುರುವಿಹಾಳ್ ಇವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೆ.ಎಸ್.ಆರ್.ಪಿ ಪಡೆ ಅಗತ್ಯವಿದ್ದು, 175 ಎಕರೆ ಜಾಗವನ್ನು ಹಾಗೂ ಕೆ.ಕೆ.ಆರ್.ಡಿ.ಬಿ ಯ ಅನುದಾನವನ್ನು ಸಹ ನೀಡಲಾಗುವುದು ಎಂದು ತಿಳಿಸಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಶಾಸಕರು ಗೃಹ ಸಚಿವರಿಗೆ ಈಗಾಗಲೇ ಮನವಿ ಸಲ್ಲಿಸಲಾಗಿದೆ. ಈ ಸಂಬಂಧ ಕೆ.ಎಸ್.ಆರ್.ಪಿ ಪಡೆ ಸ್ಥಾಪಿಸುವ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಸದನದಲ್ಲಿ ಕೋರಿದರು. ಈ ಸಮಯದಲ್ಲಿ ಉತ್ತರಿಸಿದ ಸಚಿವರು, ರಾಯಚೂರು ಭಾಗದ 30 ಶಾಸಕರು ಸಹಿ ಮಾಡಿ ರಾಯಚೂರು ಭಾಗಕ್ಕೆ ಕೆ.ಎಸ್.ಆರ್.ಪಿ ಪಡೆ ಸ್ಥಾಪಿಸುವಂತೆ ಮನವಿ ಸಲ್ಲಿಸಿದ್ದಾರೆ. ಈಗಾಗಲೇ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ 12 ಕೆ.ಎಸ್.ಆರ್.ಪಿ ಪಡೆಗಳು ಕಾರ್ಯನಿರ್ವಹಿಸುತ್ತಿವೆ. ಎಂದು ತಿಳಿಸಿದರು. ರಾಯಚೂರು ಭಾಗದಲ್ಲಿ ವಿಶ್ವಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳು, ಅಣೆಕಟ್ಟುಗಳು, ಗಡಿಭಾಗಗಳು ಇರುವುದರಿಂದ ಈ ಕುರಿತು ಪರಿಶೀಲಿಸಿ, ಶಾಸಕರುಗಳ ಮನವಿಯನ್ನಾಧರಿಸಿ ಆರ್ಥಿಕ ಇಲಾಖೆಗೆ ಈಗಾಗಲ್ಲೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಅಗತ್ಯತೆ ಅನುಸಾರ ಆರ್ಥಿಕ ಇಲಾಖೆ ಅನುಮೋದನೆ ಪಡೆದು ಕೆ.ಎಸ್.ಆರ್.ಪಿ ಪಡೆ ಸ್ಥಾಪನೆ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಗೃಹಸಚಿವರು ತಿಳಿಸಿದರು.

# ಮೂಲಸೌಕರ್ಯ ಕೊರತೆಯಿಂದ ಉದ್ದಿಮೆಗಳು ನೆರೆರಾಜ್ಯಗಳಿಗೆ ಹೋಗಿಲ್ಲ: ಬೈರತಿ ಸುರೇಶ್



■ 2945 ಎಕರೆ ಜಮೀನು 1445 ಉದ್ದಿಮೆದಾರರಿಗೆ ಹಂಚಿಕೆ: ಸಚಿವ ಬೈರತಿ ಸುರೇಶ್

ಬೆಂಗಳೂರು, ಮಾ.17: ರಾಜ್ಯದಲ್ಲಿ ಮೂಲಸೌಕರ್ಯಗಳ ಕೊರತೆಯಿಂದ ಉದ್ದಿಮೆದಾರರು ನೆರೆ ರಾಜ್ಯಗಳ ಪಾಲಾಗಿಲ್ಲ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ವಿಧಾನ ಪರಿಷತ್‌ನಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿಯ ರವಿಕುಮಾರ್ ಅವರ ಪ್ರಶ್ನೆಗೆ, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಪರವಾಗಿ ಉತ್ತರ ನೀಡಿದ ಸಚಿವರು, ಬಿಡದಿಯಲ್ಲಿ ಏಷ್ಯಾದಲ್ಲೇ ಅತಿದೊಡ್ಡ ಟೊಯೋಟಾ ಘಟಕ ಇರುವುದರಿಂದ, ವ್ಯವಹಾರದ ಕಾರಣದಿಂದ, ಟೊಯೋಟಾ ಮತ್ತೊಂದು ಘಟಕವನ್ನು ಮಹಾರಾಷ್ಟ್ರದಲ್ಲಿ ತೆರೆಯುತ್ತಿದೆ. ಇದಕ್ಕೆ ಮೂಲಭೂತ ಸೌಕರ್ಯಗಳ ಕೊರತೆ ಕಾರಣವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ, ರಾಜ್ಯದ ಕೈಗಾರಿಕಾ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ; ಕಳೆದ 2 ವರ್ಷಗಳಲ್ಲಿ ಕೆಐಎಡಿಬಿ ಯಿಂದ ಅಭಿವೃದ್ಧಿಪಡಿಸಲಾಗುತ್ತಿರುವ, ಕೈಗಾರಿಕಾ ಪ್ರದೇಶಗಳಲ್ಲಿ 2954.52 ಎಕರೆ ಜಮೀನನ್ನು 1445 ಉದ್ದಿಮೆದಾರರಿಗೆ ಹಂಚಿಕೆ ಮಾಡಿ, ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಕೆಐಎಡಿಬಿಯಿಂದ ಅಭಿವೃದ್ಧಿಪಡಿಸುವ ಕೈಗಾರಿಕಾ ಪ್ರದೇಶಗಳಲ್ಲಿ, ಉತ್ತಮ ಗುಣಮಟ್ಟದ ಮೂಲಭೂತ ಸೌಕರ್ಯಗಳಾದ ರಸ್ತೆ, ಸಂಪರ್ಕ ವ್ಯವಸ್ಥೆ, ನೀರು, ಚರಂಡಿ, ವಿದ್ಯುತ್, ಇತ್ಯಾದಿಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ತಿಳಿಸಿದರು. ಕಳೆದ 03 ವರ್ಷಗಳಲ್ಲಿ ರಾಜ್ಯ , ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ , 2028 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ ಎಂದು ಹೇಳಿದರು. 2028 ಯೋಜನೆಗಳಿಗೆ ಅನುಮೋದನೆ ನೀಡಿರುವುದರಿಂದ 5 ಲಕ್ಷ 11 ಸಾವಿರದ 732.88 ಕೋಟಿ ಬಂಡವಾಳ ಹೂಡಿಕೆ ಮತ್ತು 7 ಲಕ್ಷದ 16 ಸಾವಿರದ 148 ಉದ್ಯೋಗಾವಕಾಶ ನಿರೀಕ್ಷಿಸಲಾಗಿದೆ ಎಂದು ತಿಳಿಸಿದರು.

# ಅಕ್ರಮ ಮದ್ಯ ಮಾರಾಟ: ಮಾದಕವಸ್ತು ನಿಯಂತ್ರಣ ಕಾಯ್ದೆ ವ್ಯಾಪ್ತಿಗೆ ತರಲು ಕ್ರಮ



■ ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ

**ಬೆಂಗಳೂರು, ಮಾ.17:** ರಾಜ್ಯಾದ್ಯಂತ ಅಕ್ರಮವಾಗಿ ಮದ್ಯ ಮಾರಾಟ ಮಾರಾಟ ಮಾಡುವುದನ್ನು ಹಾಗೂ ಅಕ್ರಮವಾಗಿ ಮದ್ಯ ತಯಾರಿಸಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಇದನ್ನು ತಡೆಗಟ್ಟಲು ಕರ್ನಾಟಕ ಅಬಕಾರಿ ಕಾಯ್ದೆಯನ್ನು ಪರಿಷ್ಕರಿಸಿ ಹೊಸ ಕಾಯ್ದೆ ತರುವುದಕ್ಕೆ ಸರ್ಕಾರ ಚಿಂತನೆ ನಡೆಸಲಾಗುತ್ತಿದೆ ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ವಿಧಾನಸಭೆಗೆ ತಿಳಿಸಿದ್ದಾರೆ.

ಈ ಬಗ್ಗೆ ಚರ್ಚಿಸಿ ಕ್ರಮ ವಹಿಸಲಾಗುವುದು. ಅಲ್ಲದೆ, ಅಕ್ರಮ ಮದ್ಯ ಮಾರಾಟವನ್ನು ಮಾದಕ ವಸ್ತು ನಿಯಂತ್ರಣ ಕಾಯಿದೆ ಅಡಿ ಸೇರಿಸಲು ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದು ಸಚಿವರು ಪ್ರಕಟಿಸಿದರು.

ಇಂದು ವಿಧಾನಸಭೆಯ ಪ್ರಶ್ನೋತ್ತರ ಕಲಾಪದ ವೇಳೆ ರಾಯಚೂರು ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಅವರು ರಾಯಚೂರು ಜಿಲ್ಲೆಯಲ್ಲಿ ಸ್ವಲಾಭಕ್ಕಾಗಿ ಅನಧಿಕೃತ ಸ್ಥಳಗಳಲ್ಲಿ , ಕಿರಾಣಿ ಅಂಗಡಿಗಳಲ್ಲೂ ಸಹ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆ. ಕರ್ನಾಟಕ ಅಬಕಾರಿ ಕಾಯಿದೆ 1965ರ ಕಾಯಿದೆಗಳ ರೀತ್ಯಾ ಯಾವುದೇ ಕ್ರಮ ಆಗುತ್ತಿಲ್ಲ. ಈ ಬಗ್ಗೆ ಸರ್ಕಾರ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ವಿಶೇಷ ಪಡೆಗಳನ್ನು ರಚಿಸಬೇಕು ಎಂದು ಪ್ರಶ್ನಿಸಿದರು.

ಈ ಸಮಯದಲ್ಲಿ ಶಾಸಕರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅಬಕಾರಿ ಅಕ್ರಮಗಳನ್ನು ನಿಯಂತ್ರಿಸಲು ಅಬಕಾರಿ ಇಲಾಖೆಯಿಂದ ವಲಯ ವ್ಯಾಪ್ತಿಯ ರೂಟ್ ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ. ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆ ಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಅಕ್ರಮ ಹತ್ತಿಕ್ಕಲು ಕ್ರಮ ವಹಿಸಲಾಗುತ್ತಿದೆ.

ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 50ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ ಎಂದರು.

ಕರ್ನಾಟಕ ಅಬಕಾರಿ ಕಾಯಿದೆ 1965ರ ಕಾಯಿದೆಗಳ ರೀತ್ಯಾ ಯಾವುದೇ ಕ್ರಮವು ಹಳೆಯದಾಗಿದ್ದು, ಅಕ್ರಮ ಮದ್ಯ ಮಾರಾಟವನ್ನು ಮಾದಕ ವಸ್ತು ನಿಯಂತ್ರಣ ಕಾಯಿದೆ ಅಡಿ ಸೇರಿಸಲು ಸರ್ಕಾರ ಪರಿಶೀಲನೆ ನಡೆಸುತ್ತಿದೆ. ರಾಯಚೂರು ಜಿಲ್ಲೆಯಲ್ಲಿ ಅಕ್ರಮವಾಗಿ ಕ್ಲೋರಲ್ ಹೈಡ್ರೇಟ್ ಪೌಡರ್ ನಿಂದ ಕೃತಕವಾಗಿ ಸೇಂದಿಯನ್ನು ತಯಾರಿಸಿ ಮಾರಾಟ ಮಾಡುತ್ತಿರುವುದು ಹಾಗೂ ಜಿಲ್ಲೆಯ ಗಡಿ ಭಾಗಗಳಿಗೆ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಿಂದ ಸೇಂದಿ/ಕೃತಕ ಸೇಂದಿಯ ರಸ್ತೆ ಹಾಗೂ ರೈಲು ಮಾರ್ಗವಾಗಿ ಕಳ್ಳಸಾಗಣೆಯಾಗುತ್ತಿದ್ದು, ಈ ರೀತಿ ಅಕ್ರಮವಾಗಿ ಸೇಂದಿ/ಕೃತಕ ಸೇಂದಿಯನ್ನು ತಯಾರಿಸುತ್ತಿರುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಸಚಿವರು ತಿಳಿಸಿದರು.

# ಅಂತರ್ಜಲ ಮಟ್ಟ ಸುಧಾರಣೆಗೆ ಕ್ರಮ: ಸಚಿವ ಎಂ.ಸಿ.ಸುಧಾಕರ್



■ ಕುಡಿಯುವ ನೀರಿನ ಯೋಜನೆಗೆ 490 ಕೋಟಿ ರೂ. ಅನುದಾನ ಮೀಸಲು


**ಬೆಂಗಳೂರು, ಮಾ.17:** ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟವನ್ನು ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಹಾಗೂ ಕುಡಿಯುವ ನೀರಿನ ಯೋಜನೆಗೆ ಸಣ್ಣ ನೀರಾವರಿ ಇಲಾಖೆಯಿಂದ 490 ಕೋಟಿ ಅನುದಾನವನ್ನು ಪ್ರಸ್ತುತ ವರ್ಷದ ಆಯವ್ಯಯದಲ್ಲಿ ಮೀಸಲಿಟ್ಟಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಪರವಾಗಿ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ್ ವಿಧಾನಸಭೆಗಿಂದು ತಿಳಿಸಿದರು.

ಅಧಿವೇಶನದ ಪ್ರಶ್ನೋತ್ತರ ಕಲಾಪದ ವೇಳೆ ವಿಧಾನಸಭಾ ಸದಸ್ಯ ಮಂಜುನಾಥ್ ಎಂ.ಆರ್. ಅವರು ಹನೂರು ಕ್ಷೇತ್ರದ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯಡಿ ಅಂತರ್ಜಲ ಹೆಚ್ಚಿಸಲಿಕ್ಕೆ ರೂಪುರೇಷೆಗಳನ್ನು ರಚಿಸಬೇಕೆಂದು ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಪ್ರಶ್ನಿಸಿದರು.

ಈ ಸಮಯದಲ್ಲಿ ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅಂತರ್ಜಲ ಮಟ್ಟವನ್ನು ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನೀರಾವರಿ ಕೆರೆಗಳು, ಪಿಕಪ್ ಚೆಕ್ ಡ್ಯಾಂ ನಿರ್ಮಾಣ, ಕರೆಗಳಿಗೆ ಕುಡಿಯುವ ನೀರು ತುಂಬಿಸುವ ಯೋಜನೆ ಹಾಗೂ ಇತ್ಯಾದಿ ಯೋಜನೆಗಳನ್ನು ಕೈಗೊಳ್ಳಲಾಗಿರುತ್ತದೆ.

ಕಳೆದ 4 ವರ್ಷಗಳಲ್ಲಿ 9 ಕೋಟಿಗಿಂತ ಹೆಚ್ಚು ಅನುದಾನವನ್ನು ಹನೂರು ವಿಧಾನಸಭಾ ಕ್ಷೇತ್ರಕ್ಕೆ ನೀಡಲಾಗಿದೆ ಅಲ್ಲದೇ ಪ್ರಸ್ತುತ ಬಜೆಟ್‌ನಲ್ಲಿ 490 ಕೋಟಿ ಅನುದಾನವನ್ನು ಮೀಸಲಿರಿಸಿದೆ ಎಂದು ತಿಳಿಸಿದರು.

# ನೀರಿನ ಗುಣಮಟ್ಟ ನಿರ್ವಹಣೆ ಆರೋಗ್ಯ ಸುರಕ್ಷತಾ ಕಾರ್ಯಕ್ರಮ ಜಾರಿ ಪ್ರಸ್ತಾಪ ಸರ್ಕಾರದ ಮುಂದಿಲ್ಲ



■ ವಿಧಾನ ಪರಿಷತ್‌ನಲ್ಲಿ ಪೌರಾಡಳಿತ ಸಚಿವ ರಹೀಂಖಾನ್ ಹೇಳಿಕೆ

**ಬೆಂಗಳೂರು, ಮಾ.17:** ರಾಜ್ಯಮಟ್ಟದಲ್ಲಿ ಸಮಗ್ರ ನೀರಿನ ಗುಣಮಟ್ಟ ನಿರ್ವಹಣೆ ಮತ್ತು ಸಾರ್ವಜನಿಕ ಆರೋಗ್ಯ ಸುರಕ್ಷತಾ ಕಾರ್ಯಕ್ರಮ ಜಾರಿಗೆ ತರುವ ಪ್ರಸ್ತಾಪ ಸರ್ಕಾರದ ಮುಂದಿಲ್ಲ ಎಂದು ಪೌರಾಡಳಿತ ಸಚಿವ ರಹೀಂ ಖಾನ್ ವಿಧಾನಪರಿಷತ್‌ನಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ಧನಂಜಯ ಸರ್ಜಿ ಅವರಿಗೆ ಉತ್ತರಿಸಿದ ಸಚಿವರು, ನಗರ ಸ್ಥಳೀಯ ಸಂಸ್ಥೆಗಳಲ್ಲಿನ ನೀರು ಸರಬರಾಜು ಘಟಕಗಳಲ್ಲಿ ಕುಡಿಯುವ ನೀರಿನ ಗುಣಮಟ್ಟವನ್ನು ಆಯಾ ಸ್ಥಳೀಯ ಸಂಸ್ಥೆಗಳಲ್ಲಿನ ವ್ಯಾಪ್ತಿಯ ಪ್ರಯೋಗಾಲಯಗಳಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಮತ್ತು ಡಿಐಎಸ್ ಮಾನದಂಡಗಳಂತೆ ನಿಯಮಿತವಾಗಿ ಪರೀಕ್ಷಿಸಲಾಗುತ್ತದೆ ಎಂದರು.


ನದಿಗಳಿಂದ, ಜಲಾಶಯಗಳಿಂದ ಬರುವ ನೀರನ್ನು ಜಲಶುದ್ಧೀಕರಣ ಘಟಕಗಳಲ್ಲಿ ನೀರನ್ನು ಶುದ್ಧೀಕರಿಸಿ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಕೊಳವೆ ಬಾವಿ ಅಥವಾ ತೆರೆದ ಬಾವಿ ನೀರನ್ನು ವಾಟರ್ ಫಿಲ್ಟರ್‌ಗಳ ಮುಖಾಂತರ ಟ್ಯಾಂಕ್‌ಗಳಿಗೆ ತುಂಬಿಸಿ ಜನರಿಗೆ ಸರಬರಾಜು ಮಾಡಲಾಗುತ್ತಿದೆ ಎಂದು ಹೇಳಿದರು.

ಮಾನದಂಡಗಳ ಪ್ರಕಾರ, ಸ್ವಚ್ಛಗೊಳಿಸಿ ನೀರನ್ನು ಪೂರೈಸಲಾಗುತ್ತಿದೆ. ನೀರಿನ ಮೂಲಕ ಹರಡುವ ಸಾಂಕ್ರಾಮಿಕ ರೋಗ ತಡೆಯಲು ಹಾಗೂ ಸ್ವಚ್ಛತೆ ಕಾಪಾಡಲು ನಗರ ಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ರಾಷ್ಟ್ರಾದ್ಯಂತ ಜನಗಣತಿ ಕಾರ್ಯವನ್ನು ಕೈಗೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ಹೊಸ ನಗರ ಸ್ಥಳೀಯ ಸಂಸ್ಥೆಗಳನ್ನು ರಚಿಸುವ, ವ್ಯಾಪ್ತಿಯನ್ನು ವಿಸ್ತರಿಸುವ ಕಾಲಾವಕಾಶ ಕಳೆದ ಡಿ.30 ರಂದು ಮುಕ್ತಾಯಗೊಂಡಿದೆ. ಇಂತಹ ಪ್ರಸ್ತಾವನೆಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಎಂದು ಶಾಸಕ ಅನಿಲ್‌ಕುಮಾರ್ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಅವಧಿ ಮುಕ್ತಾಯವಾಗಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ವಾರ್ಡ್‌ವಾರು ಮೀಸಲಾತಿ ನಿಗದಿಪಡಿಸಲು ಕ್ರಮ ವಹಿಸಲಾಗುತ್ತಿದೆ. ಈಗಾಗಲೇ 23 ನಗರ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರದಿಂದ ಅಧಿಸೂಚನೆ ಹೊರಡಿಸಿ ಆಕ್ಷೇಪಣೆಯನ್ನು ಆಹ್ವಾನಿಸಲಾಗಿದೆ ಎಂದು ಹೇಳಿದರು. ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ 19,509 ಹುದೆಗಳು ಖಾಲಿ ಇದ್ದು, ಗುತ್ತಿಗೆ, ಹೊರಗುತ್ತಿಗೆ, ನೇರಪಾವತಿ, ದಿನಗೂಲಿ ಆಧಾರದ ಮೇಲೆ 12,777 ನೌಕರರು ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದರು.

# ಸಕ್ಕರೆ ಕಾರ್ಖಾನೆಗಳಿಂದ ವಿದ್ಯುತ್ ಖರೀದಿಗೆ ಒಪ್ಪಂದ: ಸಿಎಂಗೆ ಮನವಿ



■ ಒಪ್ಪಂದ ಮತ್ತು ತೆರಿಗೆ ಬೇಡಿಕೆಗಳನ್ನು ಪರಿಗಣಿಸುವುದಾಗಿ ಸಿಎಂ ಭರವಸೆ: ಸಚಿವ ಶಿವಾನಂದ ಪಾಟೀಲ

**ಬೆಂಗಳೂರು, ಮಾ.17:** ಮುಂದಿನ ಕಬ್ಬು ನುರಿಸುವ ಹಂಗಾಮಿನಿಂದ ಸಕ್ಕರೆ ಕಾರ್ಖಾನೆಗಳಿಂದ ವಿದ್ಯುತ್ ಖರೀದಿಗೆ ಒಪ್ಪಂದ ಮಾಡಿಕೊಳ್ಳಲು ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು ಎಂದು ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ವಿಧಾನಪರಿಷತ್ತಿಗೆ ತಿಳಿಸಿದ್ದಾರೆ. ಬಿಜೆಪಿ ಸದಸ್ಯ ರವಿಕುಮಾರ್ ಹಾಗೂ ಇತರ ಸದಸ್ಯರು ನಿಯಮ 330ರ ಅಡಿಯಲ್ಲಿ ನೀಡಿದ್ದ ಸೂಚನೆಗೆ ಉತ್ತರಿಸಿದ ಸಚಿವರು, ಕೇಂದ್ರ ಸರ್ಕಾರ ಸಕ್ಕರೆಯ ಎಂಎಸ್‌ಪಿ ದರ ಹೆಚ್ಚಳ ಮಾಡಿದರೆ ಸಕ್ಕರೆ ಕಾರ್ಖಾನೆಗಳು ಹಾಗೂ ಕಬ್ಬು ಬೆಳೆಗಾರರ ಬಹುತೇಕ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ ಎಂದು ಹೇಳಿದರು.

ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆಗಳ ಸಮಸ್ಯೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದಲೇ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆದು ಚರ್ಚೆ ಮಾಡಲಾಗಿದೆ. ಸಕ್ಕರೆ ಕಾರ್ಖಾನೆಗಳ ಮಾಲೀಕರ ಬೇಡಿಕೆಗಳಲ್ಲಿ ಎರಡು ಬೇಡಿಕೆಗಳು ಮಾತ್ರ ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ಬರಲಿವೆ. ವಿದ್ಯುತ್ ಖರೀದಿ ಒಪ್ಪಂದ ಮತ್ತು ನೀರಿನ ತೆರಿಗೆ ಬೇಡಿಕೆಗಳನ್ನು ಪರಿಗಣಿಸುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದ್ದಾರೆ ಎಂದರು.

ಕೇಂದ್ರ ಸರ್ಕಾರ ಸಕ್ಕರೆ ರಫ್ತು ಮಾಡಲು ಅವಕಾಶ ನೀಡಬೇಕು. ಎಥೆನಾಲ್ ದರ ಪರಿಷ್ಕರಣೆ ಹಾಗೂ ಉತ್ಪಾದನಾ ಪ್ರಮಾಣಕ್ಕೆ ಅನುಗುಣವಾಗಿ ಹಂಚಿಮೆ ಮಾಡಬೇಕು. ಈ ಬೇಡಿಕೆಗಳಿಗೆ ಕೇಂದ್ರ ಸ್ಪಂದಿಸಿದರೆ ಕಬ್ಬು ಬೆಳೆಗಾರರ ಸಮಸ್ಯೆಗಳಿಗೂ ಪರಿಹಾರ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಸಕ್ಕರೆಗೆ ಎಲ್‌ಪಿಜಿ ರೀತಿ ಗೃಹ ಬಳಕೆಗೆ ಬೇರೆ ಹಾಗೂ ವಾಣಿಜ್ಯ ಬಳಕೆಗೆ ಬೇರೆ ದರ ನಿಗದಿಪಡಿಸಬೇಕು ಎಂಬ ಬೇಡಿಕೆಯನ್ನು ಕೇಂದ್ರ ಸರ್ಕಾರ ಪರಿಗಣಿಸಿದರೆ ಗ್ರಾಹಕರಿಗೂ ಅನುಕೂಲ, ಕಬ್ಬು ಬೆಳೆಗಾರರ ಸಮಸ್ಯೆಗೂ ಪರಿಹಾರ ದೊರೆಯಲಿದೆ ಎಂದರು.

ರಾಜ್ಯದಲ್ಲಿ ಸತತ ಎರಡು ವರ್ಷ ಕಬ್ಬು ಬೆಳೆಗಾರರಿಗೆ ಪೂರ್ಣ ಪ್ರಮಾಣದಲ್ಲ ಹಣ ಪಾವತಿ ಮಾಡಲಾಗಿದೆ. ಈ ವರ್ಷ ಇನ್ನೂ ಅರೆಯುವಿಕೆ ನಡೆದಿದ್ದು, ಈ ಬಾರಿಯೂ ಪೂರ್ಣ ಪ್ರಮಾಣದಲ್ಲಿ ಪಾವತಿಗೆ ಕ್ರಮ ಕೈಗೊಳ್ಳಲಾಗುವುದು. ಅತಿಹೆಚ್ಚು ಸಕ್ಕರೆ ಉತ್ಪಾದನೆ ಮಾಡುವ ಮೂರು ರಾಜ್ಯಗಳಲ್ಲಿ ಕರ್ನಾಟಕದಲ್ಲಿ ಮಾತ್ರ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಕಬ್ಬಿನ ಬಿಲ್ ಪಾವತಿ ಮಾಡಲಾಗಿದೆ. ಮಹಾರಾಷ್ಟ್ರ ಮತ್ತು ಉತ್ತರ ಪ್ರದೇಶಗಳಲ್ಲಿ ಇನ್ನೂ ರೈತರ ಕಬ್ಬಿನ ಬಿಲ್ ಬಾಕಿ ಇದೆ ಎಂದು ತಿಳಿಸಿದರು.

# ಬೆಳಗಾವಿಯಲ್ಲಿ ಐಟಿ - ಸೆಮಿಕಂಡಕ್ಟರ್ ಪಾರ್ಕ್ ಸ್ಥಾಪನೆ: ಸಚಿವ ಪ್ರಿಯಾಂಕ್ ಖರ್ಗೆ

## ಕರ್ನಾಟಕವನ್ನು ಅಭಿವೃದ್ಧಿಪರ ರಾಜ್ಯವನ್ನಾಗಿಸುವುದು ಹಾಗೂ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಉದ್ದೇಶ



**ಬೆಂಗಳೂರು, ಮಾ.17:** ರಾಜ್ಯದ ಎರಡನೇ ರಾಜಧಾನಿಯೆಂದೇ ಘೋಷಣೆಗೊಂಡಿರುವ ಹಾಗೂ ರಾಜ್ಯದ ಗಡಿ ಜಿಲ್ಲೆಯಾದ ಬೆಳಗಾವಿಯಲ್ಲಿ ಐ.ಟಿ ಪಾರ್ಕ್/ಸೆಮಿ ಕಂಡಕ್ಟರ್ ಪಾರ್ಕ್‌ಗಳನ್ನು ನಿರ್ಮಿಸಿ ಅಭಿವೃದ್ಧಿಪರ ರಾಜ್ಯವನ್ನಾಗಿ ಮಾಡುವ ಹಾಗೂ ನಿರುದ್ಯೋಗಿಗಳಗೆ ಉದ್ಯೋಗ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ ಖರ್ಗೆ ವಿಧಾನಸಭೆಗೆ ತಿಳಿಸಿದರು.

ಪ್ರಶ್ನೋತ್ತರ ಕಲಾಪದ ವೇಳೆಯಲ್ಲಿ ವಿಧಾನಸಭಾ ಸದಸ್ಯರಾದ ಅಭಯ ಪಾಟೀಲ್ ಅವರು, ಬೆಳಗಾವಿಯಲ್ಲಿ ಐಟಿ ಪಾರ್ಕ್ ಮತ್ತು ಸೆಮಿಕಂಡಕ್ಟರ್ ಪಾರ್ಕ್ ಗಳನ್ನು ನಿರ್ಮಿಸಿ ಅಭಿವೃದ್ಧಿಪರ ರಾಜ್ಯವನ್ನಾಗಿ ಮಾಡಬೇಕು ಹಾಗೂ ವಿದ್ಯಾವಂತ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಬೇಕೆಂದು ಕೋರಿದ ಸಮಯದಲ್ಲಿ, ಉತ್ತರಿಸಿದ ಸಚಿವರು, ಬೆಳಗಾವಿಯಲ್ಲಿ ಐ.ಟಿ ಪಾರ್ಕ್/ಸೆಮಿ ಕಂಡಕ್ಟರ್ ಪಾರ್ಕ್‌ಗಳನ್ನು ನಿರ್ಮಿಸಿ ಅಭಿವೃದ್ಧಿ ಪರ ರಾಜ್ಯವನ್ನಾಗಿ ಮಾಡುವ ಹಾಗೂ ನಿರುದ್ಯೋಗಿಗಳಗೆ ಉದ್ಯೋಗ ಕಲ್ಪಿಸುವ ಉದ್ದೇಶದಿಂದ ಸರ್ಕಾರವು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ ಎಂದರು.

ಐ.ಟಿ ಪ್ಲಗ್ ಅಂಡ್ ಪ್ಲೇ ಮೂಲ ಸೌಕರ್ಯ ಸ್ಥಾಪನೆ, ಸ್ಟಾರ್ಟ್ ಅಪ್ ಮತ್ತು ನಾವೀನ್ಯತೆ ಪರಿಸರ ವ್ಯವಸ್ಥೆಯನ್ನು ಬಲಪಡಿಸುವುದು. ವೇಗವರ್ಧಕ ಜಾಲಗಳು ಮತ್ತು ಸೀಡ್ ಫಂಡ್ ಬೆಂಬಲ, ಟೆಕ್ಸಿಲರೇಷನ್, ಸಮಗ್ರ ಅಭಿವೃದ್ಧಿ ಹಾಗೂ ಭವಿಷ್ಯದ ತಂತ್ರಜ್ಞಾನ, ನಿಪುಣ ಕರ್ನಾಟಕ, ಐಡಿಯಾ2ಪಿಓಸಿ ಎಲಿವೇಟ್ (ಗ್ರಾಂಟ್ ಇನ್ ಏಡ್), ರಾಜೀವ್ ಗಾಂಧಿ ಉದ್ಯಮ ಶೀಲತೆ ಕಾರ್ಯಕ್ರಮ, ಎಲಿವೇಟ್ ಮಹಿಳಾ ಉದ್ಯಮಶೀಲತೆ, ಗ್ರಾಸ್ ರೂಟ್ ಇನೋವೇಷನ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಬೆಳಗಾವಿಯ ತಿಲಕವಾಡಿಯಲ್ಲಿರುವ ಕಲಾಮಂದಿರ ಕಟ್ಟಡದಲ್ಲಿ ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಸಹಯೋಗದೊಂದಿಗೆ ಜಾಗತಿಕ ತಂತ್ರಜ್ಞಾನ ಕೇಂದ್ರವನ್ನು ಸ್ಥಾಪಿಸಲು ಸದರಿ ಕಟ್ಟಡವನ್ನು ಇಲಾಖೆಗೆ ಹಸ್ತಾಂತರಿಸಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

## ರಕ್ಷಣಾ ಇಲಾಖೆಗೆ ಸೇರಿದ ಜಮೀನು ಸರ್ಕಾರಕ್ಕೆ ಹಸ್ತಾಂತರಿಸುವಂತೆ ಕೇಂದ್ರ ಸಚಿವರಿಗೆ ಪತ್ರ

ಬೆಳಗಾವಿಯಲ್ಲಿ ಐ.ಟಿ.ಪಾರ್ಕ್/ಸೆಮಿಕಂಡಕ್ಟರ್ ಪಾರ್ಕ್ ಗಳನ್ನು ಸ್ಥಾಪಿಸುವ ಸಂಬಂಧ ಉದ್ದೇಶಿತ ಜಮೀನನ್ನು ಸರ್ಕಾರಕ್ಕೆ ಪಡೆದು ಜಮೀನನ್ನು ರಾಜ್ಯ ಸರ್ಕಾರಕ್ಕೆ ಹಸ್ತಾಂತರಿಸುವ ಸಲುವಾಗಿ ರಕ್ಷಣಾ ಸಚಿವರಿಗೆ 08-01-2021 ರಂದು ಪತ್ರ ಬರೆಯಲಾಗಿದೆ. ಜಮೀನನ್ನು ರಾಜ್ಯ ಸರ್ಕಾರಕ್ಕೆ ಹಿಂದಿರುಗಿಸಲು ರಕ್ಷಣಾ ಇಲಾಖೆಯಿಂದ ಇನ್ನೂ ಕ್ರಮ ಕೈಗೊಂಡಿಲ್ಲವಾದ್ದರಿಂದ ಐಟಿಬಿಟಿ ಸಚಿವರು ಪುನಃ ಪತ್ರ ಬರೆಯಲಾಗಿದೆ. ಮುಖ್ಯಮಂತ್ರಿ ಅವರು ಸಹ ರಕ್ಷಣಾ ಸಚಿವರಿಗೆ ಹಾಗೂ ಮುಖ್ಯ ಕಾರ್ಯದರ್ಶಿಯವರು ರಕ್ಷಣಾ ಕಾರ್ಯದರ್ಶಿಯವರಿಗೆ ಪತ್ರ ಬರೆದು ಜಮೀನನ್ನು ಕರ್ನಾಟಕ ಸರ್ಕಾರದ ವಶಕ್ಕೆ ನೀಡುವಂತೆ ಕೋರಲಾಗಿದೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು.

## ಕನ್ನಡಿಗ ಉದ್ಯೋಗಿಗಳನ್ನು ಅತಂತ್ರ ಸ್ಥಿತಿಗೆ ತಳ್ಳಿದೆ

# ಮುಂಬಡ್ತಿ ಪರೀಕ್ಷೆ ಮುಂದೂಡಿದ ನೈರುತ್ಯ ರೈಲ್ವೆ ಕ್ರಮಕ್ಕೆ ಸಿದ್ದರಾಮಯ್ಯ ಆಕ್ರೋಶ

**ಬೆಂಗಳೂರು, ಮಾ.17:** ನೈರುತ್ಯ ರೈಲ್ವೇ ಇಲಾಖೆಯ 194 ಗೂಡ್ಸ್ ರೈಲು ಮ್ಯಾನೇಜರ್ ಹುದ್ದೆಗಳು ಹಾಗೂ ಹುಬ್ಬಳ್ಳಿ ವಿಭಾಗದಲ್ಲಿ ಎಲ್‌ಡಿಸಿಇ 101 ಹುದ್ದೆಗಳಿಗೆ ಮುಂಬಡ್ತಿ ನೀಡುವ ಸಂಬಂಧ ಮಂಗಳವಾರ ನಡೆಯಬೇಕಿದ್ದ ಪರೀಕ್ಷೆಗಳನ್ನು ಕನ್ನಡಿಗರು ಹಾಗೂ ಕನ್ನಡ ಸಂಘಟನೆಗಳ ಭಾರೀ ವಿರೋಧದ ತರುವಾಯ ರೈಲ್ವೇ ಇಲಾಖೆಯು ದಿಢೀರನೇ ರದ್ದುಪಡಿಸಿ ಕನ್ನಡಿಗ ಉದ್ಯೋಗಿಗಳನ್ನು ಅತಂತ್ರ ಪರಿಸ್ಥಿತಿಗೆ ತಳ್ಳಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆ ಹಾಕಿರುವ ಅವರು, ಕನ್ನಡ ಭಾಷೆಯಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡದಿರುವ ಬಗ್ಗೆ ಈ ಮೊದಲೇ ಸಾವಿರಾರು ಕನ್ನಡಿಗ ಉದ್ಯೋಗಿಗಳು ಧ್ವನಿಯೆತ್ತಿದ್ದರು. ಶಾಂತ ರೀತಿಯ ಪ್ರತಿಭಟನೆಯನ್ನು, ಪ್ರತಿರೋಧವನ್ನು ನಿರ್ಲಕ್ಷಿಸುತ್ತಾ ಬಂದ ರೈಲ್ವೆ ಇಲಾಖೆ ಪರೀಕ್ಷೆ ಆರಂಭವಾಗುವ ಕೊನೆ ಕ್ಷಣದಲ್ಲಿ ರದ್ದುಮಾಡಿರುವುದು ಈಗಿನ ಗೊಂದಲಕ್ಕೆ ಕಾರಣವಾಗಿದೆ ಎಂದಿದ್ದಾರೆ.

ಪ್ರಾರಂಭದಲ್ಲಿಯೇ ರೈಲ್ವೆ ಇಲಾಖೆ ಎಚ್ಚೆತ್ತುಕೊಂಡು ತನ್ನ ತಪ್ಪನ್ನು ತಿದ್ದಿಕೊಂಡು ಕನ್ನಡದಲ್ಲಿ ಪರೀಕ್ಷೆಗೆ ಅವಕಾಶ ಮಾಡಿಕೊಟ್ಟಿದ್ದರೆ ಈಗಿನ ಅತಂತ್ರ ಸ್ಥಿತಿ ನಿರ್ಮಾಣವಾಗುತ್ತಿರಲಿಲ್ಲ. ಆ ಪ್ರಯತ್ನವನ್ನೇ ಮಾಡದೆ, ಕನ್ನಡಿಗರನ್ನು ತಾತ್ಸಾರ ಭಾವನೆಯಿಂದ ಕಂಡು, ಪ್ರತಿಭಟನೆಯ ಕಾವು ಹೆಚ್ಚಾದ ಕೂಡಲೆ ತರಾತುರಿಯಲ್ಲಿ ಪರೀಕ್ಷೆ ರದ್ದುಪಡಿಸುವ ನಿರ್ಧಾರಕ್ಕೆ ಬಂದಿರುವುದು ಖಂಡನೀಯ ಎಂದು ಸಿದ್ದರಾಮಯ್ಯ ಕಿಡಿ ಕಾರಿದ್ದಾರೆ.

ಕನ್ನಡಿಗರು ಉದ್ಯೋಗಕ್ಕಾಗಿ, ಬಡ್ತಿಗಾಗಿ ಕೇಂದ್ರದ ಮುಂದೆ ಭಿಕ್ಷೆಗೆ ನಿಂತಿಲ್ಲ, ತಾವು ಶಿಕ್ಷಣ ಪಡೆದ ಭಾಷೆಯಲ್ಲೇ ತಮ್ಮ ಹಕ್ಕಿನ ಉದ್ಯೋಗ ಬಡ್ತಿಯನ್ನು ಕೇಳುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಕನ್ನಡ ಭಾಷಿಗರಿಗೆ ಭಾಷೆಯ ಹೆಸರಲ್ಲಿ ಅನ್ಯಾಯವಾಗದಂತೆ ಕೇಂದ್ರ ಸರ್ಕಾರ ನೋಡಿಕೊಳ್ಳಬೇಕು. ಪ್ರಧಾನಿ ನರೇಂದ್ರ ಮೋದಿ ಅವರೇ ಮಧ್ಯಪ್ರವೇಶಿಸಿ ಸಂಬಂಧಿತ



ಇಲಾಖೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ರದ್ದುಪಡಿಸಲಾದ ರೈಲ್ವೆ ಇಲಾಖೆಯ ಪರೀಕ್ಷೆಯನ್ನು ಕನ್ನಡದಲ್ಲಿಯೇ ಬರೆಯಲು ಅವಕಾಶ ಕಲ್ಪಿಸಿ ಶೀಘ್ರದಲ್ಲಿಯೇ ನಡೆಸಲು ಕ್ರಮಕೈಗೊಳ್ಳಬೇಕೆಂದು ಮುಖ್ಯಮಂತ್ರಿ ಆಗ್ರಹಿಸಿದ್ದಾರೆ.

**ಸೋಮಣ್ಣ ಮೇಲಿಟ್ಟಿದ್ದ ನಂಬಿಕೆ ಹುಸಿಯಾಗಿದೆ**

ಸೋಮಣ್ಣ ಅವರು ಕನ್ನಡಿಗರ ಪರವಾಗಿ ನಿಂತು ಅನ್ಯಾಯವನ್ನು ಸರಿಪಡಿಸುತ್ತಾರೆ ಎಂಬ ಭರವಸೆ ಇಟ್ಟುಕೊಂಡಿದ್ದೆ, ಆ ನಂಬಿಕೆ ಹುಸಿಯಾಗಿದೆ. ಸೋಮಣ್ಣನವರು ಮಾತನಾಡಲು ಶುರು ಮಾಡಿದರೆ ರೈಲ್ವೆ ಇಲಾಖೆ ಇರುವುದೇ ಕರ್ನಾಟಕಕ್ಕಾಗಿ ಎನ್ನುವಂತೆ ಮಾತಿನ ಅರಮನೆ ಕಟ್ಟುತ್ತಾರೆ. ಅವರು ಮಾತು ಸ್ವಲ್ಪ ಕಡಿಮೆ ಮಾಡಿ ಕರ್ನಾಟಕಕ್ಕಾಗಿ ಮಾಡಬೇಕಾದ ಕೆಲಸವನ್ನು ನಿಷ್ಠೆಯಿಂದ ಮಾಡಲು ಮುಂದಾಗಬೇಕು ಎಂದು ಸಿದ್ದರಾಮಯ್ಯ ಸಲಹೆ ನೀಡಿದರು.




ಬೆಂಗಳೂರಿನ ಜನರಲ್ ಪೋಸ್ಟ್ ಆಫೀಸ್ (ಜಿಪಿಒ) ನಲ್ಲಿ ಮಂಗಳವಾರ "24 ಸ್ಪೀಡ್ ಪೋಸ್ಟ್ ಮತ್ತು 48 ಸ್ಪೀಡ್ ಪೋಸ್ಟ್" ಪ್ರೀಮಿಯಂ ಸೇವೆಯನ್ನು ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಕೆ ಪ್ರಕಾಶ್ ಪ್ರಾರಂಭಿಸಿದರು.

### ಕನ್ನಡದಲ್ಲಿ ಪರೀಕ್ಷೆ ನಡೆಸುವ ಬಗ್ಗೆ ಚರ್ಚಿಸಿ ತೀರ್ಮಾನ

## ರೈಲ್ವೆ ಇಲಾಖೆ ಮುಂಬಡ್ತಿ ಪರೀಕ್ಷೆ ರದ್ದು, ಕನ್ನಡಪರ ಹೋರಾಟಗಾರರ ಒತ್ತಾಯಕ್ಕೆ ಮಣಿದ ಅಧಿಕಾರಿಗಳು

**ಬೆಂಗಳೂರು, ಮಾ.17:** ರೈಲ್ವೆ ಇಲಾಖೆ ಮುಂಬಡ್ತಿ ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ಕಡೆಗಣಿಸಲಾಗಿತ್ತು. ಇದನ್ನು ವಿರೋಧಿಸಿ ಕನ್ನಡಪರ ಹೋರಾಟಗಾರರು ನಡೆಸಿದ ಹೋರಾಟಕ್ಕೆ ಅಧಿಕಾರಿಗಳು ಮಣಿದಿದ್ದಾರೆ. ಮಂಗಳವಾರ (ಮಾರ್ಚ್ 17)ರಂದು ನಡೆಯಬೇಕಿದ್ದ ಪರೀಕ್ಷೆ ರದ್ದಾಗಿದೆ. ಪರೀಕ್ಷೆಯನ್ನು ರದ್ದುಗೊಳಿಸಿ ರೈಲ್ವೆ ಇಲಾಖೆ ದಿಢೀರ್ ಆದೇಶ ಹೊರಡಿಸಿದೆ.

ರೈಲ್ವೆಯ ಮುಂಬಡ್ತಿ ಪರೀಕ್ಷೆಯಲ್ಲಿ ಇಂಗ್ಲಿಷ್ ಮತ್ತು ಹಿಂದಿ ಭಾಷೆಯಲ್ಲಿ ಮಾತ್ರವೇ ಪ್ರಶ್ನೆಗಳಿದ್ದವು. ಉತ್ತರವನ್ನೂ ಈ ಎರಡು ಭಾಷೆಗಳಲ್ಲಿಯೇ ಬರೆಯಬೇಕಿತ್ತು. ಕನ್ನಡ ಭಾಷೆಯಲ್ಲಿ ಪರೀಕ್ಷೆ ಬರೆಯಲು ಅವಕಾಶ ಇಲ್ಲದಿರುವುದನ್ನು ಖಂಡಿಸಿ, ಕನ್ನಡಪರ ಸಂಘಟನೆಗಳು ಹೋರಾಟಕ್ಕಿಳಿದಿದ್ದವು.

ಎಲ್ಲ ಪರೀಕ್ಷಾ ಕೇಂದ್ರಗಳಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಬೇಕೆಂದು ತಮ್ಮ ಕಾರ್ಯಕರ್ತರಿಗೆ ಕರ್ನಾಟಕ ರಕ್ಷಣಾ ವೇದಿಕೆಯ (ಕರವೇ) ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಕರೆಕೊಟ್ಟಿದ್ದರು. ಅದಂತೆ, ಪರೀಕ್ಷೆಗಳು ನಡೆಯುತ್ತಿದ್ದ ಬೆಂಗಳೂರು, ಹುಬ್ಬಳ್ಳಿ, ದಾವಣಗೆರೆ, ಮೈಸೂರು ಸೇರಿದಂತೆ ಹಲವು ಪರೀಕ್ಷಾ ಕೇಂದ್ರಗಳಿಗೆ ಕನ್ನಡಪರ ಹೋರಾಟಗಾರರು ಮುತ್ತಿಗೆ ಹಾಕಿ, ಪ್ರತಿಭಟನೆ ನಡೆಸಿದ್ದಾರೆ. ಅಲ್ಲದೆ, ಹುಬ್ಬಳ್ಳಿಯ ಆರ್‌ಆರ್‌ಸಿ ಕಚೇರಿಯ ಎದುರು ಕೂಡ ಪ್ರತಿಭಟನೆಗಳು ನಡೆದಿತ್ತು.

## ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಇಲ್ಲ: ದಿನೇಶ್ ಗುಂಡೂರಾವ್ ಸ್ಪಷ್ಟನೆ

**ಬೆಂಗಳೂರು, ಮಾ.17:** ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆಯಿಲ್ಲ. ಔಷಧ ಖರೀದಿಸಲು ಟೆಂಡರ್ ಪ್ರಕ್ರಿಯೆ ಸಡಿಲಗೊಳಿಸಿದ್ದು, ಶೇ.80ರಷ್ಟು ಔಷಧಿಗಳನ್ನು ನೇರವಾಗಿ ಖರೀದಿಸಲಾಗುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಔಷಧ ಉಗ್ರಾಣಗಳಲ್ಲಿ ಔಷಧ ಕೊರತೆ ಆಗುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಸೂಕ್ತ ಔಷಧಗಳು ಲಭ್ಯವಾಗುತ್ತಿಲ್ಲ. ಸಾರ್ವಜನಿಕರು ಅನಿವಾರ್ಯವಾಗಿ ಹೊರಗಿನಿಂದ ಖರೀದಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಕೆಮ್ಮು, ನೆಗಡಿ ಹಾಗೂ ರೋಗನಿರೋಧಕ ಮಾತ್ರೆಗಳು ಸ್ಟಾಕ್ ಇಲ್ಲವಾಗಿದೆ. ಈ ಬಗ್ಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ವಿಧಾನ ಪರಿಷತ್ತಿನ ಅರ್ಧ ಗಂಟೆ ಚರ್ಚೆ ವೇಳೆ ಸದಸ್ಯರಾದ ಡಾ. ಧನಂಜಯ ಸರ್ಜಿ ಹಾಗೂ ಪ್ರತಾಪ್ ಸಿಂಹ ನಾಯಕ್ ಅವರು ಒತ್ತಾಯಿಸಿದರು.

ಸಚಿವ ದಿನೇಶ್ ಗುಂಡೂರಾವ್, ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗಿದೆ. ಕರ್ನಾಟಕ ರಾಜ್ಯ ಔಷಧ ಸರಬರಾಜು ನಿಗಮ (ಕೆಎಸ್‌ಎಂಎಸ್ಸಿಎಲ್) ನೇರವಾಗಿ ಶೇ.80ರಷ್ಟು ಔಷಧಿಗಳ ಟೆಂಡರ್ ಕರೆದು ಖರೀದಿಸುತ್ತಿದೆ. ಶೇ.20ರಷ್ಟು ಔಷಧಗಳನ್ನು ಸ್ಥಳೀಯ ಆಸ್ಪತ್ರೆಗಳೇ ಖರೀದಿಸುವಂತೆ ಸೂಚಿಸಲಾಗಿದೆ. ಇದಕ್ಕೆ ಹಣ ಬಿಡುಗಡೆ ಮಾಡಲಾಗಿದೆ ಎಂದರು.

ಕಳೆದ ವರ್ಷ 893 ಔಷಧಗಳ ಪೈಕಿ 534 ಔಷಧಗಳಿಗೆ ಟೆಂಡರ್



ಕರೆಯಲಾಗಿದೆ. ಈ ಪೈಕಿ 232 ಔಷಧ ಖರೀದಿಸಲು ಕಾರ್ಯಾದೇಶ ನೀಡಲಾಗಿದೆ. ಇನ್ನುಳಿದ ಔಷಧಗಳನ್ನು ಸ್ಥಳೀಯವಾಗಿ ಖರೀದಿಸಲಾಗುವುದು. ವಾರ್ಷಿಕವಾಗಿ ಔಷಧ ಖರೀದಿ ಬದಲು ಎರಡು, ಮೂರು ತಿಂಗಳಿಗೊಮ್ಮೆ ಖರೀದಿಗೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

### ಯೋಜನೆ ಆರಂಭಿಸಿ ಗೋವುಗಳನ್ನೇ ದತ್ತು ಪಡೆದಿಲ್ಲ ಏಕೆ

## ಬಿಜೆಪಿ ಸದಸ್ಯರನ್ನು ಮುಜುಗರಕ್ಕೀಡು ಮಾಡಿದ ಪ್ರಿಯಾಂಕ್ ಖರ್ಗೆ ಪ್ರಶ್ನೆ

**ಬೆಂಗಳೂರು, ಮಾ.17:** ಹಿಂದಿನ ಬಿಜೆಪಿ ಸರ್ಕಾರದಲ್ಲಿ ಗೋವುಗಳ ದತ್ತು ಯೋಜನೆ ಎಂದು ಆರಂಭಿಸಲಾಗಿತ್ತು. ಹಾಸ್ಯಾಸ್ಪದ ಎಂದರೆ ಗೋ ದತ್ತು ಯೋಜನೆಯಲ್ಲಿ ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮತ್ತು ಪ್ರಭು ಚೌಹಾಣ್ ಅವರನ್ನು ಬಿಟ್ಟರೆ ಯಾವ ಬಿಜೆಪಿ ಶಾಸಕರು ಕೂಡ ಗೋವುಗಳನ್ನು ದತ್ತು ಪಡೆದಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ಕುಟುಕಿದರು.

ವಿಧಾನಸಭೆಯಲ್ಲಿ ಮಾತನಾಡಿದ ಅವರು, ಪ್ರಭು ಚೌಹಾಣ್ ಅವರು 11 ಗೋವುಗಳನ್ನು, ಬಸವರಾಜ ಬೊಮ್ಮಾಯಿಯವರು ಐದಾರು ಹಸುಗಳನ್ನು ದತ್ತು ತೆಗೆದುಕೊಂಡಿದ್ದು ಬಿಟ್ಟರೆ ಯಾವ ಬಿಜೆಪಿ ಶಾಸಕರು ಕೂಡ ದತ್ತು ತೆಗೆದುಕೊಂಡಿಲ್ಲ, ಆ ಯೋಜನೆ ಘೋಷಿಸುವಾಗ ಅನೇಕ ಬಿಜೆಪಿ ನಾಯಕರು ಸದನದಲ್ಲಿ ಇದ್ದರು, ಆದರೆ ಗೋವುಗಳನ್ನು ದತ್ತು ಪಡೆದಿಲ್ಲ ಏಕೆ ಎಂದು



ಪ್ರಶ್ನಿಸಿದರು. ಸಚಿವರ ಪ್ರಶ್ನೆಗೆ ಬಿಜೆಪಿ ಶಾಸಕರು ಸೂಕ್ತ ರೀತಿಯಲ್ಲಿ ಉತ್ತರ ನೀಡಲು ಸಾಧ್ಯವಾಗದೆ ಇಕ್ಕಟ್ಟಿಗೆ ಸಿಲುಕಿದ ಪರಿಸ್ಥಿತಿ ಸೃಷ್ಟಿಯಾಯಿತು. ಬಿಜೆಪಿ ಸದಸ್ಯ ಶರಣು ಸಲಗಾರ್ ಮಾತಿಗೆ ಸಚಿವ ಪ್ರಿಯಾಂಕ್ ಖರ್ಗೆ ಆಕ್ಷೇಪ ವ್ಯಕ್ತಪಡಿಸಿದರು.

"ಗೋ ರಕ್ಷಣೆ ಬಗ್ಗೆ ಮಾತನಾಡುತ್ತಿದ್ದಾರೆ. ಆದರೆ ಗೋಮಾಂಸ ಮಾರಾಟ ಕಂಪನಿ ಯಾರದ್ದು? ಗೊತ್ತಾ ಎಂದು ಕಂಪನಿಯೊಂದರ ಹೆಸರು ಉಲ್ಲೇಖ ಮಾಡಿದರು. ಈ ವೇಳೆ ಅಶ್ವತ್ಥ ನಾರಾಯಣ ಮಧ್ಯಪ್ರವೇಶ ಮಾಡಿ, "ಸರ್ಕಾರ ಕ್ರಮ ಕೈಗೊಳ್ಳಲಿ. ಪ್ರಿಯಾಂಕ್ ವಿಷಯಾಂತರ ಮಾಡ್ತಿದ್ದಾರೆ" ಇದಕ್ಕೆ 'ನೀವು ಏಕೆ ಎದ್ದೇಳುತ್ತೀರಿ' ಎಂದು ಪ್ರಿಯಾಂಕ್ ಪ್ರಶ್ನಿಸಿದರು. ಇದಕ್ಕೆ ಅಶ್ವತ್ಥ ನಾರಾಯಣ ತಿರುಗೇಟು ನೀಡಿ, "ಸರ್ಕಾರ ಸೂಕ್ಷ್ಮತೆ ಕಳೆದುಕೊಂಡಿದೆ. ಹಾಗಿದ್ದರೆ ನೀವು ಕ್ರಮ ಕೈಗೊಳ್ಳಿ. ಸರ್ಕಾರ ನಿಮ್ಮದು ಕಂಪನಿ ವಿರುದ್ಧ ಕ್ರಮ ಕೈಗೊಳ್ಳಿ" ಎಂದು ಅಶ್ವತ್ಥ ನಾರಾಯಣ ಸವಾಲು ಹಾಕಿದರು.

ಹಿಂದಿನ ಸರ್ಕಾರದಲ್ಲಿ ಗೋ ದತ್ತು ಯೋಜನೆ ಎಂದಿತ್ತು. 11 ಗೋವುಗಳನ್ನು ಪ್ರಭು ಚೌಹಾಣ್ ದತ್ತು ಪಡೆದುಕೊಂಡಿದ್ದರು. ಬೊಮ್ಮಾಯಿ ಐದಾರು ಗೋವು ದತ್ತು ತೆಗೆದುಕೊಂಡಿದ್ದರು. ಅದನ್ನು ಹೊರತು ಪಡಿಸಿ ಯಾವ ಬಿಜೆಪಿ ಶಾಸಕರು ಗೋ ದತ್ತು ಪಡೆದುಕೊಂಡಿಲ್ಲ. ಎಷ್ಟು ಬಿಜೆಪಿ ಶಾಸಕರು ಜನ ದತ್ತು ಪಡೆದುಕೊಂಡರು ಎಂಬ ಅಂಕಿ ಅಂಶ ನೀಡಿ ಎಂದು ಪ್ರಿಯಾಂಕ್ ಖರ್ಗೆ ಸವಾಲು ಹಾಕಿದರು.

### ಗ್ಲೋಬಲ್ ಅಗ್ರಿಟೆಕ್ ಸಮ್ಮಿಟ್ ಲಾಂಛನ ಅನಾವರಣ ಸಮಾರಂಭ

## ಅಗ್ರಿ-ಟೆಕ್ ಕ್ಷೇತ್ರದಲ್ಲಿ ಯುವಜನತೆ, ಐಟಿ ಉದ್ಯೋಗಿಗಳು ಕೃಷಿ ಉದ್ಯಮಿಗಳಾಗಿ ಪರಿವರ್ತನೆ: ಚಲುವರಾಯಸ್ವಾಮಿ ಸಂತಸ

ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್ಕೆಸಿಸಿಐ) ರವರು ಇದೇ ಮೊಟ್ಟ ಮೊದಲ ಬಾರಿಗೆ ಜಾಗತಿಕ ಅಗ್ರಿಟೆಕ್ ಶೃಂಗಸಭೆಯ (Global Agri-Tech Summit) ಅನಾವರಣ ಹಾಗೂ ಲಾಂಛನ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಕೃಷಿ ಸಚಿವ ಎನ್. ಚಲುವರಾಯ ಸ್ವಾಮಿಯವರು, ಕೃಷಿ ಕ್ಷೇತ್ರದಲ್ಲಿ ಆಗುತ್ತಿರುವ ಆಧುನಿಕ ತಂತ್ರಜ್ಞಾನ, ನಾವೀನ್ಯತೆ ಮತ್ತು ಬ್ರಾಂಡಿಂಗ್ ಬಳಕೆಯಿಂದ ದೇಶದ ಆರ್ಥಿಕ ಸ್ಥಿತಿ ಉತ್ತಮಗೊಳ್ಳಲಿದೆ ಎಂದು ತಿಳಿಸಿದರು.



ಹೊಸ ತಂತ್ರಜ್ಞಾನಗಳು, ಸಂಸ್ಕರಣೆ ಮತ್ತು ಮಾರ್ಕೆಟಿಂಗ್ ಪ್ರಕ್ರಿಯೆಗಳನ್ನು ಅಳವಡಿಸಿಕೊಳ್ಳುವುದು ದೇಶದ ಪ್ರಗತಿಗೆ ಪೂರಕವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಇತ್ತೀಚಿನ ದಿನಗಳಲ್ಲಿ ಐಟಿ ಮತ್ತು ಬಿಟಿ ಕ್ಷೇತ್ರದ ಯುವಕರು ಕೃಷಿ ಚಟುವಟಿಕೆಯಲ್ಲಿ ಹೆಚ್ಚಿನ ಆಸಕ್ತಿ ತೋರಿಸುತ್ತಿರುವುದನ್ನು ಶ್ಲಾಘಿಸಿದ ಸಚಿವರು, ಇವರ ಪಾಲ್ಗೊಳ್ಳುವಿಕೆಯಿಂದ ಈ ಕ್ಷೇತ್ರಕ್ಕೆ ಹೊಸ ಆಯಾಮ ಸಿಗಲಿದೆ ಎಂದರು.

ಯಾವುದೇ ಒಂದು ಸಂಸ್ಥೆಯ ಯಶಸ್ಸಿನಲ್ಲಿ ಮಾರುಕಟ್ಟೆಯ ಪಾತ್ರ ಬಹಳ ದೊಡ್ಡದು ಎಂದು ಅವರು ಈ ಸಂದರ್ಭದಲ್ಲಿ ಅಭಿಪ್ರಾಯಪಟ್ಟರು.

ಮೊಟ್ಟ ಮೊದಲ ಬಾರಿಗೆ ಎಫ್‌ಕೆಸಿಸಿಐ ಆಯೋಜಿಸಿದ್ದಕ್ಕೆ ಸಂತಸ ವ್ಯಕ್ತಪಡಿಸಿದ ಸಚಿವರು ಎಫ್‌ಕೆಸಿಸಿಐ ಜೊತೆ ಕೃಷಿ ಇಲಾಖೆ ಮಾತ್ರವಲ್ಲ ತೋಟಗಾರಿಕೆ ಇಲಾಖೆ, ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ ಈ ಮೂರು ಇಲಾಖೆಯವರು ಒಟ್ಟಿಗೆ ಸೇರಿ ಕಾರ್ಯಕ್ರಮ ಮಾಡುತ್ತೇವೆಂದು ಭರವಸೆ ನೀಡಿದರು ಮತ್ತು ಯಾವುದೇ ಆತಂಕವಿಲ್ಲದೆ ಮುಂದುವರಿಯುವಂತೆ ಧೈರ್ಯ ತುಂಬಿದರು.

ಕಾರ್ಯಕ್ರಮದಲ್ಲಿ ಉಮಾ ರೆಡ್ಡಿ, ಸಾಯಿರಾಂ ಪ್ರಸಾದ್, ಬಿಪಿಶಶಿಧರ್, ಎಂ ಜಿ ಬಾಲ ಕೃಷ್ಣ ಹಾಗೂ ರೂಪಾರಾಣಿ, ಸಮಿತಿ ಸದಸ್ಯರು ಹಲವು ಗಣ್ಯರು ಭಾಗವಹಿಸಿದ್ದರು.

### ಹಿರಿಯ ಅಧಿಕಾರಿಗಳ ನಡುವೆ ಸಂಘರ್ಷ, ಆರೋಗ್ಯ ಇಲಾಖೆಗೆ ಅನಾರೋಗ್ಯ

## ಇನ್ನು ಸುಧಾರಣೆ ಹೇಗೆ ಸಾಧ್ಯ: ಪ್ರತಿಪಕ್ಷ ನಾಯಕ ಅಶೋಕ್ ಪ್ರಶ್ನೆ

**ಬೆಂಗಳೂರು, ಮಾ.17:** ಹಿರಿಯ ಅಧಿಕಾರಿಗಳ ನಡುವಿನ ಸಂಘರ್ಷದಿಂದ ಆರೋಗ್ಯ ಇಲಾಖೆ ಅನಾರೋಗ್ಯಕ್ಕೆ ಈಡಾಗಿದೆ. ಇದರಿಂದಲೇ ಇಲಾಖೆಯಲ್ಲಿ ಯಾವುದೇ ಕೆಲಸ ನಡೆಯುತ್ತಿಲ್ಲ. ಮೊದಲು ಅಧಿಕಾರಿಗಳ ಒಳಜಗಳವನ್ನು ಸರಿ ಮಾಡಿ ಆರೋಗ್ಯ ಇಲಾಖೆಯನ್ನು ಸುಧಾರಣೆ ಮಾಡಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದರು.

ವಿಧಾನಸಭೆಯಲ್ಲಿ ಮಾತನಾಡಿದ ಅವರು, ಗೃಹ, ಕಂದಾಯ ಹಾಗೂ ಆರೋಗ್ಯ ಇಲಾಖೆಯನ್ನು ಜನರು ಹೆಚ್ಚು ಅವಲಂಬಿಸಿದ್ದಾರೆ. ಈ ಪೈಕಿ ಆರೋಗ್ಯ ಇಲಾಖೆ ಅನಾರೋಗ್ಯಕ್ಕೀಡಾಗಿದೆ. ಔಷಧಿಗಳ ಕೊರತೆ ಬಗ್ಗೆ ಹಿಂದಿನ ಬೆಳಗಾವಿ ಅಧಿವೇಶನದಲ್ಲಿ ಮಾತಾಡಿದಾಗ, ಸಚಿವ ದಿನೇಶ್ ಗುಂಡೂರಾವ್ ಉತ್ತರ ನೀಡಿ, ಔಷಧಿ ಖರೀದಿಗೆ ಕೂಡಲೇ ಟೆಂಡರ್ ಕರೆಯುತ್ತೇವೆ ಎಂದು ತಿಳಿಸಿದ್ದರು. ಇತ್ತೀಚೆಗೆ ವೈದ್ಯಾಧಿಕಾರಿಗಳ ಸಂಘ ಸರ್ಕಾರಕ್ಕೆ ಪತ್ರ ಬರೆದಿದೆ. ಔಷಧಿ ಕೊರತೆಯನ್ನು ಅನೇಕ ಬಾರಿ ಸರ್ಕಾರದ ಗಮನಕ್ಕೆ ತಂದಿದ್ದು, ಇದರಿಂದಲೇ ರೋಗಿಗಳು ಹಾಗೂ ವೈದ್ಯರ ನಡುವೆ ಸಂಘರ್ಷ ಹೆಚ್ಚಿದೆ ಎಂದು ಹೇಳಿದೆ. ಇದೇ ಸಂಘ ಪ್ರತಿಭಟನೆ ಕೂಡ ಮಾಡಿದೆ ಎಂದರು.

ಸಮುದಾಯ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯರನ್ನು ಬೇರೆ ಕಡೆ ನೇಮಿಸಿರುವುದರ ಬಗ್ಗೆ ಸದನದಲ್ಲಿ ಚರ್ಚೆಯಾದಾಗ ಬೇರೆ ಕಡೆ ಕಳುಹಿಸುವುದಿಲ್ಲ ಎಂದು ಹೇಳಿದ್ದರು. ಅದಾದ ಮೇಲೂ ವೈದ್ಯರನ್ನು ಬೇರೆ ಕಡೆ ಕಳಿಸಲಾಗಿದೆ. ಅಂದರೆ ಸದನಕ್ಕೆ ಸಚಿವರು ತಪ್ಪು ಉತ್ತರ ನೀಡಿದ್ದಾರೆ ಎಂದು ಭಾವಿಸಬೇಕೇ ಎಂದು ಪ್ರಶ್ನೆ ಮಾಡಿದರು.

**ಹರ್ಷ ಗುಪ್ತ ವರ್ಕ್ ಫ್ರಂ ಹೋಂ?**

ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತ ಸುಮಾರು 8 ತಿಂಗಳಿಂದ ಕಚೇರಿಗೆ ಬಂದಿಲ್ಲ. ಅವರು ವರ್ಕ್ ಫ್ರಂ ಹೋಮ್ ಮಾಡುತ್ತಾರೆಯೇ? ಹರ್ಷ ಗುಪ್ತ ಅವರೇ ಕಡತ ಸಿದ್ಧ ಮಾಡಿಕೊಂಡು ಅದಕ್ಕೆ ಸಹಿ ಹಾಕಿ ಕಳಿಸುತ್ತಾರೆ. ಅಂದರೆ ಇಲ್ಲಿ ಏಕ ಕಡತದ ಪ್ರಕ್ರಿಯೆ ನಡೆಯುತ್ತಿದೆ. ಅವರು ಅಡಳಿತ ಮತ್ತು ಸಿಬ್ಬಂದಿ ಸುಧಾರಣಾ ಇಲಾಖೆಗೆ ಪತ್ರ ಬರೆದಿದ್ದಾರೆ. ಈ ಪತ್ರದಲ್ಲಿ, ಆರೋಗ್ಯ ಇಲಾಖೆಯ ಕೆಳ ಹಂತದ ಅಧಿಕಾರಿಗಳು ಪರಿಶೀಲನೆ ನಡೆಸದೆ ಕಡತಗಳನ್ನು ಕಳುಹಿಸುತ್ತಿದ್ದಾರೆ, ಉಪ ಕಾರ್ಯದರ್ಶಿ-1



ಮೇಲ್ವಿಚಾರಣೆ ಮಾಡುತ್ತಿಲ್ಲ, ಸಮಗ್ರ ಪುನರ್‌ರಚನೆಯ ಅಗತ್ಯವಿದೆ, ಉನ್ನತ ಸ್ಥಾನದ ಅಧಿಕಾರಿಗಳ ಹುದ್ದೆಗೆ ನೇರ ನೇಮಕ ಮಾಡಿ ಎಂದು ಕೋರಿದ್ದಾರೆ. ನಂತರ ಹರ್ಷ ಗುಪ್ತ ವಿರುದ್ಧ ಸಚಿವಾಲಯ ನೌಕರರ ಸಂಘದಿಂದ ಪತ್ರ ಬರೆದಿದ್ದಾರೆ. ಈ ಪತ್ರದಲ್ಲಿ, ಹರ್ಷ ಗುಪ್ತ ತಮ್ಮ ವ್ಯಾಪ್ತಿ ಮೀರಿ ಉದ್ಧಟತನದಿಂದ ಪತ್ರ ಬರೆದಿದ್ದಾರೆ, ಈ ಪತ್ರವನ್ನು ಹಿಂಪಡೆಯಬೇಕು, ಈ ರೀತಿ ಅಪಮಾನ ಹಾಗೂ ನಿಂದನೆಯ ಪದ ಬಳಸಿ ನೌಕರರ ಮನೋಸ್ಥೈರ್ಯ ಕುಗ್ಗಿಸುವ ಪ್ರಯತ್ನವು ಅವರ ವಿಚಿತ್ರ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ, ಇದು ಸಮರ್ಥ ಅಧಿಕಾರಿಯ ಲಕ್ಷಣವಲ್ಲ ಎಂದು ಬರೆದಿದ್ದಾರೆ. ಅಂದರೆ ಇದು ಅಧಿಕಾರಿ – ಸಿಬ್ಬಂದಿ ನಡುವೆ ಸಂಘರ್ಷ ನಡೆಯುತ್ತಿದೆ. ಇದರಿಂದ ಆರೋಗ್ಯ ಇಲಾಖೆಯ ಸುಧಾರಣೆ ಹೇಗಾಗುತ್ತದೆ ಎಂದು ಅಶೋಕ್ ಪ್ರಶ್ನಿಸಿದರು.

**ಅನುದಾನ ಕೊರತೆ:** ಪಿಆರ್‌ಎಸ್ ಎಂಬ ಸಂಸ್ಥೆ ನಡೆಸಿದ ಅಧ್ಯಯನದ ಪ್ರಕಾರ, ದೇಶದ ಬಜೆಟ್‌ನಲ್ಲಿ ಆರೋಗ್ಯಕ್ಕಾಗಿ ಖರ್ಚು ಮಾಡುವ ಮೊತ್ತ ಸರಾಸರಿ 6.2% ಇದೆ. ಕರ್ನಾಟಕದ ಪಾಲು 4.9% ಇದೆ. ದೆಹಲಿ ಸರ್ಕಾರ 14.5%, ರಾಜಸ್ಥಾನ ಸರ್ಕಾರ 8.4% ಖರ್ಚು ಮಾಡುತ್ತಿದೆ. ಆರೋಗ್ಯಕ್ಕಾಗಿ ಹೆಚ್ಚು ಹಣ ಕೊಡುತ್ತಿದ್ದೇವೆ ಎಂದು ಕಾಂಗ್ರೆಸ್ ಸರ್ಕಾರ ಹೇಳಿದರೂ, ಖರ್ಚು ಮಾಡುವ ಮೊತ್ತ ಕಡಿಮೆಯಾಗಿದೆ. ಸರ್ಕಾರದ ಪ್ರಕಾರ ಔಷಧಿ ಖರೀದಿಯಾಗಿದೆ, ಟೆಂಡರ್ ಆಗಿದೆ. ಹಾಗಾದರೆ ಎಷ್ಟು ಹಣ ಖರ್ಚು ಮಾಡಲಾಗಿದೆ, ಎಷ್ಟು ಔಷಧಿ ಖರೀದಿಯಾಗಿದೆ, ಎಷ್ಟು ಪೂರೈಕೆಯಾಗಿದೆ ಎಂದು ಸ್ಪಷ್ಟೀಕರಣ ನೀಡಬೇಕು. ಮೊದಲು ಅಧಿಕಾರಿಗಳ ನಡುವಿನ ಜಗಳ ತಪ್ಪಿಸಿ ಪ್ರಧಾನ ಕಾರ್ಯದರ್ಶಿ ಕಚೇರಿಗೆ ಬರುವಂತೆ ಮಾಡಬೇಕಿದೆ ಎಂದು ಅಶೋಕ್ ಆಗ್ರಹಿಸಿದರು.

### ಡಿ.ವಿ.ಗುಂಡಪ್ಪ ದೂರದರ್ಶಿತ್ವ ಬಣ್ಣಿಸಿದ ಕೆಯುಡಬ್ಲ್ಯುಜೆ ಅಧ್ಯಕ್ಷ ಶಿವಾನಂದ ತಗಡೂರು

## ಪತ್ರಕರ್ತರ ಹಿತರಕ್ಷಣೆಗಾಗಿ 95 ವರ್ಷಗಳ ಹಿಂದೆಯೇ ಸಂಘಟನೆ

**ಬೆಂಗಳೂರು, ಮಾ.17:** ಆಧುನಿಕ ಕನ್ನಡ ಸಾಹಿತ್ಯದ ಸರ್ವಜ್ಞ, ಸಾಹಿತ್ಯ ದಿಗ್ಗಜ ಡಿ.ವಿ.ಗುಂಡಪ್ಪನವರು ಕೇವಲ ಸಾಹಿತಿಯಷ್ಟೇ ಅಲ್ಲದೆ, ಪತ್ರಕರ್ತರ ಹಿತರಕ್ಷಣೆಗಾಗಿ 95 ವರ್ಷಗಳ ಹಿಂದೆಯೇ ಸಂಘಟನೆಯನ್ನು ಕಟ್ಟಿದ ದೂರದರ್ಶಿ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಬಣ್ಣಿಸಿದರು.

ನಗರದಲ್ಲಿ ಬೆಂಗಳೂರು ಜಿಲ್ಲಾ ಘಟಕದ ನೂತನ ಕಚೇರಿ ಪೂಜೆ ಹಾಗೂ ಡಿ.ವಿ.ಜಿ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಡಿ.ವಿ.ಜಿ ಅವರು ಅಂದು ಹಾಕಿಕೊಟ್ಟ ಅಡಿಪಾಯದ ಮೇಲೆ ಇಂದು 'ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ' ಹೆಮ್ಮರವಾಗಿ ಬೆಳೆದಿದೆ. 10,000 ಸದಸ್ಯರನ್ನು ಹೊಂದಿರುವ ಇದು ದೇಶದ ಅತಿದೊಡ್ಡ ಸಂಘಟನೆಗಳಲ್ಲಿ ಒಂದಾಗಿದೆ. ಹಿರಿಯ ಪತ್ರಕರ್ತ ಖಾದ್ರಿ ಶಾಮಣ್ಣ ಸಮಿತಿಯ ಶಿಫಾರಸಿನ ಮೇರೆಗೆ ಹುಬ್ಬಳ್ಳಿಯಲ್ಲಿ ನಡೆದ




ಸಮ್ಮೇಳನದಲ್ಲಿ ಈ ಸಂಘಕ್ಕೆ ಮರುನಾಮಕರಣ ಮಾಡಲಾದ ಇತಿಹಾಸವನ್ನು ತಗಡೂರು ಸ್ಮರಿಸಿದರು.ಕರ್ನಾಟಕ ಭೂ ಕಬಳಿಕೆ ನಿಷೇಧ ನ್ಯಾಯಾಲಯದ (ಕಂದಾಯ)ಸದಸ್ಯ ಕೆ.ಎಚ್. ಅಶ್ವತ್ಥನಾರಾಯಣ ಮಾತನಾಡಿ, ಡಿ.ವಿ.ಜಿ ಅವರು ಪ್ರೌಢಶಾಲೆವರೆಗೆ ಓದಿದ್ದರೂ, ಕನ್ನಡ, ಇಂಗ್ಲಿಷ್ ಮತ್ತು ಸಂಸ್ಕೃತ ಭಾಷೆಯಲ್ಲಿ ಅವರು ಹೊಂದಿದ್ದ ಪಾಂಡಿತ್ಯ ಅಪ್ರತಿಮವಾದುದು. ಅವರ "ಮಂಕುತಿಮ್ಮನ ಕಗ್ಗ" ಅಪ್ರತಿಮ ಕೃತಿಯು ಸಮಾಜದ ಪ್ರತಿಯೊಂದು ಸಮಸ್ಯೆಗೆ ಪರಿಹಾರ ನೀಡುವ ಶಕ್ತಿ ಹೊಂದಿವೆ ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜುನಯ್ಯ ಮಾತನಾಡಿ, "ದೇಶಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ಅವರ ಸಂವಿಧಾನ ಹೇಗೋ, ಪತ್ರಕರ್ತರು ಮತ್ತು ಸಾಮಾನ್ಯ ಜನರ ಬದುಕಿಗೆ ಡಿ.ವಿ.ಜಿ ಅವರ 'ಮಂಕುತಿಮ್ಮನ ಕಗ್ಗ' ಸಂವಿಧಾನದಂತಿದೆ. ಡಿ.ವಿ.ಜಿ ಅವರು ಎಷ್ಟೇ ಬಡತನವಿದ್ದರೂ ಸರ್ಕಾರದ ಚೆಕ್‌ಗಳನ್ನು ನಗದೀಕರಿಸದೆ ಸ್ವಾಭಿಮಾನಿಯಾಗಿ ಬದುಕಿದ ಆದರ್ಶ ವ್ಯಕ್ತಿತ್ವದವರು," ಎಂದು ಕೊಂಡಾಡಿದರು.

ಹಿರಿಯ ಪತ್ರಕರ್ತ ಬೋಪಯ್ಯ ಅವರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಂಸ್ಥಾಪಕರಾದ ಡಿ.ವಿ.ಗುಂಡಪ್ಪನವರ ಹುಟ್ಟುಹಬ್ಬದ ದಿನದಂದೇ ಬೆಂಗಳೂರು ಜಿಲ್ಲಾ ಘಟಕ ಇಂದಿನಿಂದಲೇ ತಮ್ಮ ಕಚೇರಿ ಪೂಜೆ ಮಾಡುವುದರೊಂದಿಗೆ ಅವರ ಜನ್ಮದಿನಾಚರಣೆ ಕಾರ್ಯಕ್ರಮದೊಂದಿಗೆ ಕಾರ್ಯಾರಂಭ ಮಾಡಿದೆ. ಇದೊಂದು ಶುಭ ಸೂಚನೆ ಎಂದರು.

### ರಾಜ್ ಕುಟುಂಬದವರು, ಸಾವಿರಾರು ಅಭಿಮಾನಿಗಳು ಸಮಾಧಿಗೆ ಭೇಟಿ, ಪುಷ್ಪನಮನ

## ಪ್ರೇರಣಾ ದಿನವಾಗಿ ಪುನೀತ್ ರಾಜ್‌ಕುಮಾರ್ ಜನ್ಮದಿನಾಚರಣೆ

**ಬೆಂಗಳೂರು, ಮಾ.17:** ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರ 51ನೇ ಜನ್ಮದಿನವನ್ನು ಅಭಿಮಾನಿಗಳು ಹಾಗೂ ಕುಟುಂಬಸ್ಥರು ಪ್ರೇರಣಾ ದಿನವಾಗಿ ಆಚರಿಸಿದರು. ನಗರದ ಕಂಠೀರವ ಸ್ಟುಡಿಯೋ ಆವರಣದಲ್ಲಿರುವ ಅವರ ಸಮಾಧಿಗೆ ಕುಟುಂಬಸ್ಥರು ಹಾಗೂ ಸಾವಿರಾರು ಅಭಿಮಾನಿಗಳು ಭೇಟಿನೀಡಿ ಪುಷ್ಪ ನಮನ ಸಲ್ಲಿಸಿದರು.

ಡಾ. ಪುನೀತ್ ರಾಜ್‌ಕುಮಾರ್ ಅವರು ನಮ್ಮೊಂದಿಗಿದ್ದರೆ ಇಂದು ತಮ್ಮ 51ನೇ ಜನುಮ ದಿನದ ಸಂಭ್ರಮಾಚರಣೆಯಲ್ಲಿ ತೊಡಗಿಸಿಕೊಂಡಿರುತ್ತಿದ್ದರು. ಆದರೆ ಅವರ ಅಕಾಲಿಕ ಅಗಲಿಕೆಯಿಂದ ನಾಲ್ಕು ವರ್ಷಗಳಾದರೂ ಅಭಿಮಾನಿಗಳ ಮನಸ್ಸಿನಲ್ಲಿ ಅವರ ನೆನಪುಗಳು ಇನ್ನೂ ಜೀವಂತವಾಗಿವೆ.



ಪತ್ನಿ ಅಶ್ವಿನಿ ಪುನೀತ್ ರಾಜ್‌ಕುಮಾರ್, ಸಹೋದರರಾದ ಶಿವರಾಜ್‌ಕುಮಾರ್, ರಾಘವೇಂದ್ರ ರಾಜ್‌ಕುಮಾರ್, ಕುಟುಂಬದ ಸದಸ್ಯರಾದ ವಿನಯ್ ರಾಜ್‌ಕುಮಾರ್ ಮತ್ತು ಯುವರಾಜ್ ಕುಮಾರ್ ಸೇರಿದಂತೆ ಇತರ ಬಂಧುಗಳು ಸಮಾಧಿಗೆ ಪುಷ್ಪನಮನ ಸಲ್ಲಿಸಿ, ಸಮಾಧಿ ಮುಂದೆ ಕೇಕ್ ಕತ್ತರಿಸಿ ಅಪ್ಪುವನ್ನು ಸ್ಮರಿಸಿದರು.

ಪುನೀತ್ ರಾಜ್‌ಕುಮಾರ್ ಅವರು 2021ರ ಅಕ್ಟೋಬರ್ 29ರಂದು ಹೃದಯಾಘಾತದಿಂದ ಅಕಾಲಿಕವಾಗಿ ನಿಧನರಾದರು. ಅವರ ಅಗಲಿಕೆಯಿಂದ ಚಿತ್ರರಂಗ ಮಾತ್ರವಲ್ಲ, ಕೋಟ್ಯಂತರ ಅಭಿಮಾನಿಗಳಿಗೂ ತುಂಬಲಾರದ ನಷ್ಟವಾಗಿದೆ.

**ಜನಸಾಗರದ ಭಾವುಕ ನಮನ**

ಜನುಮದಿನದ ಅಂಗವಾಗಿ ಸಮಾಧಿಗೆ ವಿಶೇಷವಾಗಿ ಹೂವಿನ ಅಲಂಕಾರ ಮಾಡಲಾಗಿತ್ತು. ಕಳೆದ ರಾತ್ರಿ ಅಭಿಮಾನಿಗಳು ಸಮಾಧಿ ಬಳಿ ಜಮಾಯಿಸಿ ಪಟಾಕಿ ಸಿಡಿಸಿ, ಸಿಹಿ ಹಂಚಿದರು.ಇಂದು ಮುಂಜಾನೆಯಿಂದಲೇ ಸಾವಿರಾರು ಅಭಿಮಾನಿಗಳು ಕಂಠೀರವ ಸ್ಟುಡಿಯೋ ಆವರಣಕ್ಕೆ ಆಗಮಿಸಿ ಸಮಾಧಿಗೆ ಪುಷ್ಪಗುಚ್ಛ ಅರ್ಪಿಸಿ ಕೇಕ್ ಕತ್ತರಿಸಿ ತಮ್ಮ ನೆಚ್ಚಿನ ನಟನಿಗೆ ಜನುಮ ದಿನದ ಶುಭಾಶಯ ಕೋರಿದರು.

## ಸೇವಾ ವಲಯದ ರಾಷ್ಟ್ರೀಯ ಸಮೀಕ್ಷೆ ಕಾರ್ಯಾಗಾರಕ್ಕೆ ಚಾಲನೆ

**ಬೆಂಗಳೂರು, ಮಾ.17:** ಏಪ್ರಿಲ್ 1ರಿಂದ ಆರಂಭವಾಗಲಿರುವ ಸೇವಾ ವಲಯದ ರಾಷ್ಟ್ರೀಯ ಸಮೀಕ್ಷೆ ಕುರಿತ ತರಬೇತಿ ಕಾರ್ಯಾಗಾರಕ್ಕೆ ಬೆಂಗಳೂರಿನಲ್ಲಿ ಚಾಲನೆ ನೀಡಲಾಯಿತು.

ಸಂಘಟಿತ ಸೇವಾ ವಲಯದ ಬಲವರ್ಧನೆ, ಉದ್ಯೋಗ, ಬಂಡವಾಳ ಹೂಡಿಕೆ ಸೇರಿದಂತೆ ವಿವಿಧ ದತ್ತಾಂಶಗಳನ್ನು ಸಂಗ್ರಹಿಸುವ ಉದ್ದೇಶದಿಂದ ಈ ಸಮೀಕ್ಷೆ ನಡೆಸಲಾಗುತ್ತಿದೆ. ರಾಷ್ಟ್ರೀಯ ಅಂಕಿಅಂಶಗಳ ಕಚೇರಿಯ ಉಪನಿರ್ದೇಶಕ ರಾದ ಡಾ.ಪಿ.ಟಿ ಶುಭಾ, ಸಹಾಯಕ ನಿರ್ದೇಶಕರಾದ ಎನ್.ಎಸ್ ಪಾಟೀಲ್, ಬಿ.ಮುರಳಿ ಶ್ರೀಧರ್, ಬೆಂಗಳೂರಿನ ಗುಣಮಟ್ಟ ನಿಯಂತ್ರಣ ವಿಭಾಗದ ಜಂಟಿ ನಿರ್ದೇಶಕರಾದ ನೀತು ಕೆ. ಥಾಮಸ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಡಾ.ಪಿ.ಟಿ ಶುಭಾ ಮಾತನಾಡಿ, ಆರೋಗ್ಯ, ಶಿಕ್ಷಣ, ಐಟಿ ಸೇರಿದಂತೆ ಎಲ್ಲ ಸೇವಾವಲಯಗಳು ಒಟ್ಟು ದೇಶೀಯ ಉತ್ಪನ್ನದಲ್ಲಿ ಶೇಕಡಾ 60ರಷ್ಟು ಕೊಡುಗೆ ನೀಡುತ್ತಿವೆ. ಇದರಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿದೆ. ಆದ್ದರಿಂದ ರಾಜ್ಯದಿಂದಲೇ ಸೇವಾವಲಯದ ಸಮೀಕ್ಷೆ ಆರಂಭಿಸಲಾಗುತ್ತಿದೆ ಎಂದು ತಿಳಿಸಿದರು.

## ಆಟೋಗಳಿಗೆ ಅನಿಲ ಕೊರತೆ: ಚಾಲಕರ ಸಂಘಟನೆಗಳಿಂದ ಬೃಹತ್ ಪ್ರತಿಭಟನೆ

**ಬೆಂಗಳೂರು, ಮಾ.17:** ಆಟೋಗಳಿಗೆ ಸಿಲಿಂಡರ್ ಕೊರತೆ ಉಂಟಾಗಿರುವುದನ್ನು ವಿರೋಧಿಸಿ ನಗರದ ಫ್ರೀಡಂ ಪಾರ್ಕ್‌ನಲ್ಲಿ ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್, ಸಂಚಾರಿ ಚಾಲಕರ ಸೇವಾ ಟ್ರಸ್ಟ್ ಹಾಗೂ ಸ್ನೇಹಜೀವಿ ಚಾಲಕರ ಸಂಘ ಬೃಹತ್ ಪ್ರತಿಭಟನೆ ನಡೆಸಿತು.

ಫ್ರಿಡಂ ಪಾರ್ಕ್ ಮುಂಭಾಗ ಆಟೋಗೆ ಹಗ್ಗ ಕಟ್ಟಿ ಎಳೆಯುವ ಹಾಗೂ ಅಡುಗೆಯ ಖಾಲಿ ಸಿಲಿಂಡರ್ ಪ್ರದರ್ಶಿಸಿ ಪ್ರತಿಭಟನೆ ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಈ ಸಂದರ್ಭದಲ್ಲಿ ಮಾತನಾಡಿದ ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ, ಆಟೋ ಚಾಲಕರಿಗೆ ಕೇಂದ್ರ ಸರ್ಕಾರದಿಂದ ಅನ್ಯಾಯವಾಗುತ್ತಿದ್ದು, ಪ್ರತಿಯೊಬ್ಬ ಆಟೋಚಾಲಕರ ಕುಟುಂಬಕ್ಕೆ ಹತ್ತು ಸಾವಿರ ರೂ. ಪರಿಹಾರ ನೀಡಬೇಕು. ಆಟೋ ಚಾಲಕರ ಮನೆಗಳಲ್ಲಿ ಅಡುಗೆ




ಸಿಲಿಂಡರ್ ದೊರೆಯುತ್ತಿಲ್ಲ.

ಜೀವನದ ರಥ ಮುನ್ನಡೆಸುವ ಆಟೋಗಳಿಗೆ ಬಂಕ್‌ಗಳಲ್ಲಿ ಅನಿಲ ದೊರೆಯುತ್ತಿಲ್ಲ. ಇದರಿಂದ ಆಟೋ ಚಾಲಕರ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದರು. ಸ್ನೇಹಜೀವಿ ಚಾಲಕರ ಸಂಘದ ಅಧ್ಯಕ್ಷ ಸಂತೋಷ್ ಕುಮಾರ್, ಪ್ರಧಾನ ಕಾರ್ಯದರ್ಶಿ ರಾಜು ಕನ್ನಡಿಗ, ಸಂಚಾರಿ ಸತೀಶ್ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಆರೆಸ್ಸೆಸ್ ನಿಷೇಧ ನೆಹರೂ ಅವರಿಂದಲೂ ಆಗಲಿಲ್ಲ: ಕೆ.ಎಸ್. ಈಶ್ವರಪ್ಪ ವ್ಯಂಗ್ಯ



**ಕಲಬುರಗಿ, ಮಾ.17:** ದೇಶಭಕ್ತಿ ಸಂಘಟನೆಯಾದ ರಾಷ್ಟ್ರೀಯ ಸ್ವಯಂಸೇವಕ ಸಂಘವನ್ನು ನಿಷೇಧ ಮಾಡುವುದು ಇಂದಿರಾ ಗಾಂಧಿ ಅವರ ಅಪ್ಪ ಜವಹರಲಾಲ್ ನೆಹರೂ ಅವರಿಂದಲೂ ಆಗಿಲ್ಲ. ಹೀಗಾಗಿ, ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ ಮಾತ್ರಕ್ಕೆ ನಿಷೇಧವಾಗುವುದಿಲ್ಲ. ಅಪ್ಪನ ಪ್ರಭಾವದಿಂದ ಸಚಿವರಾಗಿ ರುವ ಪ್ರಿಯಾಂಕ್ ಇನ್ನೂ ಎಳಸು' ಎಂದು ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ವ್ಯಂಗ್ಯವಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ದೇಶದ ಹೆಮ್ಮೆಯ ದೇಶಭಕ್ತರ ಸಂಘಟನೆ ಯಾದ ಆರ್‌ಎಸ್‌ಎಸ್‌ಗೆ ಇದೀಗ 100 ವರ್ಷಗಳು ತುಂಬಿವೆ. ಪ್ರತಿ ವರ್ಷ ವಿವಿಧೆಡೆ ಲಕ್ಷಾಂತರ ಜನರು ಸೇರಿ ನಗರ, ಗ್ರಾಮೀಣ ಪ್ರದೇಶದಲ್ಲಿ ಪಥಸಂಚಲನ ನಡೆಸುತ್ತಾರೆ. ಆದರೂ, ಒಂದೇ ಒಂದು ಗಲಾಟೆ ಆಗಿಲ್ಲ. ಇಂತಹ ಸಂಘಟನೆಯನ್ನು ನಿಷೇಧ ಮಾಡುವ ಬಗ್ಗೆ ಮಾತನಾಡುವುದು ಖಂಡನೀಯ' ಎಂದರು.

ಆರ್‌ಎಸ್‌ಎಸ್ ಹಾಗೂ ದೇಶದ ಗುಪ್ತಚರ ಸಂಸ್ಥೆ 'ರಾ'ವನ್ನು ನಿಷೇಧಿಸುವ ಕುರಿತು ಅಮೆರಿಕದ ಸರ್ಕಾರಿ ಆಯೋಗವೊಂದು ವರದಿ ನೀಡಿರುವುದು ಖಂಡನೀಯ. ಭಾರತದಲ್ಲಿ ಆರ್‌ಎಸ್‌ಎಸ್ ಮಾಡಿದ ಜನಕಲ್ಯಾಣದ ಅರಿವು ಆಯೋಗದ ವರದಿ ತಯಾರಿಸಿದವರಿಗೆ ಇದ್ದಂತಿಲ್ಲ ಎಂದು ಈಶ್ವರಪ್ಪ ಹೇಳಿದರು.

'ಮುಂಬರುವ ಉಪಚುನಾವಣೆ ಹಾಗೂ ವಿಧಾನಪರಿಷತ್ ಚುನಾವಣೆಗಳಲ್ಲಿ ನಾನು ಯಾವುದೇ ಪಕ್ಷದ ಪರ ಪ್ರಚಾರ ಮಾಡುವುದಿಲ್ಲ. ಸಮಾಜವಾದಿ ಪಕ್ಷದ ನಾಯಕ ಅಖಿಲೇಶ್ ಯಾದವ್ ಅವರು ಕರೆಮಾಡಿ ರಾಜ್ಯದಲ್ಲಿ ಪಕ್ಷದ ನೇತೃತ್ವ ವಹಿಸುವಂತೆ ಮನವಿ ಮಾಡಿದ್ದರು. ಕಾಂಗ್ರೆಸ್‌ನವರೂ ತಮ್ಮ ಪಕ್ಷಕ್ಕೆ ಆಹ್ವಾನಿಸಿದ್ದರು. ನನ್ನ ಜೀವನದಲ್ಲಿ ಬಿಜೆಪಿ ಹೊರತುಪಡಿಸಿ ಬೇರೆ ಪಕ್ಷವನ್ನು ಸೇರುವುದಿಲ್ಲ' ಎಂದರು.

ಸಿದ್ದರಾಮಯ್ಯ ಅವರು ಅಲ್ಪಸಂಖ್ಯಾತರ ಅಭಿವೃದ್ಧಿಗೆ 1000 ಕೋಟಿ ನೀಡಿದ್ದಾರೆ. ಅಲ್ಪಸಂಖ್ಯಾತರ ಸಾಲ ಮನ್ನಾ, ಹಜ್ ಭವನ ನಿರ್ಮಾಣಕ್ಕೆ ಮುಂದಾಗಿದ್ದಾರೆ. ಅವರಿಗೆ ದಲಿತರು ಹಿಂದುಳಿದವರು ಕಾಣಲಿಲ್ಲವೇ ಎಂದು ಈಶ್ವರಪ್ಪ ಕಿಡಿಕಾರಿದರು.

**ರಾಜ್ಯ ಬಿಜೆಪಿಯಲ್ಲಿ ಕುಟುಂಬ ರಾಜಕಾರಣ ಅಂತ್ಯವಾದ ಮೇಲೆ ಪಕ್ಷ ಸೇರ್ಪಡೆ**

ಪ್ರಧಾನಿ ನರೇಂದ್ರ ಮೋದಿ ಅವರು ಕುಟುಂಬ ರಾಜಕಾರಣವನ್ನು ಒಪ್ಪುವುದಿಲ್ಲ. ಆದರೆ ರಾಜ್ಯ ಬಿಜೆಪಿಯಲ್ಲಿ ಕುಟುಂಬ ರಾಜಕಾರಣಕ್ಕೆ ಮಣೆ ಹಾಕಿದ್ದರಿಂದ ಪಕ್ಷದ ನಾಯಕರು ಸ್ವಜನ ಪಕ್ಷಪಾತದಲ್ಲಿ ತೊಡಗಿದ್ದರಿಂದ ವಿಧಾನಸಭೆ ಹಾಗೂ ಲೋಕಸಭಾ ಚುನಾವಣೆಯಲ್ಲಿ ಹಿನ್ನಡೆಯುಂಟಾಯಿತು ಎಂದು ವಿಜಯೇಂದ್ರ ಅವರ ಹೆಸರು ಪ್ರಸ್ತಾಪಿಸದೇ ಪರೋಕ್ಷವಾಗಿ ಟೀಕಿಸಿದರು.

ರಾಜ್ಯ ಬಿಜೆಪಿಯಲ್ಲಿ ಕುಟುಂಬ ರಾಜಕಾರಣ ಅಂತ್ಯವಾದ ಮೇಲೆ ಪಕ್ಷ ಸೇರುತ್ತೇನೆ. ನಾನೇನು ಸನ್ಯಾಸಿಯಲ್ಲ. ಮಾತುಕತೆಗೆ ಕುಳಿತಾಗ ಯಾವ ಸ್ಥಾನ ನೀಡುತ್ತಾರೋ ಎಂದು ನೋಡಿಕೊಂಡು ಮುಂದಿನ ನಿರ್ಧಾರ ತೆಗೆದುಕೊಳ್ಳುತ್ತೇನೆ ಎಂದು ಈಶ್ವರಪ್ಪ ಹೇಳಿದರು.

# ಖಾಲಿ ಹುದ್ದೆಗಳ ಭರ್ತಿಗೆ ಆಗ್ರಹಿಸಿ ಎಬಿವಿಪಿ ಹೋರಾಟ

**ಬೆಳಗಾವಿ, ಮಾ.17:** ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಸಂಘಟನೆ (ಎಬಿವಿಪಿ) ನೇತೃತ್ವದಲ್ಲಿ ಬೆಳಗಾವಿಯಲ್ಲಿ ಬೃಹತ್ ಪ್ರತಿಭಟನಾ ರ‍್ಯಾಲಿ ನಡೆಸಲಾಯಿತು. ಬೆಳಗಾವಿಯ ಸರ್ದಾರ್ ಮೈದಾನದಿಂದ ಪಾದಯಾತ್ರೆ ಮೂಲಕ ಚೆನ್ನಮ್ಮ ವೃತ್ತಕ್ಕೆ ಆಗಮಿಸಿ ಎಬಿವಿಪಿ ಕಾರ್ಯಕರ್ತರು ಚೆನ್ನಮ್ಮ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಪ್ರತಿಭಟನಾ ಸ್ಥಳಕ್ಕೆ ಬೆಳಗಾವಿ ಜಿಲ್ಲಾಧಿಕಾರಿ ಮಹಮ್ಮದ್ ರೋಷನ್ ಬರಬೇಕೆಂದು ಎಬಿವಿಪಿ ಕಾರ್ಯಕರ್ತರು ಪಟ್ಟುಹಿಡಿದರು. ಅನುಮತಿ ಇಲ್ಲದೇ ಪ್ರತಿಭಟನೆ ನಡೆಸುತ್ತಿದ್ದ ಹಿನ್ನೆಲೆಯಲ್ಲಿ ಪೊಲೀಸರು ಹಾಗೂ ಎಬಿವಿಪಿ ಕಾರ್ಯಕರ್ತರ ನಡುವೆ ವಾಗ್ವಾದ ಕೂಡ ನಡೆಯಿತು. ಪ್ರತಿಭಟನೆ ನಿಲ್ಲುವಂತೆ ಹೇಳಿದರೂ ಬಗ್ಗದ ಎಬಿವಿಪಿ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ 2.50ಲಕ್ಷಕ್ಕೂ ಹೆಚ್ಚಿನ ಹುದ್ದೆಗಳು ಖಾಲಿ ಇದ್ದು, ಕಳೆದ ಐದು ವರ್ಷಗಳಿಂದ ನೇಮಾಕತಿ ಮಾಡಿಕೊಂಡಿಲ್ಲ. ಸರ್ಕಾರದ ವಿಳಂಬ ಧೋರಣೆ ಖಂಡನೀಯ ಎಂದು ಪ್ರತಿಭಟನಾಕಾತ್ರರು ಕಿಡಿಕಾರಿದರು.

ಲಕ್ಷಾಂತರ ಹುದ್ದೆಗಳು ಖಾಲಿ ಇದ್ದರೂ ಸರ್ಕಾರ ನೇಮಕಾತಿ ಮಾಡಿಕೊಳ್ಳದೆ ಮುಂದೂಡುತ್ತಿರುವುದು ಯುವಕ ಭವಿಷ್ಯಕ್ಕೆ ಕುತ್ತುತಂದಿದೆ. ತಕ್ಷಣ ನೇಮಕಾತಿ ಆದೇಶ ಹೊರಡಿಸಬೇಕು ಎಂದು ಆಗ್ರಹಿಸಿದರು.

# ಕಲಬುರಗಿ – ಬೀದರ್‌ಗೆ ವಿಮಾನ ಸೇವೆ ಆರಂಭಿಸಲು ಸಂಸ್ಥೆಗಳಿಗೆ ಸಚಿವರ ಒತ್ತಾಯ




**ಕಲಬುರಗಿ, ಮಾ. 17:** ತೊಗರಿ ಕಣಜ ಕಲಬುರಗಿ ಮತ್ತು ಬೀದರ್‌ಗೆ ವಿಮಾನ ಸೇವೆ ಸ್ಥಗಿತಗೊಂಡಿದ್ದು, ಪುನಃ ಆರಂಭಿಸಬೇಕು ಎಂದು ಕಲ್ಯಾಣ ಕರ್ನಾಟಕ ಭಾಗದ ಸಚಿವರು, ಶಾಸಕರು ಆಗ್ರಹಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ವಿಮಾನ ಸಂಸ್ಥೆಗಳೊಂದಿಗೆ ನಡೆದ ಪ್ರಮುಖ ಸಭೆಯಲ್ಲಿ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್, ಸಚಿವರಾದ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್, ಬೀದರ ಜಿಲ್ಲೆಯಿಂದ ಪೌರಾಡಳಿತ ಸಚಿವ ರಹೀಮ್ ಖಾನ್ ಮತ್ತು ಕೆಕೆಆರ್‌ಡಿಬಿ ಅಧ್ಯಕ್ಷ ಡಾ. ಅಜಯ್‌ಸಿಂಗ್ ಅವರು, ವಿಮಾನಯಾನ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಸುದೀರ್ಘ ಚರ್ಚೆ ನಡೆಸಿ, ವಿಮಾನ ಸೇವೆಗಳನ್ನು ಪುನಃ ಪ್ರಾರಂಭಿಸುವಂತೆ ಒತ್ತಾಯಿಸಿದರು. ಸಭೆಯಲ್ಲಿ ಇಂಡಿಗೋ, ಏರ್ ಇಂಡಿಯಾ, ಅಲಯನ್ಸ್ ಏರ್, ಸ್ಟಾರ್ ಏರ್ ಮತ್ತು ಆಕಾಶ ಏರ್‌ನ ಅಧಿಕಾರಿಗಳು, ರಾಜ್ಯ ಸರ್ಕಾರಿ ಹಿರಿಯ ಅಧಿಕಾರಿಗಳಾದ ಆರ್. ವಿಶಾಲ್ ಮತ್ತು ಖುಷ್ಬು ಚೌಧರಿ ಅವರು ಉಪಸ್ಥಿತರಿದ್ದರು.

2019 ರಿಂದ ಅಭಿವೃದ್ಧಿಪಡಿಸಿದ ಕಲಬುರಗಿಯಲ್ಲಿ 742 ಎಕರೆ ಭೂಮಿ ಸೇರಿದಂತೆ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (ಎಎಐ) ನಿರ್ವಹಿಸುವ ಸೌಲಭ್ಯಗಳನ್ನು ಬಳಸಿಕೊಂಡು ಕಾರ್ಯಾಚರಣೆ ನಡೆಸುವ ಕುರಿತು ಚರ್ಚೆಗಳು ನಡೆದವು. ಎಲ್ಲಾ ವಿಮಾನಗಳ ಕಾರ್ಯಾಚರಣೆಗೆ ನಾವು ಬದ್ಧರಾಗಿದ್ದೇವೆ ಎಂದು ವಿಮಾನಯಾನ ನಿರ್ವಾಹಕರೊಬ್ಬರು ಹೇಳಿದರು. ಇದನ್ನು ಇತರ ರಾಜ್ಯಗಳು ಮತ್ತು ಬೆಂಗಳೂರಿಗೆ ದೈನಂದಿನ ಸೇವೆಗಳಿಗಾಗಿ ಅಭಿವೃದ್ಧಿಪಡಿಸಬಹುದು ಎಂದು ಮತ್ತೊಬ್ಬ ವಿಮಾನ ಸಂಸ್ಥೆಯವರು ಅಭಿಪ್ರಾಯಪಟ್ಟರು.

ಇನ್ನೊಂದು ವಿಮಾನಯಾನ ಸಂಸ್ಥೆಯ ಅಧಿಕಾರಿಗಳು ಮಾತನಾಡಿ, ಬೀದರ್‌ಗೆ ಬೆಳಗಿನ ಸೇವೆಗಳು ಮತ್ತು ಬೆಂಗಳೂರಿನಿಂದ ಕಲಬುರಗಿಗೆ ಸಂಜೆ ಸೇವೆಗಳನ್ನು ನೀಡಲು ಯೋಜಿಸುತ್ತಿದೆ. ಇದರಿಂದ ಹೆಚ್ಚಿನ ಪ್ರಯಾಣಿಕರಿಗೆ ಅನುಕೂಲವಾಗಲಿದೆ. ಪ್ರಯಾಣಿಕರೂ ಕೂಡ ಬೆಂಗಳೂರಿನಿಂದ ತಮ್ಮ ಕೆಲಸಗಳನ್ನು ಮುಗಿಸಿಕೊಂಡು ಸಂಜೆ ಅಲ್ಲಿಂದ ಕಲಬುರಿಗೆ ಹೊರಡಲು ಬಯಸುತ್ತಾರೆ. ನಮಗೂ ಪ್ರಯಾಣಿಕರು ಹೆಚ್ಚಾಗಿ ಸಿಗುತ್ತಾರೆ ಎಂದು ಹೇಳಿದರು.

ಪ್ರಮುಖ ವಿಮಾನಯಾನ ಸಂಸ್ಥೆಯು ಪ್ರಸ್ತುತ ಎರಡೂ ಸ್ಥಳಗಳಿಗೆ ಪರಿಶೀಲನೆ ನಡೆಸುತ್ತಿದೆ. ಕಲಬುರಗಿಯಿಂದ ಹೈದರಾಬಾದ್‌ಗೆ ವಿಮಾನ ಸಂಚಾರದ ಬಗ್ಗೆ ಗಮನಹರಿಸಲಾಗುತ್ತದೆ ಎಂದರು. ಬೆಂಗಳೂರು–ಕಲಬುರಗಿ ಮತ್ತು ಬೆಂಗಳೂರು–ಬೀದರ್ ವಿಮಾನಗಳಿಗೆ ಮಾರ್ಚ್ 23 ರೊಳಗೆ ದೃಢವಾದ ಉಲ್ಲೇಖಗಳು ಮತ್ತು ವಿಮಾನ ಸಂಚಾರ ಸಮಯಗಳನ್ನು ಮತ್ತು ದರಗಳ ವರದಿ ಸಲ್ಲಿಸಲು ವಿಮಾನಯಾನ ಸಂಸ್ಥೆಗಳಿಗೆ ನಿರ್ದೇಶನ ನೀಡಿದರು. ನಂತರ ಮುಂದಿನ ಸಭೆಯಲ್ಲಿ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದರು.



ಶಿವಪುತ್ರಪ್ಪ ಗೋನಾಳ ಪ್ರತಿಷ್ಠಾನದಿಂದ ರಾಯಚೂರಿನಲ್ಲಿ ನಡೆದ ಪ್ರತಿಷ್ಠಾನದ 16ನೆಯ ವಾರ್ಷಿಕೋತ್ಸವದಲ್ಲಿ ಇಳಕಲ್ಲಿನ ಚಿತ್ತರಗಿ ಸಂಸ್ಥಾನದ ಹೆಸರಿನ ಶ್ರೀವಿಜಯ ಮಹಾಂತ ಅನುಗ್ರಹ ಪ್ರಶಸ್ತಿ"ಯನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಸಿ ಸೋಮಶೇಖರ ಅವರಿಗೆ ಪ್ರದಾನ ಮಾಡಿ ಗೌರವಿಸಲಾಯಿತು. ಸಣ್ಣ ನೀರಾವರಿ. ವಿಜ್ಞಾನ ಹಾಗೂ ತಂತ್ರಜ್ಞಾನ ಖಾತೆ ಸಚಿವ ಬೋಸರಾಜು ಪ್ರಶಸ್ತಿ ಪ್ರದಾನ ಮಾಡಿದರು. ಪ್ರತಿಷ್ಠಾನದ ಅಧ್ಯಕ್ಷ ಡಾ. ಶರಣಪ್ಪ ಗೋನಾಳ, ಪ್ರತಿಭಾ ಗೋನಾಳ, ಮಾಹಿತಿ ಆಯೋಗದ ಆಯುಕ್ತ ವೆಂಕಟಸಿಂಗ್, ಜಾನಪದ ಪರಿಷತ್ ಅಧ್ಯಕ್ಷ ಡಾ.ಬಾಲಾಜಿ ಹಾಗೂ ನಾಗರಾಜ ಮಸ್ಕಿ ಇನ್ನಿತರ ಗಣ್ಯರು ಹಾಜರಿದ್ದರು.

# ಸಮಾಜದ ಒಳಿತಿಗಾಗಿ ವೀರಶೈವ–ಲಿಂಗಾಯತರು ಒಂದಾಗಲಿ: ಎಂ.ಬಿ.ಪಾಟೀಲ್




**ವಿಜಯಪುರ, ಮಾ. 17:** ನಗರದ ನವರಸಪುರದ ಸುರಭಿ ಸಿದ್ದೇಶ್ವರ ಲೇಔಟ್‌ನಲ್ಲಿ ಬಾಳೆಹೊನ್ನೂರು ರಂಭಾಪುರಿ ಪೀಠದ ಶಾಖಾ ಮಠದ ಭೂಮಿಪೂಜೆ ಕಾರ್ಯಕ್ರಮ ಶಿವರಾತ್ರಿ ವೀರಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳ ಸಾನ್ನಿಧ್ಯದಲ್ಲಿ ನಾಡಿನ ವಿವಿಧ ಮಠಾಧೀಶರ ಸಮ್ಮುಖದಲ್ಲಿ ನಡೆಯಿತು.

ರಂಭಾಪುರಿ ಪೀಠದ ಶಾಖಾ ಮಠದ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಸಚಿವ ಎಂ.ಬಿ.ಪಾಟೀಲ, ವೀರಶೈವ– ಲಿಂಗಾಯತರ ಆಚರಣೆಗಳಲ್ಲಿ ವ್ಯತ್ಯಾಸಗಳಿದ್ದರೂ ಗುರಿ ಸ್ಪಷ್ಟವಾಗಿದೆ. ಒಬ್ಬರು ಮಾನವ ಧರ್ಮಕ್ಕೆ ಜಯವಾಗಲಿ ಎಂದರೆ ಇನ್ನೊಬ್ಬರು ದಯವೇ ಧರ್ಮದ ಮೂಲ ಮತ್ತು ಕಾಯಕವೇ ಕೈಲಾಸ ಎಂಬ ತತ್ವದಲ್ಲಿ ನಂಬಿಕೆಯನ್ನಿರಿಸಿದ್ದಾರೆ.

ಹೀಗಾಗಿ ವ್ಯತ್ಯಾಸ ಏನೇ ಇದ್ದರೂ ಸಾಮಾನ್ಯ ತತ್ವದಡಿ ವೀರಶೈವ–ಲಿಂಗಾಯತರು ಒಂದಾಗಬೇಕು. ನಾಡಿಗೆ ನಮ್ಮ ಮಠಮಾನ್ಯಗಳ ಕೊಡುಗೆ ಅಪಾರ. ಕಾಯಕ, ಶಿಕ್ಷಣ, ದಾಸೋಹದ ಪರಿಕಲ್ಪನೆ ಕೊಟ್ಟವರು ಶರಣರು. ವೀರಶೈವ–ಲಿಂಗಾಯತ ಎಂಬುದು ಶ್ರೇಷ್ಠ ಪರಂಪರೆ ಎಂದರು. ವೀರಶೈವ ಲಿಂಗಾಯತದ ಉಪ ಪಂಗಡಗಳು ಬೇರೆ ಬೇರೆ ಪ್ರವರ್ಗಗಳಲ್ಲಿವೆ. ಎಲ್ಲ ಉಪ ಪಂಗಡಗಳಲ್ಲಿಯೂ ಬಡವರಿದ್ದಾರೆ. ಜಂಗಮ, ಬಣಜಿಗ, ಗಾಣಿಗ, ಪಂಚಮಸಾಲಿ ಸೇರಿದಂತೆ ಅನೇಕ ಉಪ ಪಂಗಡಗಳಲ್ಲಿರುವ ಬಡವರಿಗೆ ಉದ್ಯೋಗದಲ್ಲಿ ಮೀಸಲಾತಿ ಅವಶ್ಯಕತೆ ಇದೆ ಎಂದು ಹೇಳಿದರು.

ಹಿಂದೆ ಲಿಂಗಾಯತ ಸಮುದಾಯದ 85 ಶಾಸಕರಿದ್ದೆವು. ಬಳ್ಳಾರಿ, ರಾಯಚೂರು ಮತ್ತಿತರ ಕಡೆ ಎಸ್‌ಟಿ ಮೀಸಲು ಬಂದಿದ್ದರಿಂದ ನಮ್ಮ ಪ್ರಮಾಣ ಕಡಿಮೆಯಾಯಿತು. ನಮ್ಮಲ್ಲೂ ಬಡವರಿದ್ದಾರೆ. ಹೀಗಾಗಿ ಮೀಸಲಾತಿ ಸಿಗುವ ನಿಟ್ಟಿನಲ್ಲಿ ಶ್ರಮಿಸೋಣ ಎಂದು ತಿಳಿಸಿದರು.

ಎಂ.ಬಿ. ಪಾಟೀಲ ಸಚಿವಪಂಚಪೀಠಗಳು ವಿರಕ್ತಮಠಗಳಲ್ಲಿ ವ್ಯತ್ಯಾಸ ಇರಬಹುದು. ಮಠಾಧೀಶರು ಒಂದಾದರೆ ನಮ್ಮ ಸಮಸ್ಯೆ ಬಗೆಹರಿಯಲಿದೆ. ಜನರ ಏಳಿಗೆಗಾಗಿ ಸಾಮಾನ್ಯ ತತ್ವದಡಿ ಒಂದಾದರೆ ಎಲ್ಲರೂ ನೆಮ್ಮದಿಯಾಗಿರಬಹುದು.

# ಭವ್ಯ ಭಾರತದ ಬಸವಣ್ಣ ಪ್ರವಚನಕ್ಕೆ ಚಾಲನೆ



**ಬೀದರ್, ಮಾ. 17:** ಬಸವ ಕೇಂದ್ರದ ಬೆಳ್ಳಿ ಮಹೋತ್ಸವದ ಅಂಗವಾಗಿ ನಗರದ ಬಿ.ವಿ. ಭೂಮರಡ್ಡಿ ಕಾಲೇಜಿನ ಆವರಣದಲ್ಲಿ ಹಮ್ಮಿಕೊಂಡಿರುವ ಬೈಲೂರ ನಿಷ್ಕಲ ಮಂಟಪದ ನಿಜಗುಣಪ್ರಭು ಸ್ವಾಮೀಜಿ ಅವರ 'ಭವ್ಯ ಭಾರತದ ಬಸವಣ್ಣ' ಪ್ರವಚನ ಕಾರ್ಯಕ್ರಮಕ್ಕೆ ಸಂಜೆ ಹನಿ ಮಳೆಯಲ್ಲೇ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ವಿದ್ಯುಕ್ತ ಚಾಲನೆ ನೀಡಿದರು.

ಸಂಜೆಯಿಂದಲೇ ನಗರದಲ್ಲಿ ಬಿರುಗಾಳಿ, ಗುಡುಗು ಮಿಂಚಿನ ಆರ್ಭಟ ಶುರುವಾಗಿತ್ತು. ಅನಂತರ ತುಂತುರು ಮಳೆ ಆರಂಭಗೊಂಡಿತು. ಇದರ ನಡುವೆಯೇ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಕಾರ್ಯಕ್ರಮ ಉದ್ಘಾಟಿಸಿದರು.

ಬಳಿಕ ಸುರಿವ ಮಳೆಯಲ್ಲೇ ಮಾತನಾಡಿದ ಅವರು, ಬಸವ ಕೇಂದ್ರ 25 ವರ್ಷಗಳಿಂದ ಬಸವತತ್ವದ ಪ್ರಚಾರಕ್ಕಾಗಿ ಶ್ರಮಿಸುತ್ತಿದೆ. ಬಸವೇಶ್ವರರ ವಿಚಾರ ಹಿಂದಿಗಿಂತಲೂ ಇಂದು ಬಹಳ ಪ್ರಸ್ತುತ. ಬಸವಣ್ಣನವರ ಸಾಮಾಜಿಕ ಕ್ರಾಂತಿ ಸಮ ಸಮಾಜಕ್ಕಾಗಿ ಆಗಿರುವಂಥದ್ದು ಎಂದರು.


ಕಾಯಕ, ದಾಸೋಹದ ಆಧಾರದ ಮೇಲೆ ಸಹೋದರತ್ವ, ಸಹಬಾಳ್ವೆಯ ಸುಂದರ ಸಮಾಜ ಆಗಬೇಕೆನ್ನುವುದು ಬಸವಾದಿ ಶರಣರ ಕಾಳಜಿ ಆಗಿತ್ತು. ಸಾಮಾಜಿಕ ಅನಿಷ್ಠಗಳ ನಿವಾರಣೆ ಮಾಡಿ ವೈಚಾರಿಕತೆ, ವಾಸ್ತವಿಕತೆ ಆಧಾರದ ಮೇಲೆ ಸಮಾಜ ಕಟ್ಟುವ ಕೆಲಸ ಮಾಡಿದ್ದಾರೆ. ಅವರ ತತ್ವಾದರ್ಶಗಳು ಸದಾ ಪ್ರಸ್ತುತ ಎಂದು ಹೇಳಿದರು.

ಆಕಾಶವಾಣಿ ಕಲಾವಿದೆ ಅಶ್ವಿನಿ ರಾಜಕುಮಾರ ಹಿರೇಮಠ ವಚನ ಸಂಗೀತ ನಡೆಸಿಕೊಟ್ಟರೆ, ನೃತ್ಯಾಂಗನ ನೃತ್ಯಾಲಯ ತಂಡದವರು ವಚನ ನೃತ್ಯ ಪ್ರಸ್ತುತಪಡಿಸಿದರು. ಯುವ ಬಸವಕೇಂದ್ರದ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ ಸ್ವಾಗತಿಸಿದರು. ಬಸವ ಕೇಂದ್ರದ ಪ್ರಧಾನ ಕಾರ್ಯದರ್ಶಿ ಶಿವಶಂಕರ್ ಟೋಕರೆ ನಿರೂಪಿಸಿದರು. ಬಾಬುರಾವ್ ದಾನಿ ವಂದಿಸಿದರು.

**ವಚನ ವಾಚಿಸಿ ಉದ್ಘಾಟನೆ:** ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು, ಇವನಾರವ, ಇವನಾರವ ಇವನಾರವ ಎಂದೆನಿಸದಿರಯ್ಯಾ, ಇವನಮ್ಮವ, ಇವನಮ್ಮವ ಎಂದೆನಿಸಯ್ಯಾ ಕೂಡಲಸಂಗಮದೇವ ಎಂಬ ವಚನ ವಾಚಿಸಿ ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಬಸವೇಶ್ವರರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಸಚಿವರ ಭಾಷಣದ ನಡುವೆ ಬಿರುಸಿನ ಮಳೆ ಬಂದು, ಗಂಟೆಗೂ ಹೆಚ್ಚು ಕಾಲ ಸುರಿದ ಕಾರಣ ವೇದಿಕೆ ಮೇಲಿದ್ದ ಸ್ವಾಮೀಜಿಗಳು, ಇತರೆ ಗಣ್ಯರು ಮಾತನಾಡಲು ಸಾಧ್ಯವಾಗಲಿಲ್ಲ.

ಸತ್ಯ ನುಡಿವ ನಿಜಗುಣಪ್ರಭು: ಈ ನಾಡಿನ ಪ್ರಮುಖ ಮಠಾಧೀಶರಲ್ಲಿ ಬೈಲೂರ ನಿಷ್ಕಲ ಮಂಟಪದ ನಿಜಗುಣಪ್ರಭು ಸ್ವಾಮೀಜಿ ಕೂಡ ಒಬ್ಬರು. ಅಪ್ಪಟ ಬಸವತತ್ವದ ಪ್ರಚಾರಕರು. ಸತ್ಯ ನುಡಿವ ಸ್ವಾಮೀಜಿಗಳು ಎಂದು ಸಚಿವ ಈಶ್ವರ ಬಿ. ಖಂಡ್ರೆ ವರ್ಣಿಸಿದರು. ಸ್ವಾಮೀಜಿಗಳು. ಒಂದು ತಿಂಗಳ ವರೆಗೆ ನಡೆಯುವ ಅವರ ಪ್ರವಚನ ಆಲಿಸಿ, ಬಸವಾದಿ ಶರಣರ ವಿಚಾರಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

# ಸಮಾಜಸೇವಕ ಜಿಕೆ ಸ್ವಾಮಿ ಕಟೌಟ್ ತೆರವು, ಎಫ್‌ಐಆರ್ ಅಧಿಕಾರಿಗಳ ಕ್ರಮಕ್ಕೆ ಅಭಿಮಾನಿ ಬಳಗದ ವಿರೋಧ



**ಬಳ್ಳಾರಿ, ಮಾ. 17–** ಮಂಗಳವಾರ ಪತ್ರಿಕಾ ಭವನದಲ್ಲಿ ಜಿಕೆ ಸ್ವಾಮಿ ಅಭಿಮಾನಿಗಳು ಸುದ್ದಿಗೋಷ್ಠಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಭಿಮಾನಿಗಳಾದ ಕಟ್ಟೆ ಸ್ವಾಮಿ ಶ್ರೀನಿವಾಸ್, ಗೋವಿಂದ ಹಾಗೂ ಶಿವ ಸ್ವಾಮಿ ಅವರು, ಜಿಕೆ ಸ್ವಾಮಿ ಅವರು ಸಿಂಗಾಪುರದಲ್ಲಿ ಉದ್ಯೋಗವನ್ನು ಬಿಟ್ಟು ದೇಶಕ್ಕೆ ಮರಳಿ ಸಮಾಜ ಸೇವೆಯಲ್ಲಿ ತೊಡಗಿರುವ ವ್ಯಕ್ತಿ ಎಂದು ಹೇಳಿದರು. ಇಂತಹ ವ್ಯಕ್ತಿಯ ಮೇಲೆ ಸಣ್ಣ ವಿಚಾರಕ್ಕೆ ಎಫ್‌ಐಆರ್ ದಾಖಲಿಸಿರುವುದು ಅನ್ಯಾಯಕರ ಎಂದು ಆರೋಪಿಸಿದರು.

ಅಭಿಮಾನಿಗಳ ಪ್ರಕಾರ, ಯಾವುದೇ ನೋಟಿಸ್ ನೀಡದೇ ಅಥವಾ ಸೂಕ್ತ ಮಾಹಿತಿ ನೀಡದೇ ಏಕಾಏಕಿ ಕ್ರಮ ಕೈಗೊಳ್ಳಲಾಗಿದೆ. ಇದು ನ್ಯಾಯಸಮ್ಮತ ಕ್ರಮವಲ್ಲದೆ, ಉದ್ದೇಶಪೂರ್ವಕವಾಗಿ ಮಾಡಲಾಗಿದೆ ಎಂಬ ಅನುಮಾನ ವ್ಯಕ್ತಪಡಿಸಿದರು.

ಮಹಾನಗರ ಪಾಲಿಕೆಯ ಆರೋಗ್ಯ ಅಧಿಕಾರಿ ಸುಮಾರಾಣಿ ಅವರು ಮಾ.13ರಂದು ರಾತ್ರಿ 10:30 ಗಂಟೆಗೆ ಎಪಿಎಂಸಿ ಪೊಲೀಸ್ ಠಾಣೆಗೆ ತೆರಳಿ ಎಫ್‌ಐಆರ್ ದಾಖಲಿಸಿದ್ದಾರೆ.

ಈ ಕುರಿತು ಅಭಿಮಾನಿಗಳು ಅವರನ್ನು ಪ್ರಶ್ನಿಸಿದಾಗ, ಮೇಲಾಧಿಕಾರಿ ಗಳ ಒತ್ತಡದಿಂದ ಈ ಕ್ರಮ ಕೈಗೊಳ್ಳ ಲಾಗಿದೆ ಎಂದು ಸುಮಾರಾಣಿ ಸ್ಪಷ್ಟನೆ ನೀಡಿರುವುದಾಗಿ ಹೇಳಿದರು.

ಒಟ್ಟಿನಲ್ಲಿ, ಜಿಕೆ ಸ್ವಾಮಿ ಅವರ ವಿರುದ್ಧ ದಾಖಲಾಗಿರುವ ಈ ಎಫ್‌ಐಆರ್ ಕುತಂತ್ರದಿಂದ ಮಾಡಲಾಗಿದೆ ಎಂದು ಆರೋಪಿಸಿದ ಅಭಿಮಾನಿಗಳು, ಈ ವಿಷಯದಲ್ಲಿ ಕಾನೂನುಬದ್ಧವಾಗಿ ಹೋರಾಟ ಮುಂದುವರಿಸುವುದಾಗಿ ಸುದ್ದಿ ಗೋಷ್ಠಿಯಲ್ಲಿ ತಿಳಿಸಿದರು.

# ಸಂಜೀವಿನಿ ಯುಗಾದಿ ಮಾಸಿಕ ಸಂತೆಗೆ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಚಾಲನೆ




**ಚಿಕ್ಕಬಳ್ಳಾಪುರ, ಮಾ.17–** ಜಿಲ್ಲೆಯ ಸ್ವ–ಸಹಾಯ ಗುಂಪಿನ ಮಹಿಳಾ ಸದಸ್ಯರು ತಯಾರಿಸಿದ ಸ್ಥಳೀಯ ವಿಶೇಷತೆಗಳನ್ನು ಬಿಂಬಿಸುವ ಯುಗಾದಿ ಹಬ್ಬದ ದಿನಸಿ ಪದಾರ್ಥಗಳನ್ನು ಜಿಲ್ಲೆಯ ಸಾರ್ವಜನಿಕರು ಖರೀದಿಸುವಂತೆ ಜಿಲ್ಲಾಧಿಕಾರಿ ಜಿ.ಪ್ರಭು ಅವರು ಮನವಿ ಮಾಡಿದರು.

ಅವರು ಸೋಮವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ತೆರೆದಿರುವ "ಸಂಜೀವಿನಿ ಯುಗಾದಿ ಮಾಸಿಕ ಸಂತೆ ಹಾಗೂ ವಸ್ತು ಪ್ರದರ್ಶನ"ಕ್ಕೆ ಚಾಲನೆ ನೀಡಿ ಮಹಿಳಾ ಸ್ವಹಾಯ ಸಂಘಗಳ ಮಹಿಳೆಯರು ಆರ್ಥಿಕವಾಗಿ ಸಬಲರಾಗಬೇಕು ಎಂಬ ಉದ್ದೇಶದಿಂದ ಸರ್ಕಾರಗಳು ಎನ್ ಆರ್ ಎಲ್ ಎಂ ಯೋಜನೆಯಡಿ ಪ್ರೋತ್ಸಾಹ ನೀಡುತ್ತಿದೆ. ಅದರಂತೆ ಗ್ರಾಮೀಣ ಪ್ರದೇಶದ ಮಹಿಳಾ ಸಂಘಗಳ ಸಬಲೀಕರಣ, ಸ್ವ ಉದ್ಯೋಗಕ್ಕೆ ಪ್ರೋತ್ಸಾಹ ಮಾಡುವ ಸದುದ್ದೇಶದಿಂದ ಈ ಯುಗಾದಿ ಮೇಳದಲ್ಲಿ ಯುಗಾದಿ ವಿಶೇಷ ಕಿಟ್ ರಿಯಾಯಿತಿ ದರದಲ್ಲಿ ಗ್ರಾಹಕರಿಗೆ ಒದಗಿಸಲಾಗುತ್ತಿದ್ದು, ಜಿಲ್ಲೆಯ ಎಲ್ಲಾ ನಾಗರೀಕರು ಈ ಯುಗಾದಿ ವಿಶೇಷ ಕಿಟ್ ಖರೀದಿಸುವ ಮೂಲಕ ಮಹಿಳೆಯರಿಗೆ ಪ್ರೋತ್ಸಾಹ ನೀಡಬೇಕು ಎಂದು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ನವೀನ್ ಭಟ್ ವೈ ರವರು ಮಾತನಾಡಿ, ಯುಗಾದಿ ಹಾಗೂ ರಂಜಾನ್ ಹಬ್ಬಗಳು ನಮ್ಮ ದೇಶದಲ್ಲಿ ದೊಡ್ಡ ಹಬ್ಬಗಳು. ಈ ಹಬ್ಬಗಳ ಸಂದರ್ಭದಲ್ಲಿ ಗ್ರಾಮೀಣ ಪ್ರದೇಶದ ಮಹಿಳಾ ಸಂಘಗಳ ಸಬಲೀಕರಣ, ಸ್ವ ಉದ್ಯೋಗಕ್ಕೆ ಪ್ರೋತ್ಸಾಹ ಮಾಡುವ ಸದುದ್ದೇಶದಿಂದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ಹಾಗೂ ಸಂಜೀವಿನಿ ಡೇ ಎನ್.ಆರ್.ಎಲ್.ಎಂ ಯೋಜನೆ ವತಿಯಿಂದ ವಿಶೇಷವಾಗಿ ಹಬ್ಬದ ಕಿಟ್ ತಯಾರಿಸಿದ್ದು, ಈ ಕಿಟ್ ರಿಯಾಯಿತಿ ದರದಲ್ಲಿ ಗ್ರಾಹಕರಿಗೆ ಮಾರಾಟ ಮಾಡುವ ಮೂಲಕ ವಿನೂತನ ಪ್ರಯತ್ನ ಮಾಡಲಾಗಿದೆ ಎಂದು ತಿಳಿಸಿದರು.

ಈ ಮೇಳಕ್ಕೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ 12 ಜಿಪಿಎಲ್‌ಎಫ್ನ 24ಕ್ಕೂ ಹೆಚ್ಚು ಸ್ವ ಸಹಾಯ ಗುಂಪುಗಳ 250ಕ್ಕೂ ಹೆಚ್ಚು ಮಹಿಳಾ ಸದಸ್ಯರನ್ನೊಳಗೊಂಡ ತಂಡವು ಒಟ್ಟಾಗಿ ಸೇರಿ ಈ ಯುಗಾದಿ ಅಕ್ಕ ಹೋಳಿಗೆ ಕಿಟ್ ತಯಾರಿಸಿದ್ದಾರೆ. ಈ ವಿಶೇಷ ಕಿಟ್ ನಲ್ಲಿ ನಮ್ಮ ಜಿಲ್ಲೆಯಲ್ಲಿ ಬೆಳೆದಿರುವ ಸಾವಯವ ಬೆಳೆಗಳಾದ ತೊಗರಿಬೇಳೆ, ಹೆಸರುಬೇಳೆ, ಗಾಣದ ಕಡಲೇ ಕಾಯಿ ತುಪ್ಪ ಸೇರಿದಂತೆ ಇತರೆ ಪೌಷ್ಠಿಕಾಂಶ ಪದಾರ್ಥಗಳು ಒಳಗೊಂಡಿದ್ದು, ಜಿಲ್ಲೆಯ ಎಲ್ಲಾ ಗ್ರಾಹಕರು ಖರೀದಿಸುವ ಮೂಲಕ ಸ್ವಸಹಾಯ ಗುಂಪುಗಳಿಗೆ ಪ್ರೋತ್ಸಾಹ ನೀಡುವ ಜೊತೆಗೆ ಈ ಹಬ್ಬಗಳನ್ನು ಸಂಭ್ರಮದಿಂದ ಆಚರಿಸಬೇಕು ಎಂದು ಕರೆ ನೀಡಿದರು.

ಪ್ರಸ್ತುತ 3 ದಿನ ಮಾಡುತ್ತಿರುವ ಯುಗಾದಿ ಮಾಸಿಕ ಸಂತೆಗಳು ಯಶಸ್ವಿಯಾದರೆ ಮುಂದಿನ ದಿನಗಳಲ್ಲಿ ಪ್ರತಿ ಪ್ರಮುಖ ಹಬ್ಬಗಳಲ್ಲೂ ಈ ರೀತಿಯ ಮಾರಾಟ ಮೇಳಗಳನ್ನು ಜಿಲ್ಲೆಯಲ್ಲಿ ಆಯೋಜಿಸಲಾಗುವುದು. ಮಾರುಕಟ್ಟೆ ದರಕ್ಕಿಂತ ಕಡಿಮೆ ದರದಲ್ಲಿ ಮಾರಾಟ ಮಾಡುತ್ತಿರುವುದರಿಂದ ಈ ಮಾಸಿಕ ಸಂತೆ ಯಶಸ್ವಿಯಾಗುತ್ತದೆ. ಜಿಲ್ಲೆಯ ಸರ್ಕಾರಿ ನೌಕರರು, ಉತ್ತಮ ಪ್ರತಿಕ್ರಿಯೆ ತೋರುತ್ತಿದ್ದಾರೆ. ಸಾರ್ವಜನಿಕರು ಸಹ ಮುಂದಿನ ಎರಡು ದಿನಗಳಲ್ಲಿ ಸ್ಪಂದನೆ ನೀಡುವ ಭರವಸೆ ಇದೆ. ಏಕೆಂದರೆ "ಯುಗಾದಿ ಅಕ್ಕ ದಿನಸಿ ಮಿನಿ ಕಿಟ್" 670 ರೂ.ಗಳ ಮಾರುಕಟ್ಟೆ ದರಕ್ಕೆ ಬದಲಾಗಿ ಕೇವಲ 499 ರೂಗಳಿಗೆ ಮಾರಾಟ ಮಾಡಲಾಗುತ್ತಿದೆ. ಯಾವುದೇ ಮಧ್ಯವರ್ತಿಗಳಲ್ಲದೆ ಮಹಿಳಾ ಸ್ವ–ಸಹಾಯ ಗುಂಪಿನ ಸದಸ್ಯರು ಸ್ಥಳೀಯ ಉತ್ಪನ್ನಗಳನ್ನು ಬಳಕೆ ಮಾಡಿಕೊಂಡು ಗುಣಮಟ್ಟದಲ್ಲಿ ತಯಾರಿಸಿದ ದಿನಸಿಗಳನ್ನು ಕಡಿಮೆ ದರದಲ್ಲಿ ನೀಡಲು ಸಾಧ್ಯವಾಗಿದೆ. ಆದ್ದರಿಂದ ಮಾರಾಟ ಮೇಳ ಯಶಸ್ವಿಯಾಗುವ ಭರವಸೆ ಇದ್ದು, ಸಾರ್ವಜನಿಕರು ಇದರ ಉಪಯೋಗ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಅಪರ ಜಿಲ್ಲಾಧಿಕಾರಿಗಳು ಸೇರಿದಂತೆ ಗಣ್ಯರು ಅಕ್ಕ ದಿನಸಿ ಕಿಟ್ ಖರೀದಿಸಿದರು.

ಅಕ್ಕ ಹೋಳಿಗೆ ಮನೆಯಲ್ಲಿ ತಯಾರಿಸಿದ ಹೋಳಿಗೆ ಊಟವನ್ನು ಸೇವಿಸಿ ಮಾರಾಟ ಮೇಳಕ್ಕೆ ಮೆರುಗು ನೀಡಿದರು. ಮಾರಾಟದಲ್ಲಿ ಏನೇನು ಇರಲಿದೆ. ಸಾವಯವ ಬೆಲ್ಲ. ತೊಗರಿಬೇಳೆ, ತೆಂಗಿನಕಾಯಿ, ಗಾಣದ ಕಡಲೆ ಕಾಯಿ ಎಣ್ಣೆ, ಗಾಣದ ಹರಳೆಣ್ಣೆ, ಹೋಮ್ ಮೇಡ್ ಹಪ್ಪಳಗಳನ್ನು ಗ್ರಾಮೀಣ ಸ್ವ–ಸಹಾಯ ಗುಂಪುಗಳ ಸ್ಥಳೀಯ ರೈತರಿಂದ ಸಾವಯವ ವಿಧಾನದಲ್ಲಿ ಬೆಳೆದ ಉತ್ಪನ್ನಗಳನ್ನು ಖರೀದಿಸಿ, ಸಂಸ್ಕರಿಸಿ ಮಾಡಲಾಗಿದೆ. ಮೈದಾ ಹಿಟ್ಟು, ಹೆಸರುಬೇಳೆ, ನಂದಿನಿ ತುಪ್ಪ, ಸೀಗೆಕಾಯಿ ಪುಡಿಯನ್ನು ತಯಾರಿಕರಿಂದ ನೇರವಾಗಿ ಖರೀದಿಸಿ, ರಿಯಾಯಿತಿ ದರದಲ್ಲಿ ಗ್ರಾಹಕರಿಗೆ ಒದಗಿಸಲಾಗುತ್ತಿದೆ. ದಿನಸಿ ಉತ್ಪನ್ನಗಳಲ್ಲದೆ ಖಾದಿ ಬಟ್ಟೆಗಳನ್ನು ಸಹ ಮಾರಾಟ ಮಾಡಲಾಗುತ್ತಿದೆ.

ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಆವರಣ, ಕನ್ನಡ ಭವನದ ಆವರಣ, ಬಾಗೇಪಲ್ಲಿ ತಾಲ್ಲೂಕು ಪಂಚಾಯಿತಿ ಮುಂಭಾಗ ಮತ್ತು ತಾಲ್ಲೂಕು ಕಚೇರಿ ಮುಂಭಾಗ, ಚಿಂತಾಮಣಿ ತಾಲ್ಲೂಕು ಪಂಚಾಯಿತಿ ಮುಂಭಾಗ ಮತ್ತು ಮೈಲಾಂಡ್ಲಹಳ್ಳಿ ಕ್ರಾಸ್ ಕುರುಬೂರು, ಗೌರಿಬಿದನೂರು ನಗರಸಭೆ ಆವರಣ ಮತ್ತು ಶನಿಮಹಾತ್ಮ ದೇವಾಲಯ ಆವರಣ, ಗುಡಿಬಂಡೆ ತಾಲ್ಲೂಕು ಪಂಚಾಯಿತಿ ಮುಂಭಾಗ ಹಾಗೂ ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಕ್ರಾಸ್ ಬಸ್ ನಿಲ್ದಾಣ.

# ಕಲಬುರಗಿ ರಾಮಮಂದಿರದಲ್ಲಿ ನಾಳೆಯಿಂದ ರಾಮೋತ್ಸವ: ಭರದ ಸಿದ್ಧತೆ



**ಕಲಬುರಗಿ, ಮಾ.17:** ಶ್ರೀ ಪಾದೂರು ರಾಮಕೃಷ್ಣ ತಂತ್ರಿ ಚಾರಿಟಬಲ್ ಟ್ರಸ್ಟ್‌ನ ಕಲಬುರಗಿಯ ರಾಮಮಂದಿರ ವತಿಯಿಂದ ಮಾರ್ಚ್ 19ರಿಂದ 26ರ ವರೆಗೆ ರಾಮೋತ್ಸವ ಕಾರ್ಯಕ್ರಮವನ್ನು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಸಂಭ್ರಮದಿಂದ ಆಚರಿಸಲು ಸಿದ್ಧತೆ ಕೈಗೊಳ್ಳಲಾಗಿದೆ. ರಾಮೋತ್ಸವದ ಅಂಗವಾಗಿ ಮಾ. 19ರಿಂದ 26 ರವರೆಗೆ ಪ್ರತಿದಿನ ಸಾಯಂಕಾಲ 6.30 ಕ್ಕೆ ಬೀದರ್ ಉತ್ತರಾದಿ ಮಠದ ಅಜೇಯ ಆಚಾರ್ಯರಿಂದ "ಶ್ರೀಮದ್ ರಾಮಾಯಣ"ವಿಶೇಷ ಉಪನ್ಯಾಸ ಕಾರ್ಯಕ್ರಮ ನೆರವೇರಲಿದೆ. ಸಾಯಂಕಾಲ 6:30 ಕ್ಕೆ ಉಪನ್ಯಾಸ ಮಾಲೆ ಹಾಗೂ ರಾಮೋತ್ಸವ ಕಾರ್ಯಕ್ರಮವನ್ನು ಕಲಬುರಗಿಯ ವೆಂಕಟೇಶ್ವರ ಆಟೋಮೊಬೈಲ್ಸ್ ನ ಕೆ.ಬಿ ಕುಲಕರ್ಣಿ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕಲಬುರಗಿ ನಗರ ಬಿಜೆಪಿ ಅಧ್ಯಕ್ಷರಾದ ಚಂದು ಪಾಟೀಲ್ ಮತ್ತು ಹಿರಿಯ ನ್ಯಾಯವಾದಿಗಳಾದ ಪಿ.ವಿ ದೇಶಪಾಂಡೆ ಭಾಗವಹಿಸಲಿದ್ದಾರೆ.

ಸಾಂಸ್ಕೃತಿಕ ಕಾರ್ಯಕ್ರಮವನ್ನು ಅನಂತ ಚಿಂಚನಸೂರ ನೃತ್ಯ ಸಂಯೋಜನೆಯಲ್ಲಿ ಕಲಬುರಗಿಯ ವರ್ಣಸಿಂಧು ನೃತ್ಯ ಕಲಾ ಕೇಂದ್ರದ ಕಲಾವಿದರು ನಡೆಸಿಕೊಡಲಿದ್ದಾರೆ. ಮಾ. 26ರಂದು ರಾಮನವಮಿಯ ದಿನ ದಿನಪೂರ್ತಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು ಬೆಳಗ್ಗೆ 8 ಕ್ಕೆ ಪಂಚಾಮೃತ ಅಭಿಷೇಕ, ಬೆಳಗ್ಗೆ 8.30 ರಿಂದ 9.30 ರವರೆಗೆ ಹಂಸ ನಾಯಕ ಮತ್ತು ಲಕ್ಷ್ಮಿ ನಾರಾಯಣ ಪಾರಾಯಣ ಸಂಘಗಳಿಂದ ಪಾರಾಯಣ ಕಾರ್ಯಕ್ರಮ ನೆರವೇರಲಿದೆ.

ಮಧ್ಯಾಹ್ನ ಒಂದು ಗಂಟೆಗೆ ಪ್ರಸಾದ ವಿತರಣೆ ಹಾಗೂ ರಾತ್ರಿ 8 ಗಂಟೆಗೆ ಪಲ್ಲಕ್ಕಿ ಉತ್ಸವ ಮತ್ತು 8.30ಕ್ಕೆ ಶ್ರೀರಂಗ ಪೂಜೆ ನೆರವೇರಲಿದೆ ಎಂದು ರಾಮ ಮಂದಿರದ ಕಿಶೋರ ದೇಶಪಾಂಡೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೇಂದ್ರೀಯ ವಿವಿಯಲ್ಲಿ ಅಕ್ಯುಥಾ-ಮ್ಯಾನೇಜ್‌ಮೆಂಟ್ ಫೆಸ್ಟ್

## ವಿದ್ಯಾರ್ಥಿ ನಿರ್ವಹಣಾ ಕೌಶಲ್ಯ ಪ್ರದರ್ಶನಕ್ಕೆ ವೇದಿಕೆ: ಪ್ರೊ.ಬಿ.ಸತ್ಯನಾರಾಯಣ



**ಕಲಬುರಗಿ, ಮಾ. 17:** ಅಕ್ಯುಥಾ ಮಾದರಿಯ ಮ್ಯಾನೇಜ್‌ಮೆಂಟ್ ಫೆಸ್ಟ್‌ಗಳು ಈ ಭಾಗದ ವಿದ್ಯಾರ್ಥಿಗಳಿಗೆ ತಮ್ಮ ನಿರ್ವಹಣಾ ಕೌಶಲ್ಯ ಪ್ರದರ್ಶಿಸಲು ಮತ್ತು ಅಭಿವೃದ್ಧಿಪಡಿಸಲು ಉತ್ತಮ ವೇದಿಕೆಯನ್ನು ಒದಗಿಸುತ್ತವೆ ಎಂದು ಇಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.

ನಗರದ ಹೊರವಲಯದಲ್ಲಿರುವ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ವ್ಯವಹಾರ ಅಧ್ಯಯನ ವಿಭಾಗವು ಆಯೋಜಿಸಿರುವ 'ಅಕ್ಯುಥಾ–ಮ್ಯಾನೇಜ್‌ಮೆಂಟ್ ಫೆಸ್ಟ್' ಕಾರ್ಯಕ್ರಮದ ಕರಪತ್ರವನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಮ್ಯಾನೇಜ್‌ಮೆಂಟ್ ಫೆಸ್ಟ್‌ಗಳು ವಿದ್ಯಾರ್ಥಿಗಳಿಗೆ ತಮ್ಮ ಸಾಮರ್ಥ್ಯವನ್ನು ಪರೀಕ್ಷಿಸಲು, ಇತರರಿಂದ ಹೊಸ ವಿಚಾರಗಳನ್ನು ಕಲಿಯಲು ಹಾಗೂ ತಂಡದಲ್ಲಿ ಕೆಲಸ ಮಾಡುವ ಅನುಭವವನ್ನು ಪಡೆಯಲು ಅವಕಾಶ ನೀಡುತ್ತವೆ. ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳನ್ನು ಉದ್ಯಮ ಹಾಗೂ ಉದ್ಯೋಗ ಕ್ಷೇತ್ರಕ್ಕೆ ಬೇಕಾದ ಕೌಶಲ್ಯಗಳೊಂದಿಗೆ ಸಜ್ಜುಗೊಳಿಸಲು ಸಹಕಾರಿಯಾಗುತ್ತವೆ. ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗ ವಹಿಸಿ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ವ್ಯವಹಾರ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ. ಜೋಹರ ಮಾತನಾಡಿ, ಅಕ್ಯುಥಾ ಮ್ಯಾನೇಜ್‌ಮೆಂಟ್ ಫೆಸ್ಟ್‌ನ ಇದು 6ನೇ ಆವೃತ್ತಿಯಾಗಿದ್ದು, ಈ ತಿಂಗಳ 16 ಮತ್ತು 17ರಂದು ನಡೆಯಲಿದೆ. ಈ ಸಂದರ್ಭದಲ್ಲಿ ಬೆಸ್ಟ್ ಮ್ಯಾನೇಜರ್, ಶಾರ್ಕ್ ಟ್ಯಾಂಕ್, ಬಿಸಿನೆಸ್ ಕ್ವಿಜ್, ಮಾರ್ಕೆಟಿಂಗ್, ಮಾನವ ಸಂಪನ್ಮೂಲ, ಹಣಕಾಸು ಹಾಗೂ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳು ಸೇರಿ 12ಕ್ಕೂ ಹೆಚ್ಚು ಸ್ಪರ್ಧೆಗಳು ನಡೆಯಲಿವೆ. ಒಟ್ಟು ಬಹುಮಾನ ಮೊತ್ತವು ಒಂದು ಲಕ್ಷ ರೂ ಗಳಿಗಿಂತ ಹೆಚ್ಚಿನದಾಗಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದ ವಿಶೇಷ ಎಂದರೆ ಇದನ್ನು ವಿದ್ಯಾರ್ಥಿಗಳೇ ವಿದ್ಯಾರ್ಥಿಗಳಿಗಾಗಿ ಆಯೋಜಿಸುತ್ತಿರುವುದು. ವಿದ್ಯಾರ್ಥಿಗಳೇ ಪ್ರಾಯೋಜಕತ್ವವನ್ನು ಸಂಗ್ರಹಿಸಿ ಕಾರ್ಯಕ್ರಮದ ಎಲ್ಲಾ ವೆಚ್ಚಗಳನ್ನು ನಿರ್ವಹಿಸುತ್ತಿದ್ದಾರೆ.

ಶೆಟ್ಟಿ ಸಿಮೆಮಾಸ್ ಶೀರ್ಷಿಕೆ ಪ್ರಾಯೋಜಕರಾಗಿದ್ದು, 6 ಜಿಮ್, ಶ್ರೀ ಮಾರ್ಕೆಟಿಂಗ್, ಕ್ಯಾರ ಟ್ರೇನ್, ಉಪ್ಪಿಟ್ಟು, ಹೂಗರ್ ಹೋಟೆಲ್ ಹಾಗೂ ಸಪ್ನಾ ಜೆರೋಕ್ಸ್ ಪ್ರಮುಖ ಪ್ರಾಯೋಜಕರಾಗಿದ್ದಾರೆ. ಪದವಿಪೂರ್ವ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು.

## ಬೆಳಗಾವಿ–ಹೈದರಾಬಾದ್ ರೈಲು ಸಂಚಾರ ಪುನಾರಂಭಕ್ಕೆ ಕ್ರಿಯಾ ಸಮಿತಿಯ ಮನವಿ



**ಬಳ್ಳಾರಿ, ಮಾ.17:** ನಗರದ ರೈಲ್ವೇ ನಿಲ್ದಾಣಕ್ಕೆ ಆಗಮಿಸಿದ್ದ ಸಿಕಂದರಾಬಾದನ ದಕ್ಷಿಣ ಮಧ್ಯ ರೈಲ್ವೆಯ ಜನರಲ್ ಮ್ಯಾನೇಜರ್ ಸಂಜಯ ಕುಮಾರ್ ಶ್ರೀವಾತ್ಸವ ಹಾಗೂ ಗುಂತಕಲ್ ರೈಲ್ವೆ ವಿಭಾಗದ ಹಿರಿಯ ಡಿ ಆರ್ ಎಂ ಅವರನ್ನು ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿ ಭೇಟಿ ಮಾಡಿ ವಿವಿಧ ಬೇಡಿಕೆಗಳ ಮನವಿ ಸಲ್ಲಿಸಿದರು.

ದಕ್ಷಿಣ ಮಧ್ಯ ರೈಲ್ವೆ ವ್ಯಾಪ್ತಿಗೆ ಬರುವ ಕೊಲ್ಹಾಪುರ ಮುನಗೂರು ದಿನನಿತ್ಯದ ರೈಲು ಬೆಳಗಾವಿ, ಹುಬ್ಬಳ್ಳಿ ಬಳ್ಳಾರಿ, ಹೈದರಾಬಾದ್ ಮಾರ್ಗದಲ್ಲಿ ಸಂಚರಿಸುತ್ತಿದ್ದ ರೈಲು ರದ್ದಾಗಿದ್ದು ಈ ರೈಲನ್ನು ಪುನರಾರಂಭ ಮಾಡಬೇಕು.

ಬಳ್ಳಾರಿಯಿಂದ ಗುಂತಕಲ್ಲು ಮುಖೇನ ಆದೋನಿಯ ರೈಲು ಮಾರ್ಗ 120 ಕಿಲೋಮೀಟರ್ ಆಗುತ್ತದೆ. ಬಳ್ಳಾರಿಯಿಂದ 11 ಕಿ.ಮೀ. ದೂರವಿರುವ ಹಗರಿಯಿಂದ ಆದೋನಿಗೆ ನೇರವಾಗಿ ನೂತನ ಬ್ರಾಡ್ ಗೇಜ್ ರೈಲ್ವೆ ಮಾರ್ಗದ ರಚನೆ ಆದಲ್ಲಿ ಬಳ್ಳಾರಿಯಿಂದ ಆದೋನಿ ಕೇವಲ 75 ಕಿ.ಮೀ ನಲ್ಲಿ ತಲುಪಬಹುದು, ಈ ಮಾರ್ಗದ ರಚನೆಯಿಂದ 45 ಕಿ.ಮೀ ಅಂತರ ಕಡಿಮೆ ಆಗುವುದರ ಜೊತೆಗೆ ಒಂದುವರೆ ಗಂಟೆ ಸಮಯದ ಪ್ರಯಾಣದ ಅವಧಿ ಕಡಿಮೆಯಾಗುವುದು ಅಲ್ಲದೆ ಈ ಮಾರ್ಗದ ರಚನೆಯಿಂದ ಮುಂಬೈ ಹೈದರಾಬಾದ್ ವಾರಣಾಸಿಯ ಕಡೆಯಿಂದ ಬರುವ ಎಲ್ಲಾ ರೈಲುಗಳು ಕರ್ನಾಟಕದ ಮೈಸೂರು, ಮಂಗಳೂರು, ಶಿವಮೊಗ್ಗ ಚಿಕ್ಕಮಂಗಳೂರು ತಲುಪಲು ಸಹಾಯವಾಗುತ್ತದೆ ಎಂದು ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

### ಗ್ಯಾಸ್ ಏಜೆನ್ಸಿ ಮುಂದೆಯೇ ಕಳ್ಳರ ಕೈಚಳಕ

## ಕಣ್ಮುಚ್ಚಿ ತೆರೆಯುವಷ್ಟರಲ್ಲಿ ಗ್ಯಾಸ್ ಸಿಲಿಂಡರ್ ಮಾಯ




**ಬೀದರ್, ಮಾ. 17:** ಇರಾನ್–ಇಸ್ರೇಲ್ ಯುದ್ಧದ ಪರಿಣಾಮ ದೇಶದಲ್ಲಿ ಗ್ಯಾಸ್‌ನ ಅಭಾವ ತಲೆ ದೋರಿದ್ದು, ಇದೇ ಸಮಯದಲ್ಲಿ ಕಳ್ಳರು ಕೈಚಳಕ ತೋರುತ್ತಿದ್ದಾರೆ. ಒಂದೆಡೆ ಗ್ಯಾಸ್ ಸಿಲಿಂಡರ್ ಬುಕ್ಕಿಂಗ್ ಆಗದೇ ಜನ ಪರದಾಡುತ್ತಿದ್ದರೆ ಮತ್ತೊಂದೆಡೆ ಜನರಿಗೆ ಕಳ್ಳರ ಕಾಟ ಎದುರಾಗಿದೆ. ಈಗ ಗ್ಯಾಸ್ ಬುಕ್ಕಿಂಗ್ ಮಾಡೋದೆ ಒಂದು ಸಾಹಸವಾಗಿದ್ದರೆ ಅದರ ನಡುವೆ ಬುಕ್ ಆಗಿದ್ದ ಗ್ಯಾಸ್‌ನ್ನು ಇನ್ನೇನು ಗ್ಯಾಸ್ ಏಜೆನ್ಸಿಯಿಂದ ಮನೆಗೆ ತೆಗೆದುಕೊಂಡು ಹೋಗಬೇಕು ಎನ್ನುವಷ್ಟರಲ್ಲಿ ಗ್ಯಾಸ್ ಏಜೆನ್ಸಿ ಮುಂದೆಯೇ ಕಳ್ಳರು ಕೈಚಳಕ ತೋರಿದ್ದಾರೆ.

ಬೀದರ್ ಜಿಲ್ಲೆಯ ಭಾಲ್ಕಿ ಪಟ್ಟಣದ ಭಾರತ್ ಗ್ಯಾಸ್ ಏಜೆನ್ಸಿಯ ಗೋದಾಮಿನ ಬಳಿ ಈ ಘಟನೆ ನಡೆದಿದೆ. ಗೃಹ ಬಳಕೆಯ ಗ್ಯಾಸ್ ಕದ್ದು ಖದೀಮರು ಪರಾರಿಯಾಗಿದ್ದಾರೆ. ಭಾಲ್ಕಿಯ ಮಲ್ಲಿಕಾರ್ಜುನ್ ಎಂಬುವವರು ಈ ಗ್ಯಾಸ್ ಸಿಲಿಂಡರ್ ಬುಕ್ ಮಾಡಿದ್ದರು. ಗ್ಯಾಸ್ ಸಿಲಿಂಡರ್ ಪಡೆದ ಬಳಿಕ ಅವರು ಅದನ್ನು ಏಜೆನ್ಸಿ ಹೊರಗೆ ಪಕ್ಕದಲ್ಲಿ ಇಟ್ಟು ಕಚೇರಿ ಒಳಗೆ ಚೀಟಿ ತರಲು ಹೋಗಿದ್ರು, ವಾಪಸ್ ಬರುವಷ್ಟರಲ್ಲಿ ಅವರು ಬುಕ್ ಮಾಡಿದ ಗೃಹಬಳಕೆಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್ ನಾಪತ್ತೆಯಾಗಿದೆ.

ಇದರಿಂದ ಕಂಗೆಟ್ಟ ಅವರು ಪೊಲೀಸರಿಗೆ ದೂರು ನೀಡಿದ್ದಾರೆ. ಯಾರೋ ಅಪರಿಚಿತ ವ್ಯಕ್ತಿ ಸಿಲಿಂಡರ್ ಕದ್ದೊಯ್ದಿದ್ದಾರೆ ಎಂದು ಅವರು ಭಾಲ್ಕಿ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಕಳೆದು ಹೋದ ಗ್ಯಾಸ್ ಸಿಲಿಂಡರ್ ಹುಡುಕಿ ಕೊಡುವಂತೆ ಅವರು ಪೊಲೀಸರಿಗೆ ಮನವಿ ಮಾಡಿದ್ದಾರೆ.

## ಸರ್ವರಂಗದ ಬೆಳವಣಿಗೆಗೆ ಶಿಕ್ಷಣವೇ ಬುನಾದಿ: ಡಾ.ಬಸವಲಿಂಗ ಪಟ್ಟದ್ದೇವರು



**ಕಲಬುರಗಿ, ಮಾ. 17:** ಎಲ್ಲ ರಂಗಗಳ ಬೆಳವಣಿಗೆಗೆ ಶಿಕ್ಷಣವೇ ಬುನಾದಿ. ಶಿಕ್ಷಣ ಪವಿತ್ರ ಸೇವೆಯಾಗಿದೆ. ಶಿಕ್ಷಕರಾದವರು ಪ್ರತಿ ಮಗು 15 ದಿನಗಳಲ್ಲಿ ಏನು ಕಲಿತಿದೆ. ಒಂದು ತಿಂಗಳಲ್ಲಿ ಎಷ್ಟು ಕಲಿತಿದೆ ಎಂದು ಗಮನಿಸುವ ಮೂಲಕ ಮಕ್ಕಳಿಗೆ ಸರಿಯ 'ಾದ ದೀಕ್ಷೆ ನಿಡಬೇಕು ಎಂದು ಭಾಲ್ಕಿ ಹಿರೇಮಠ ಸಂಸ್ಥಾನದ ಡಾ.ಬಸವಲಿಂಗ ಪಟ್ಟದ್ದೇವರು ಸಲಹೆ ನೀಡಿದರು.

ಸಿದ್ದಪ್ಪ ಭಗವತಿ ಅವರು ಆತ್ಮಬಲ ಮತ್ತು ದೂರದೃಷ್ಟಿಯಿಂದ ಈ ಶಿಕ್ಷಣ ಸಂಸ್ಥೆ ಆರಂಭಿಸಿದರು. ಕೆಲವೇ ದಿನಗಳಲ್ಲಿ ವಿವಿಎನ್ ಶಾಲೆ ಹೆಸರು ಮಾಡಿತು. ಈಗ ಪಿಯು ಕಾಲೇಜು ಕೂಡ ಪ್ರಾರಂಭಿಸಿದ್ದು, ಪಾಲಕರು ವಿಶ್ವಾಸದಿಂದ ಮಕ್ಕಳನ್ನು ಕಾಲೇಜಿಗೆ ಸೇರಿಸಬಹುದು. ಕಾಲೇಜು ಕೂಡ 3–4 ವರ್ಷಗಳಲ್ಲಿಯೇ ಉತ್ತರ ಕರ್ನಾಟಕದಲ್ಲಿ ಹೆಸರು ಮಾಡಲಿದೆ ಎಂದರು.

ಕಾಲೇಜು ಉದ್ಘಾಟಿಸಿದ ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಮಾತನಾಡಿ, ಆರೋಗ್ಯ, ಶಿಕ್ಷಣ ಮತ್ತು ಅಪೌಷ್ಟಿಕತೆ ನಿವಾರಣೆಗಾಗಿ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಕೆಕೆಆರ್‌ಡಿಬಿಯ ಅನುದಾನದಲ್ಲಿ ಶೇ 25ರಷ್ಟು ಹಣ ಶಿಕ್ಷಣಕ್ಕೆ ಮೀಸಲಿಟ್ಟು ಖರ್ಚು ಮಾಡಲಾಗುತ್ತಿದೆ. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಫಲಿತಾಂಶ ಹೆಚ್ಚಳಕ್ಕೆ ಖಾಸಗಿ ಮತ್ತು ಸರ್ಕಾರಿ ಶಾಲೆಗಳು ಸೇರಿ ಕೆಲಸ ಮಾಡಬೇಕು ಎಂದರು.

ಪತ್ರಕರ್ತ ದೇವಯ್ಯ ಗುತ್ತೇದಾರ ಮಾತನಾಡಿ, ವಿವೇಕಾನಂದ ಶಾಲೆಯಲ್ಲಿ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ ಎಂದ ಫೌಂಡೇಶನ್ ಕ್ಲಾಸ್ ಕೂಡ ನಡೆಸಲಾಗುತ್ತಿದೆ. ಶಾಲೆ ಈಗ ಕಾಲೇಜು ಆಗಿ ಬಡ್ತಿಯಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಹೆಸರು ಮಾಡಲಿ ಎಂದು ಆಶಿಸಿದರು.

ಪ್ರಾಚಾರ್ಯ ಸಿದ್ದಪ್ಪ ಎಸ್.ಭಗವತಿ ಪ್ರಾಸ್ತಾವಿಕವಾಗಿ ಮಾತನಾಡಿ, ವಿವಿಎನ್ ಶಾಲೆಯಂತೆ ಕಾಲೇಜು ಕೂಡ ಬೆಳೆಸಲು ಪಟ್ಟದ್ದೇವರು ಶ್ರೀಗಳ ಮಾರ್ಗದರ್ಶನದಲ್ಲಿ ಕರಡ್ಯಾಳ ವಿಜ್ಞಾನ ಕಾಲೇಜಿನ ಮಾಹಿತಿ ಪಡೆದುಕೊಂಡು ಬರಲಾಗಿದೆ. ಪಿಯುಸಿ ಮಹತ್ವದ ಹಂತವಾಗಿದ್ದರಿಂದ ಜೆಇಇ, ನೀಟ್ ತಯಾರಿಗೂ ಒತ್ತು ನೀಡಲಾಗುತ್ತಿದೆ. ಈಗಾಗಲೇ ಉಪನ್ಯಾಸಕರ ನೇಮಕಾತಿ ಆಗಿದೆ' ಎಂದು ಪಿಪಿಟಿಯೊಂದಿಗೆ ಉಪನ್ಯಾಸಕ ವರ್ಗದ ಪರಿಚಯ ಮಾಡಿದರು.

ವಿವೇಕಾನಂದ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಸುವರ್ಣಾ ಸಿದ್ದಪ್ಪ ಭಗವತಿ ಅಧ್ಯಕ್ಷತೆ ವಹಿಸಿದ್ದರು. ಅಮೆಜಾನ್ ಸಾಫ್ಟ್‌ವೇರ್ ಡೆವಲಪರ್ ಚೇತನ ಸಿ.ಗೊಂದೇಗಾಂವ, ಸಿದ್ಧಶ್ರೀ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಬಸವರಾಜ ಸಿ.ಹಿರೇಮಠ, ಶ್ರೀಗುರು ಕಾಲೇಜಿನ ಕಾರ್ಯದರ್ಶಿ ನಿತಿನ್ ಎ.ನಾಯ್ಕ್ ಉಪಸ್ಥಿತರಿದ್ದರು.

ಶ್ರುತಿ ಕುಲಕರ್ಣಿ ವಚನ ಗಾಯನ ಮಾಡಿದರು. ನಿತಿನ್ ಪಾಟೀಲ ಸ್ವಾಗತಿಸಿದರು. ಶಿಭಾ ದಾಸ್ ನಿರೂಪಿಸಿದರು. ಆನಂದ ಔರಾದಕರ್ ವಂದಿಸಿದರು.

ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಅವರು, 16 ಮಕ್ಕಳಿಂದ ಆರಂಭವಾದ ವಿವಿಎನ್ ಶಾಲೆಯಲ್ಲಿಂದು 1600 ಮಕ್ಕಳಿರುವುದು ಗುಣಮಟ್ಟದ ಶಿಕ್ಷಣಕ್ಕೆ ಸಾಕ್ಷಿ. ಕಲಬುರಗಿಯ ಟಾಪ್ ಐದು ಶಾಲೆಗಳಲ್ಲಿ ವಿವಿಎನ್ ಶಾಲೆ ಒಂದಾಗಿರುವುದು ಹೆಮ್ಮೆಯ ಸಂಗತಿ ಎಂದರು.

## ತುಂಗಭದ್ರಾ ಡ್ಯಾಂನಿಂದ ನೀರು ಬಿಡುಗಡೆ: ವೇಳಾಪಟ್ಟಿ ಪ್ರಕಟ



**ರಾಯಚೂರು, ಮಾ.17:** ಮೂರು ರಾಜ್ಯಗಳ ಜೀವನಾಡಿಯಾಗಿರುವ ತುಂಗಭದ್ರಾ ಅಣೆಕಟ್ಟೆಗೆ ಹೊಸ ಕ್ರಸ್ಟ್‌ಗೇಟ್ ಅಳವಡಿಕೆ ಪ್ರಕ್ರಿಯೆ ಚುರುಕಾಗಿ ನಡೆಯುತ್ತಿದೆ. ಮೇ ತಿಂಗಳ ಒಳಗೆ ಎಲ್ಲಾ 33 ಗೇಟ್‌ಗಳ ಅಳವಡಿಕೆ ಪೂರ್ಣಗೊಳ್ಳಲಿದೆ ಎಂದು ಅಂದಾಜಿಸಲಾಗಿದೆ. ಆದರೆ ಬೇಸಿಗೆಯ ಹಿನ್ನಲೆಯಲ್ಲಿ ರಾಯಚೂರು, ಕೊಪ್ಪಳ ಜಿಲ್ಲೆಗಳ ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಲು ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಗೆ ನೀರು ಹರಿಸಲು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ನೀರು ಹರಿಸುವ ವೇಳಾಪಟ್ಟಿ ಬಿಡುಗಡೆ ಮಾಡಲಾಗಿದೆ.

ತುಂಗಭದ್ರಾ ಜಲಾಶಯದಲ್ಲಿ 2025–26ನೇ ಜಲವರ್ಷದಲ್ಲಿ ನೀರಿನ ಲಭ್ಯತೆ ಆಧರಿಸಿ ಕಲಬುರಗಿ ಪ್ರಾದೇಶಿಕ ಆಯುಕ್ತರ ಆದೇಶದ ಮೇರೆಗೆ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಹಾಗೂ ಗ್ರಾಮಗಳ ವ್ಯಾಪ್ತಿಯಲ್ಲಿರುವ ನಿಯಮಿತವಾಗಿ ಕುಡಿಯುವ ನೀರಿನ ಬಳಕೆಯ ಕೆರೆಗಳನ್ನು ತುಂಬಿಸಲು ತುಂಗಭದ್ರಾ ಜಲಾಶಯದಿಂದ ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಗೆ ಪ್ರಾದೇಶಿಕ ಆಯುಕ್ತರು, ನಿಗದಿಪಡಿಸಿದ ವೇಳಾಪಟ್ಟಿಯಂತೆ ನೀರನ್ನು ಹರಿಸಲು ನಿರ್ಧಾರಿಸಲಾಗಿದೆ.

ಅದರಂತೆ ಸಂಬಂಧಿಸಿದ ಕಾರ್ಯಪಾಲಕ ಅಭಿಯಂತರರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ತಮ್ಮ ವ್ಯಾಪ್ತಿಯಲ್ಲಿನ ತೂಬುಗಳ ಗೇಟ್‌ಗಳ ಮುಖಾಂತರ ಕೆರೆ–ಕಟ್ಟೆಗಳಲ್ಲಿ ಕುಡಿಯುವ ಸಲುವಾಗಿ ನೀರು ಶೇಖರಣೆ ಮಾಡಲು ಹಾಗೂ ನಿಗದಿತ ಪ್ರಮಾಣದ ನೀರನ್ನು ಕಾಲುವೆಯ 104ನೇ ಮೈಲ್ ವರೆಗೆ

ಹರಿಸಿ ಹಾಗೂ ಗ್ರಾಮಗಳ ವ್ಯಾಪ್ತಿಯಲ್ಲಿರುವ ನೀರಿನ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಲು ಜಿಲ್ಲಾಡಳಿತ ಹಾಗೂ ಪೊಲೀಸ್ ಸಿಬ್ಬಂದಿ ಸಹಯೋಗದೊಂದಿಗೆ ಸಮರ್ಪಕ ನೀರು ನಿರ್ವಹಣೆ ಮಾಡಬೇಕು ಎಂದು ಸೂಚಿಸಲಾಗಿದೆ.

**ವೇಳಾಪಟ್ಟಿ:** ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆ (0 ರಿಂದ 104 ಮೈಲ್ ವರೆಗೆ) ಕುಡಿಯುವ ನೀರಿಗಾಗಿ ಕೊಪ್ಪಳ ಮತ್ತು ರಾಯಚೂರು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಹಾಗೂ ಗ್ರಾಮಗಳ ವ್ಯಾಪ್ತಿಯಲ್ಲಿರುವ ನೀರಿನ ಕೆರೆಗಳನ್ನು ತುಂಬಿಸಲು ಬೆಳಗ್ಗೆ 8 ಗಂಟೆ ರಿಂದ ಮಾರ್ಚ್ 27ರ (ಶುಕ್ರವಾರ ಬೆಳಗ್ಗೆ 8 ಗಂಟೆ) ವರೆಗೆ 2000 ಕ್ಯೂಸೆಕ್‌ನಂತೆ ಕುಡಿಯುವ ನೀರು ಹರಿಸಲಾಗುವುದು.

ಅದರಂತೆ, ಯರಮರಸ್ ವಿಭಾಗ ಮಾರ್ಚ್ 19, 20 & ಮಾ. 21ರ ವರೆಗೆ, ಸಿರವಾರ ವಿಭಾಗ ಮಾ. 21, 22 & 23 ರವರೆಗೆ, ಸಿಂಧನೂರು ವಿಭಾಗ ಮಾ. 24, 25 & ಮಾ. 26ರ ವರೆಗೆ ಹಾಗೂ ವಡ್ಡರಹಟ್ಟಿ ವಿಭಾಗದ ಮಾ. 26 & ಮಾ. 27ರ ವರೆಗೆ ನೀರು ಹರಿಸಲು ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ.

ತುಂಗಭದ್ರಾ ಜಲಾಶಯದಲ್ಲಿ ಲಭ್ಯವಿರುವ ನೀರನ್ನು ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಗೆ ನೀರು ಹರಿಸಲಾಗುತ್ತಿದೆ ಎಂದು ರೈತ ಭಾಂದವರಿಗೆ ತಿಳಿಸಲಾಗಿದೆ.

ಕಾಲುವೆಯಲ್ಲಿ ಮತ್ತು ಕಾಲುವೆಯ ಅಂಚಿನಲ್ಲಿ ಓಡಾಡುವುದು, ಕಾಲುವೆಯಿಂದ ನೀರನ್ನು ಜನಸಾಮಾನ್ಯರು ಅಥವಾ ರೈತರು ಬಳಸುವುದನ್ನು ಮತ್ತು ಎತ್ತಿಕೊಳ್ಳುವುದನ್ನು ನಿಷೇಧಗೊಳಿಸಲಾಗಿರುತ್ತದೆ.

ಸಮರ್ಪಕ ನೀರು ನಿರ್ವಹಣೆಗೆ ಇಲಾಖೆಯೊಡನೆ ಸಹಕರಿಸುವಂತೆ ನೀರಾವರಿ ನಿಗಮ, ತುಂಗಭದ್ರಾ ಯೋಜನಾ ವೃತ್ತ ಮುನಿರಾಬಾದ್ ಅಧೀಕ್ಷಕ ಅಭಿಯಂತರರು ಹಾಗೂ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿ ಎಸ್.ಬಿ ಮಲ್ಲಿಗವಾಡ ಅವರು ತಿಳಿಸಿದ್ದಾರೆ.




ಪರಿಸರ ನಡಿಗೆಯ ಅಂಗವಾಗಿ ಪರಿಸರಕ್ಕಗಿ ನಾವು ಕಾರ್ಯಕರ್ತರು ಮತ್ತು ವಿದ್ಯಾರ್ಥಿಗಳು ಮಂಗಳವಾರ ಧಾರವಾಡದ ಕಸ ಡಂಪಿಂಗ್ ಯಾರ್ಡ್‌ನಿಂದ ಎಚ್‌ಡಿಎಂಸಿ ಕಚೇರಿಗೆ ಪಾದಯಾತ್ರೆ ನಡೆಸಿದರು.

### ಮಹಾನಗರ ಪಾಲಿಕೆ ಆಯ-ವ್ಯಯ ಪೂರ್ವಭಾವಿ ಸಭೆ

## ಅಭಿವೃದ್ಧಿ ಪೂರಕ ಬಜೆಟ್ ಸಿದ್ಧಪಡಿಸಲು ಸಾರ್ವಜನಿಕರ ಸಲಹೆ



**ರಾಯಚೂರು, ಮಾ. 17:** ರಾಯಚೂರು ಮಹಾನಗರ ಪಾಲಿಕೆಯ 2026–27ನೇ ಸಾಲಿನ ಆಯವ್ಯಯ ತಯಾರಿಕೆ ಹಿನ್ನಲೆಯಲ್ಲಿ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರ ಅಧ್ಯಕ್ಷತೆಯಲ್ಲಿ ಪಾಲಿಕೆಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಈ ವೇಳೆ ಜುಬಿನ್ ಮೊಹಾಪಾತ್ರ ಅವರು ಮಾತನಾಡಿ, ರಾಯಚೂರು ನಗರದ ಸಮಗ್ರ ಅಭಿವೃದ್ಧಿಗೆ ಪೂರಕವಾದ ಬಜೆಟ್ ಸಿದ್ಧಪಡಿಸಲು ಸಾರ್ವಜನಿಕರ ನೇರ ಪಾಲ್ಗೊಳ್ಳುವಿಕೆ ಅತ್ಯಗತ್ಯವಾಗಿದೆ. ಮಹಾನಗರ ಪಾಲಿಕೆ ಯಾಗಿ ಮೇಲ್ದರ್ಜೇಗೇರಿದ ನಂತರ ಮೊದಲ ಬಜೆಟ್ ಇದಾಗಿದ್ದು, ಪ್ರತಿಯೊಬ್ಬ ನಾಗರಿಕರು ಮುಕ್ತವಾಗಿ ತಮ್ಮ ಸಲಹೆ ಮತ್ತು ಸೂಚನೆಗಳನ್ನು ನೀಡಬೇಕು ಎಂದರು.

ಹಿಂದಿನ ವರ್ಷಕ್ಕೆ ಹೋಲಿಸಿದರೆ ನಗರ ಪ್ರದೇಶ ಅಭಿವೃದ್ಧಿ ಹೊಂದಿದೆ. ಬಜೆಟ್ ಅನುಗುಣವಾಗಿ ಆದ್ಯತೆ ಮೇರೆಗೆ ಕೆಲಸ ಕಾಮಗಾರಿ ಮಾಡಲು ಸಲಹೆ ಸೂಚನೆಗಳನ್ನು ನೀಡಬೇಕು. ಹಿಂದಿನ ವರ್ಷದಲ್ಲಿ ಪ್ಲಾಸ್ಟಿಕ್ ನಿರ್ಮೂಲನೆ, ಕಸ ಮುಕ್ತ, ರಾಜ ಕಾಲುವೆ ಸ್ವಚ್ಛತ ಮಾಡಿ ಮಳೆಗಾಲದಲ್ಲಿ ತೊಂದರೆ ತಪ್ಪಿಸಲಾಗಿದೆ ಎಂದು ತಿಳಿಸಿದರು. ಪಾಲಿಕೆಯು ಆಶ್ರಯ ಯೋಜನೆಯಡಿ 2 ಸಾವಿರ ಮನೆಗಳ ನಿರ್ಮಾಣ ಮಾಡಿದೆ. ಅವುಗಳಿಗೆ ಮೂಲಭೂತ ಸೌಕರ್ಯ ಗಳನ್ನು ಒದಗಿಸಲಾಗಿದೆ ಎಂದು ಪಾಲಿಕೆಯ ಆಯುಕ್ತರು ಸಭೆಗೆ ಮಾಹಿತಿ ನೀಡಿದರು. ಈ ವೇಳೆ ಮುಖಂಡರಾದ ರವಿಂದ್ರ ಜಲ್ದಾರ್ ಅವರು ಮಾತನಾಡಿ, ನಗರಕ್ಕೆ ರಾಂಪುರ ಮತ್ತು ಕೃಷ್ಣ ನದಿಯಿಂದ ನೀರು ಸರಬರಾಜು ಮಾಡಲಾಗುತ್ತದೆ, ಮೋಟಾರುಗಳು ದುರಸ್ತಿಯಾದಲ್ಲಿ ನೀರು ಸರಬರಾಜು ನಿಲ್ಲುತ್ತದೆ. ಹೆಚ್ಚುವರಿ ಮೋಟಾರುಗಳ ವ್ಯವಸ್ಥೆ ಒದಗಿಸಿಕೊಡಬೇಕು. ಹೊಸ ಯೋಜನೆಗಳನ್ನು ರೂಪಿಸ ಬೇಕು. ನಗರದಲ್ಲಿ ಸುಸಜ್ಜಿತ ಮಾರುಕಟ್ಟೆ ವ್ಯವಸ್ಥೆ ಮಾಡಬೇಕು ಎಂದರು.

ಮಾಜಿ ಅಧ್ಯಕ್ಷರಾದ ಎನ್. ಮಹಾವೀರ ಅವರು ಮಾತನಾಡಿ, ನಗರ ದೊಡ್ಡ ಪ್ರಮಾದಲ್ಲಿ ಬೆಳೆಯುತ್ತಿದೆ. ಇದಕ್ಕೆ ತಕ್ಕಂತೆ ಮಾರುಕಟ್ಟೆ ವಿಸ್ತರಣೆ ಮಾಡಬೇಕು. ನಾಲ್ಕು ದಿಕ್ಕಿನಲ್ಲಿ ಜೋನ್ ವಲಯ ಮಾಡಿ, ತರಕಾರಿ ಮಾರುಕಟ್ಟೆ, ಹೂ–ಹಣ್ಣುಗಳ ಮಾರುಕಟ್ಟೆ, ಮಾಂಸ ಮಾರುಕಟ್ಟೆ ಮಾಡಬೇಕು. ಈ ವೇಳೆ ದಲಿತ ಸಂಘಟನೆ ಮುಖಂಡ ರಾಜು ಪಟ್ಟಿ ಅವರು ಮಾತನಾಡಿ, ನಗರದಲ್ಲಿರುವ ಶಿಕ್ಷಣ ಸಂಸ್ಥೆಗಳಿಂದ ಸರಿಯಾದ ತೆರಿಗೆ ಸಂಗ್ರಹಣೆಯಾಗ ಬೇಕು. ನಗರದಲ್ಲಿ ಸಾಕಷ್ಟು ರಸ್ತೆಗಳಲ್ಲಿ ಸಾರ್ವಜನಿಕ ಶೌಚಾಲಯಗಳಿಲ್ಲ. ಇದರಿಂದ ನಗರದ ಜನರಿಗೆ ತೊಂದರೆಯಾಗಿದೆ. ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕೆಂದರು.

ವ್ಯಾಪಾರಿಗಳ ಸಂಘದ ಮುಖ್ಯಸ್ಥ ಯೇಸುಮಿತ್ರ ಅವರು ಮಾತನಾಡಿ, ನಗರದ ಬೀದಿಬೀದಿಗಳಲ್ಲಿ ಸಣ್ಣ ಪುಟ್ಟ ಅಂಗಡಿ ಇಟ್ಟುಕೊಂಡು ಜೀವನ ನಡೆಸುತ್ತಿದ್ದು, ರಸ್ತೆ ತೆರವು ನೆಪದಲ್ಲಿ ಅಂಗಡಿಗಳನ್ನು ತೆರವು ಮಾಡುವ ಮುನ್ನ ಮಾಹಿತಿ ನೀಡಬೇಕು. ವ್ಯಾಪಾರಿಗಳಿಗೆ ಪ್ರತೇಕ ವಾಗಿ ಮಳಿಗೆ ಮಾಡಿ ಒಂದೇ ಕಡೆಗೆ ವ್ಯವಸ್ಥೆ ಕಲ್ಪಿಸಿ ಕೊಡಬೇಕೆಂದರು.

## ದೆಹಲಿಯಲ್ಲಿ ಯುವಕ ತರುಣ್ ಹತ್ಯೆಗೆ ಖಂಡನೆ: ಬಳ್ಳಾರಿಯಲ್ಲಿ ಬೃಹತ್ ಪ್ರತಿಭಟನೆ



**ಬಳ್ಳಾರಿ, ಮಾ.17–** ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಯುವಕ ತರುಣ್ ಮೇಲೆ ನಡೆದಿರುವ ಬರ್ಬರ ಹತ್ಯೆಯನ್ನು ಖಂಡಿಸಿ, ಬಳ್ಳಾರಿ ನಗರದಲ್ಲಿ ಇಂದು ಬೃಹತ್ ಪ್ರತಿಭಟನೆ ನಡೆಯಿತು. ನಗರದ ಮೋತಿ ಸರ್ಕಲ್‌ನಿಂದ ರಾಯಲ್ ಸರ್ಕಲ್‌ವರೆಗೆ ಸಾವಿರಾರು ಜನರು ಭಾಗವಹಿಸಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾಕಾರರು ಹಂತಕರಿಗೆ ಕಠಿಣ ಶಿಕ್ಷೆ ವಿಧಿಸಬೇಕು, ನಿರಪರಾಧಿಗಳಿಗೆ ನ್ಯಾಯ ಸಿಗಲಿ ಎಂಬ ಘೋಷಣೆಗಳನ್ನು ಕೂಗಿ, ಘಟನೆಗೆ ತೀವ್ರ ವಿರೋಧ ವ್ಯಕ್ತಪಡಿಸಿದರು. ಅತಿ ಸಣ್ಣ ಕಾರಣಕ್ಕಾಗಿ ಯುವಕನ ಪ್ರಾಣ ತೆಗೆಯಲಾಗಿರುವುದು ಸಮಾಜಕ್ಕೆ ದೊಡ್ಡ ಎಚ್ಚರಿಕೆಯಾಗಿದೆ ಎಂದು ಪ್ರತಿಭಟನಾಕಾರರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಈ ರೀತಿಯ ದುಷ್ಕೃತ್ಯಗಳು ಮರುಕಳಿಸದಂತೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು. ಆರೋಪಿಗಳನ್ನು ತಕ್ಷಣ ಬಂಧಿಸಿ ಕಾನೂನು ಪ್ರಕಾರ ಗಂಭೀರ ಶಿಕ್ಷೆಗೆ ಒಳಪಡಿಸಬೇಕು. ಸಂತ್ರಸ್ತ ಕುಟುಂಬಕ್ಕೆ ಸಂಪೂರ್ಣ ನ್ಯಾಯ ಸಿಗುವವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಬಳ್ಳಾರಿ ನಗರ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ, ಬಿಜೆಪಿ ಬಳ್ಳಾರಿ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು ಮೋಕಾ ಸೇರಿದಂತೆ ಹಲವು ಗಣ್ಯರು ಭಾಗವಹಿಸಿ, ಹತ್ಯೆ ಘಟನೆಯನ್ನು ತೀವ್ರವಾಗಿ ಖಂಡಿಸಿದರು. ವಿವಿಧ ಸಂಘಟನೆಗಳ ಮುಖಂಡರು ಹಾಗೂ ಹಿಂದೂ ಕಟ್ಟಿಗೆ ಸಮಾಜದ ಸದಸ್ಯರು ದೊಡ್ಡ ಸಂಖ್ಯೆಯಲ್ಲಿ ಹಾಜರಿದ್ದು, ಏಕತೆಯ ಸಂದೇಶವನ್ನು ಸಾರಿದರು.

ಪ್ರತಿಭಟನೆ ಶಾಂತಿಯುತವಾಗಿ ಸಾಗಿದ್ದು, ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಬಂದೋಬಸ್ತ್ ವ್ಯವಸ್ಥೆ ಮಾಡಿತ್ತು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿತ್ತು.

ಈ ಘಟನೆಗೆ ಸಂಬಂಧಿಸಿದಂತೆ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಿ, ಸಂತ್ರಸ್ತ ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಎಂಬ ಒತ್ತಾಯ ಪ್ರತಿಭಟನೆಯ ಮುಖ್ಯ ಉದ್ದೇಶ ವಾಗಿತ್ತು.

## ತುರ್ತು ಪರಿಸ್ಥಿತಿಯಲ್ಲಿ ಸ್ವಯಂಸೇವಕರ ಪಾತ್ರ ಮಹತ್ವದ್ದು: ಡಾ.ಸುಮನ್ ಪನ್ನೇಕರ್




**ಬಳ್ಳಾರಿ, ಮಾ.17–** ತುರ್ತು ಪರಿಸ್ಥಿತಿಯ ಸಂದರ್ಭ ಹಾಗೂ ವಿಪತ್ತುಗಳು ಸಂಭವಿಸಿದ ಸಮಯದಲ್ಲಿ ರೆಡ್ ಕ್ರಾಸ್ ಮತ್ತು ರೇಂಜರ್ಸ್, ರೋವರ್ಸ್ ಗಳ ಪಾತ್ರ ತುಂಬಾ ಅಮೂಲ್ಯವಾದುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕಿ ಡಾ.ಸುಮನ್ ಡಿ. ಪನ್ನೇಕರ್ ನುಡಿದರು.

ಜಿಲ್ಲಾ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯು ಯುವ ರೆಡ್‌ಕ್ರಾಸ್ ಕಾರ್ಯಕ್ರಮ ಅಧಿಕಾರಿ ಮತ್ತು ಸ್ವಯಂಸೇವಕರಿಗಾಗಿ ಆಯೋಜಿಸಿದ್ದ ಪ್ರಥಮ ಚಿಕಿತ್ಸೆ ಮತ್ತು ಪ್ರಕೃತಿ ವಿಕೋಪ ನಿರ್ವಹಣೆ ವಿಶೇಷ ಕಾರ್ಯಾಗಾರವನ್ನು ಉದ್ಘಾಟಿಸಿ, ಪ್ರಥಮ ಚಿಕಿತ್ಸೆಯು ರೋಗಿಗೆ ತಕ್ಷಣದ ವೈದ್ಯಕೀಯ ನೆರವು ನೀಡಿದರೆ ವಿಕೋಪ ನಿರ್ವಹಣೆಯು ಪಾರುಗಾಣಿಕಾ ಮತ್ತು ಚೇತರಿಕೆಯ ಮೂಲಕ ಪ್ರಾಣಹಾನಿ ಕಡಿಮೆ ಮಾಡುತ್ತದೆ ಎಂದರು.

ರೆಡ್ ಕ್ರಾಸ್ ಸಂಸ್ಥೆಯ ಖಜಾಂಚಿ ಪೋಲಾ ರಾಧಾಕೃಷ್ಣ ಮಾತನಾಡಿ. ಮಡಿಕೇರಿಯಲ್ಲಿ ಈ ಹಿಂದೆ ಗುಡ್ಡ ಕುಸಿತ ಉಂಟಾಗಿ ನೂರಾರು ಜನ ತೊಂದರೆಗೆ ಈಡಾದ ಸಂದರ್ಭದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯು ನಿರ್ವಹಿಸಿದ ಕಾರ್ಯವನ್ನು ನೆನಪಿಸಿಕೊಂಡು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಂಶುಪಾಲರಾದ ಡಾ.ಪ್ರಹ್ಲಾದ್ ಚೌದ್ರಿ ಪ್ರಕೃತಿ ವಿಕೋಪಗಳು ಅಥವಾ ಆಕಸ್ಮಿಕ ಅವಘಡಗಳು ಸಂಭವಿಸಿದಾಗ ಗಾಬರಿಯಾಗದೆ ದಿಟ್ಟತನ ಮತ್ತು ಸಮಯ ಪ್ರಜ್ಞೆಯಿಂದ ಕಾರ್ಯ ನಿರ್ವಹಿಸುವುದು ಮುಖ್ಯ ಎಂದರು.

## ಮಹಿಳಾ ಕ್ರೀಡಾಕೂಟಕ್ಕೆ ಜಿಲ್ಲಾಧಿಕಾರಿ ಜಿ.ಪ್ರಭು ಚಾಲನೆ



**ಚಿಕ್ಕಬಳ್ಳಾಪುರ, ಮಾ.17–** ಮಹಿಳಾ ದಿನಾಚರಣೆಯ ಅಂಗವಾಗಿ ಜಿಲ್ಲೆಯಲ್ಲಿ ಚೊಚ್ಚಲವಾಗಿ ಹಮ್ಮಿಕೊಂಡಿರುವ ಕ್ರೀಡಾ ಕೂಟಕ್ಕೆ ಚಾಲನೆ ನೀಡಿರುವುದು ಹೆಚ್ಚಿನ ಸಂತಸ ಮೂಡಿಸಿದೆ. ಮುಂದಿನ ವರ್ಷದಲ್ಲಿ ಈ ಕ್ರೀಡಾಕೂಟವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಹಾಗೂ ಅರ್ಥಪೂರ್ಣವಾಗಿ ಆಯೋಜಿಸಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮಹಿಳಾ ಕ್ರೀಡಾಕೂಟಕ್ಕೆ ನಗರದ ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಲನೆ ನೀಡಿ ಮಹಿಳೆಯು ತಾಯಿಯಾಗಿ, ಮಡದಿಯಾಗಿ, ಸಹೋದರಿಯಾಗಿ, ಮಗಳಾಗಿ ಹೀಗೆ ವಿವಿಧ ಪಾತ್ರಗಳನ್ನು ನಿರ್ವಹಿಸಿ ಮನುಕುಲದ ಸಂತತಿಯ ಮುಂದುವರಿಕೆಯ ಭಾಗವಾಗಿ ತನ್ನದೇ ಆದಂತಹ ಮಹತ್ತರವಾದ ಪಾತ್ರವನ್ನು ನಿರ್ವಹಿಸುವ ಮಹಿಳೆಗೆ ತನ್ನದೆ ದಿನಾಚರಣೆ ಇದೆ ಎಂಬುದೇ ಕೆಲವರಿಗೆ ಗೊತ್ತಿಲ್ಲ.

ಇಂತಹ ಮಹಿಳಾ ವರ್ಗದ ಬಗ್ಗೆ ಪ್ರತಿಯೊಬ್ಬರಿಗೂ ಗೌರವ ಹಾಗೂ ಅಭಿಮಾನ ಇರಬೇಕು ಇಲ್ಲವಾದಲ್ಲಿ ಬದುಕಿಗೆ ಅರ್ಥವೇ ಇರುವುದಿಲ್ಲ. ಆದ್ದರಿಂದ ಜಿಲ್ಲೆಯ ಮಹಿಳೆಯರಲ್ಲಿರುವ ಪ್ರತಿಭೆಗಳ ಗುರ್ತಿಸುವಿಕೆಗೆ ಈ ಮಹಿಳಾ ಕ್ರೀಡಾಕೂಟ ಸಹಕಾರಿಯಾಗಿದೆ.

ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅವರು "ಗುಂಡು ಎಸೆಯುವ ಸ್ಪರ್ಧೆಯಲ್ಲಿ ಭಾಗವಹಿಸುವ ಮೂಲಕ ಮಹಿಳಾ ಕ್ರೀಡಾಕೂಟಕ್ಕೆ ಪ್ರೇರಣೆ ನೀಡಿದರು. ವಿವಿಧ ಕ್ರೀಡಾ ಸ್ಪರ್ಧೆಗಳು ನಡೆದವು.

# ಇರಾನ್ ಶಾಂತಿ ಮಾತುಕತೆ ತಿರಸ್ಕರಿಸಿದ್ದರಿಂದ ಲಾರಿಜಾನಿ ಹತ್ಯೆ: ಇಸ್ರೇಲ್ ಹೇಳಿಕೆ, ಹಾರ್ಮುಜ್ ಉದ್ವಿಗ್ನತೆ



**ವಾಷಿಂಗ್ಟನ್/ ಟೆಹ್ರಾನ್, ಮಾ.17:** ಇಸ್ರೇಲ್-ಇರಾನ್ ಸಂಘರ್ಷವು 18ನೇ ದಿನ ಮುಂದುವರಿದಿದ್ದು, ಅಮೆರಿಕ, ಇಸ್ರೇಲ್ ಮತ್ತು ಇರಾನ್ ತೀವ್ರವಾದ ದಾಳಿಗಳು ಮತ್ತು ಪ್ರತಿದಾಳಿಗಳನ್ನು ಮುಂದುವರಿಸಿವೆ, ಹೆಚ್ಚುತ್ತಿರುವ ಉದ್ವಿಗ್ನತೆಗಳು ಆಯಕಟ್ಟಿನ ಪ್ರಮುಖವಾದ ಹಾರ್ಮುಜ್ ಜಲಸಂಧಿಯ ಮೇಲೆ ಹರಡಿತು. ಸೋಮವಾರ ರಾತ್ರಿ ನಡೆಸಿದ ವಾಯುದಾಳಿಗಳಲ್ಲಿ ಇರಾನ್‌ನ ಉನ್ನತ ಭದ್ರತಾ ಅಧಿಕಾರಿ ಅಲಿ ಲಾರಿಜಾನಿಯನ್ನು ಕೊಂದಿರುವುದಾಗಿ ಇಸ್ರೇಲ್ ರಕ್ಷಣಾ ಪಡೆಗಳು ಹೇಳಿಕೊಂಡಿವೆ, ಆದರೂ ಟೆಹ್ರಾನ್ ಇಸ್ರೇಲ್‌ನ ರಕ್ಷಣಾ ಸಚಿವ ಕಾಟ್ಜ್ ಅವರ ಹೇಳಿಕೆಯನ್ನು ಇನ್ನೂ ದೃಢಪಡಿಸಿಲ್ಲ. ಏತನ್ಮಧ್ಯೆ, ಇರಾನ್ನ ಸರ್ವೋಚ್ಚ ನಾಯಕ ಮೊಜ್ತಾಬಾ ಖಮೇನಿ ಶಾಂತಿ ಮಾತುಕತೆಗೆ ಯಾವುದೇ ಪ್ರಸ್ತಾಪವನ್ನು ತಿರಸ್ಕರಿಸಿದ್ದಾರೆ ಎಂದು ವರದಿಗಳು ಸೂಚಿಸುತ್ತವೆ. ಸೋಮವಾರ ಗುರಿಯಿಟ್ಟುಕೊಂಡ ದಾಳಿಯಲ್ಲಿ ಇರಾನ್ನ ಬಸಿಜ್ ಅರೆಸೈನಿಕ ಪಡೆಯ ಮುಖ್ಯಸ್ಥನನ್ನು ಕೊಂದಿರುವುದಾಗಿ ಇಸ್ರೇಲ್ ಸೇನೆ ಹೇಳಿದೆ. ಜುಲೈ 2019 ರಲ್ಲಿ ಸುಪ್ರೀಂ ನಾಯಕ ಅಲಿ ಖಮೇನಿ ಅವರು ಸುಲೈಮಾನಿಯನ್ನು ಬಸಿಜ್‌ನ ಮುಖ್ಯಸ್ಥರನ್ನಾಗಿ ನೇಮಿಸಿದರು. ಘೋಲಮ್ರೇಜಾ ಸುಲೈಮಾನಿ ಅವರ ಹತ್ಯೆಯು "ಆಡಳಿತದ ಭದ್ರತಾ ಕಮಾಂಡ್-ಅಂಡ್-ಕಂಟ್ರೋಲ್ ರಚನೆಗಳಿಗೆ ಹೆಚ್ಚುವರಿ ಮಹತ್ವದ ಹೊಡೆತವಾಗಿದೆ" ಎಂದು ಇಸ್ರೇಲ್ ರಕ್ಷಣಾ ಪಡೆಗಳು ತಿಳಿಸಿವೆ. ಪ್ರಮುಖ ಕಮಾಂಡ್ ಮತ್ತು ಕಾರ್ಯಾಚರಣೆ ಕೇಂದ್ರಗಳನ್ನು ಗುರಿಯಾಗಿಸಿಕೊಂಡು ರಾತ್ರಿಯಿಡೀ ನಡೆದ ದಾಳಿಗಳಲ್ಲಿ ಬಸಿಜ್ನ ಸುಮಾರು 300 ಕಮಾಂಡರ್ಗಳು ಮತ್ತು ಕ್ಷೇತ್ರ ಅಧಿಕಾರಿಗಳು ಸಾವನ್ನಪ್ಪಿದ್ದಾರೆ ಎಂದು ಇರಾನ್ ಇಂಟರ್‌ನ್ಯಾಷನಲ್ ವರದಿ ಮಾಡಿದೆ. ಏತನ್ಮಧ್ಯೆ, ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಅವರು ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರೊಂದಿಗಿನ ಕರೆಯ ಸಮಯದಲ್ಲಿ ಅಮೆರಿಕ ಮತ್ತು ಇಸ್ರೇಲಿ ಆಕ್ರಮಣವನ್ನು ಖಂಡಿಸುವಂತೆ ವಿಶ್ವಸಂಸ್ಥೆಯನ್ನು ಒತ್ತಾಯಿಸಿದರು. ಹಾರ್ಮುಜ್ ಜಲಸಂಧಿಯಲ್ಲಿನ ಅಡಚಣೆಗಳು ಸಂಘರ್ಷದ ನೇರ ಪರಿಣಾಮವಾಗಿದೆ ಮತ್ತು ಅದನ್ನು ಪ್ರತ್ಯೇಕವಾಗಿ ನೋಡಲಾಗುವುದಿಲ್ಲ ಎಂದು ಅವರು ಹೇಳಿದರು. ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಕರ್ ಖಲಿಬಾಫ್, ಹಾರ್ಮುಜ್ ಜಲಸಂಧಿಯು "ಅದರ ಹಿಂದಿನ ಸ್ಥಿತಿಗೆ ಮರಳುವುದಿಲ್ಲ" ಎಂದು ಹೇಳಿದರು, "ಯುದ್ಧ ಕೊನೆಗೊಂಡಾಗ ಮಧ್ಯಪ್ರಾಚ್ಯದ ಮುಖ ಮತ್ತು ಕ್ರಮವು ಬದಲಾಗುತ್ತದೆ ಆದರೆ ಅಮೆರಿಕ ಬಯಸುವ ಯಾವುದೂ ಸಂಭವಿಸುವುದಿಲ್ಲ" ಎಂದು ಹೇಳಿದರು.



ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಂಗಳವಾರ ಕೋಲ್ಕತ್ತಾದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗಾಗಿ ಟಿಎಂಸಿ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದರು. ಸಂಸದ ಅಭಿಷೇಕ್ ಬ್ಯಾನರ್ಜಿ ಅವರನ್ನೂ ಸಹ ಕಾಣಬಹುದು.

# ಭಾರತಕ್ಕೆ 46,000 ಟನ್ ಎಲ್‌ಪಿಜಿ ಹೊತ್ತು ತಂದ ನಂದಾದೇವಿ ಹಡಗು




**ಗಾಂಧಿನಗರ, ಮಾ.17:** 46,000 ಟನ್ ಎಲ್‌ಪಿಜಿ ಹೊತ್ತ ನಂದಾದೇವಿ ಹಡಗು ಗುಜರಾತ್‌ನ ಕಾಂಡ್ಲಾ ಬಂದರಿಗೆ ಆಗಮಿಸಿದೆ. ಇದರಿಂದ ಭಾರತದಲ್ಲಿ ತಲೆದೋರಿರುವ ಅಡುಗೆ ಅನಿಲದ ಸಮಸ್ಯೆ ಸ್ವಲ್ಪ ಮಟ್ಟಿಗೆ ಬಗೆಹರಿಯಲಿದೆ.

ಸೋಮವಾರ ಶಿವಾಲಿಕ್ ಹಡಗು 46,000 ಟನ್ ಎಲ್‌ಪಿಜಿ ಹೊತ್ತು ಭಾರತಕ್ಕೆ ಬಂದಿತ್ತು. ಎರಡೂ ಹಡಗುಗಳು ಸರ್ಕಾರಿ ಸ್ವಾಮ್ಯದ ಶಿಪ್ಪಿಂಗ್ ಕಾರ್ಪೊರೇಷನ್ ಆಫ್ ಇಂಡಿಯಾ ಒಡೆತನದಲ್ಲಿವೆ. ಎರಡು ಹಡಗುಗಳು ತಲಾ 46,000 ಟನ್ ಎಲ್‌ಪಿಜಿ ಹೊತ್ತು ತಂದಿವೆ. ಇದರೊಂದಿಗೆ ಮೂರನೇ ಹಡಗು ಸಹ ಇಂದು (ಮಾ.17) ಭಾರತಕ್ಕೆ ಬಂದು ತಲುಪುವ ಸಾಧ್ಯತೆ ಇದೆ.

ಯುಎಇಯ ಫುಜೈರಾ ಬಂದರಿನಿಂದ ಹೊರಟಿದ್ದ ಕಚ್ಚಾ ತೈಲ ಟ್ಯಾಂಕರ್ ಜಗ್ ಲಡ್ಕಿ ಮಂಗಳವಾರ ಗುಜರಾತ್‌ನ ಮುಂದ್ರಾ ಬಂದರಿಗೆ ಆಗಮಿಸುವ ನಿರೀಕ್ಷೆಯಿದೆ.

ಈ ಹಡಗು 81,000 ಮೆಟ್ರಿಕ್ ಟನ್ ಕಚ್ಚಾ ತೈಲವನ್ನು ಹೊತ್ತು ತರಿದೆ. 46,000 ಟನ್ ಎಲ್‌ಪಿಜಿಯನ್ನು ಹೊತ್ತು ತಂದಿದ್ದ ಶಿವಾಲಿಕ್ ಹಡಗು, ಮುಂದ್ರಾದಲ್ಲಿ 20,000 ಟನ್ ಎಲ್‌ಪಿಜಿ ಇಳಿಸಲಿದೆ. ಉಳಿದ 26,000 ಟನ್‌ಗಳನ್ನು ನವ ಮಂಗಳೂರು ಬಂದರಿಗೆ ಹೊತ್ತು ತರಲಿದೆ. ಈ ಮೂಲಕ ರಾಜ್ಯಕ್ಕೆ 26,000 ಟನ್ ಎಲ್‌ಪಿಜಿ ದೊರೆಯಲಿದೆ.

### ಹಾರ್ಮುಜ್ ಜಲಸಂಧಿಯಲ್ಲಿ ಮಿಲಿಟರಿ ಹಸ್ತಕ್ಷೇಪ

## ಅಮೆರಿಕದ ಕರೆಗೆ ಬೆಂಬಲವಿಲ್ಲ: ಇಯು

**ಬ್ರಸೆಲ್ಸ್, ಮಾ.17:** ಗಲ್ಫ್ ಸಂಘರ್ಷವು ಜಾಗತಿಕ ಇಂಧನ ಹರಿವನ್ನು ಅಡ್ಡಿಪಡಿಸುತ್ತಿರುವುದರಿಂದ, ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಮಿಲಿಟರಿ ಬೆಂಬಲಕ್ಕಾಗಿ ಅಮೆರಿಕದ ಕರೆಗಳನ್ನು ಬೆಂಬಲಿಸಲು ತಾನು ಆತುರಪಡುವುದಿಲ್ಲ ಎಂದು ಯುರೋಪಿಯನ್ ಒಕ್ಕೂಟ ಸೂಚಿಸಿದೆ.

ಕ್ಷಿಪಣಿ ಮತ್ತು ಡ್ರೋನ್ ದಾಳಿಯಿಂದಾಗಿ ವಿಶ್ವದ ಕಚ್ಚಾ ತೈಲದ ಸುಮಾರು 20% ಹರಿವಿಗೆ ಕಾರಣವಾಗಿರುವ ಕಿರಿದಾದ ಜಲಮಾರ್ಗದ ಮೂಲಕ ಸಾಗಣೆಯು ನಿಧಾನವಾಗಿದೆ, ಇದು ತೈಲ ಬೆಲೆ ಹೆಚ್ಚಳ ಮತ್ತು ಹಣದುಬ್ಬರದ ಭಯ ಹೆಚ್ಚಿಸಿದೆ. ವಾಣಿಜ್ಯ ಹಡಗುಗಳಿಗೆ ಬೆಂಗಾವಲು ನೀಡಲು ನೌಕಾಪಡೆಗಳನ್ನು ನಿಯೋಜಿಸಲು ಡೊನಾಲ್ಡ್ ಟ್ರಂಪ್ ಯುರೋಪಿಯನ್ ಮಿತ್ರರಾಷ್ಟ್ರಗಳನ್ನು ಒತ್ತಾಯಿಸಿದ್ದಾರೆ. ಆದರೆ ಬ್ರಸೆಲ್ಸ್ ಎಚ್ಚರಿಕೆಯ ನಿಲುವನ್ನು ತೆಗೆದುಕೊಂಡಿದೆ. ಇಗ ವಿದೇಶಾಂಗ ನೀತಿ ಮುಖ್ಯಸ್ಥೆ ಕಾಜಾ ಕಲ್ಲಾಸ್, ಬಣವು ಮತ್ತಷ್ಟು ಉಲ್ಬಣಗೊಳ್ಳುವ ಅಪಾಯವನ್ನು ಎದುರಿಸಲು ಸಿದ್ಧವಾಗಿಲ್ಲ ಎಂದು ಹೇಳಿದರು, ರಾಜತಾಂತ್ರಿಕ ಮಾರ್ಗಗಳು ಮುಕ್ತವಾಗಿರಬೇಕು ಎಂದು ಒತ್ತಿ ಹೇಳಿದರು. ಆಳವಾದ ಸಂಘರ್ಷವು ರಸಗೊಬ್ಬರಗಳು ಮತ್ತು ಅಗತ್ಯ ಸರಕುಗಳನ್ನು ಒಳಗೊಂಡಂತೆ ಶಕ್ತಿಯ ಆಚೆಗಿನ ಕೊರತೆಯನ್ನು ಉಂಟುಮಾಡಬಹುದು ಎಂದು ಅವರು ಎಚ್ಚರಿಸಿದರು. ಯುಕೆಯಲ್ಲಿ, ಪ್ರಧಾನ ಮಂತ್ರಿ ಕೀರ್ ಸ್ಟಾರ್ಮರ್ ಕೂಡ ಪಡೆಗಳನ್ನು ಒಪ್ಪಿಸುವುದನ್ನು ನಿಲ್ಲಿಸಿದರು, ಬ್ರಿಟನ್ "ಕಾರ್ಯಸಾಧ್ಯವಾದ ಸಾಮೂಹಿಕ ಯೋಜನೆ"ಯಲ್ಲಿ ಪಾಲುದಾರರೊಂದಿಗೆ ಕೆಲಸ ಮಾಡುತ್ತದೆ ಎಂದು ಹೇಳಿದರು ಆದರೆ ಈ ಪ್ರದೇಶದಲ್ಲಿ ಈಗಾಗಲೇ ಗಣಿ-ತೆರವುಗೊಳಿಸುವ ಹಡಗುಗಳನ್ನು ನಿಯೋಜಿಸಲಾಗಿದೆ ಎಂದು ಗಮನಿಸಿದರು. ಈ ಪ್ರತಿಕ್ರಿಯೆಯು ಬೆಳೆಯುತ್ತಿರುವ ಅಟ್ಲಾಂಟಿಕ್ ಅಂತರದ ವಿಭಜನೆಯನ್ನು ಎತ್ತಿ ತೋರಿಸುತ್ತದೆ, ವಾಷಿಂಗ್ಟನ್ ಮಿಲಿಟರಿ ಪರಿಹಾರವನ್ನು ಬೆಂಬಲಿಸುತ್ತಿದೆ ಆದರೆ ಯುರೋಪಿಯನ್ ರಾಜಧಾನಿಗಳು ರಾಜತಾಂತ್ರಿಕತೆಗೆ ಆದ್ಯತೆ ನೀಡುತ್ತಿವೆ, ರಷ್ಯಾ-ಉಕ್ರೇನ್ ಯುದ್ಧದಿಂದಾಗಿ ಈಗಾಗಲೇ ಭಾರಿ ಹಾನಿಯನ್ನು ಅನುಭವಿಸುತ್ತಿವೆ.

### ಸ್ಪೀಕರ್ ಸಭಾತ್ಯಾಗ ಸಿದ್ದರಾಮಯ್ಯ ಸರ್ಕಾರದ ಆಡಳಿತ ವೈಫಲ್ಯಕ್ಕೆ 'ಕೈ'ಗನ್ನಡಿ । ಅಧಿಕಾರಿಗಳ ತಲೆದಂಡ ಅಭ್ಯಾಸವಾಗಿದೆ

# ರಾಜ್ಯ ಸರ್ಕಾರದ ಸಚಿವರಿಗೆ ಆಡಳಿತದ ಮೇಲೆ ನಿರಾಸಕ್ತಿ: ಜೋಶಿ ವಾಗ್ದಾಳಿ



**ನವದೆಹಲಿ,ಮಾ.17:** "ರಾಜ್ಯ ಕಾಂಗ್ರೆಸ್ ಸರ್ಕಾರ ಆಗಾಗ ತನ್ನ ಆಡಳಿತ ವೈಫಲ್ಯವನ್ನು ಪ್ರದರ್ಶಿಸುತ್ತಲೇ ಇದ್ದು, ಇದೀಗ ಖುದ್ದು ವಿಧಾನಸಭೆ ಸ್ಪೀಕರ್ ಅವರೇ ಸಿಟ್ಟಿಗೆದ್ದು ಸದನದಿಂದ ಹೊರ ನಡೆದು ಆಡಳಿತದ ಅಸಮರ್ಥತೆಯನ್ನು ಮತ್ತೊಮ್ಮೆ ತೆರೆದಿಟ್ಟಿದ್ದಾರೆ" ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಟೀಕಿಸಿದ್ದಾರೆ.

ಸದನದಲ್ಲಿ ಶಾಸಕರ ಪ್ರಶ್ನೆಗಳಿಗೆ ಸಚಿವರು ಸಮರ್ಪಕ ಉತ್ತರ ನೀಡದ ಹಾಗೂ ಕೆಲ ಸಚಿವರು ಗೈರು ಇರುವುದನ್ನು ಕಂಡು ಸ್ಪೀಕರ್ ಯು.ಟಿ.ಖಾದರ್ ಅವರು 'ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೆದುರೇ ಸಭಾತ್ಯಾಗ ಮಾಡಿರುವುದು ಈ ಸರ್ಕಾರದ ಅಧೋಗತಿಗೆ ಹಿಡಿದ ಕೈಗನ್ನಡಿ' ಎಂದು ಜೋಶಿ ಪ್ರತಿಕ್ರಿಯಿಸಿದ್ದಾರೆ.

ಸದನದಲ್ಲಿ ಶಾಸಕರ ಪ್ರಶ್ನೆಗಳಿಗೆ ಉತ್ತರ ನೀಡುವಲ್ಲಿ ಅನೇಕ ಸಚಿವರು ವಿಫಲರಾಗಿದ್ದಾರೆ ಎಂದರೆ ರಾಜ್ಯ ಸರ್ಕಾರದ ಕಾರ್ಯ ವೈಖರಿ ನಿಜಕ್ಕೂ ಶೋಚನೀಯ. ಸಿಎಂಗೆ ಸಚಿವರು ಮತ್ತು ಆಡಳಿತದ ಮೇಲೆ ಹಿಡಿತವೇ ಇಲ್ಲ ಎನ್ನಬೇಕಾಗುತ್ತದೆ ಎಂದಿದ್ದಾರೆ ಜೋಶಿ.

**ಸರ್ಕಾರ ನಡೆಸುವಲ್ಲಿ ನಿರಾಸಕ್ತಿಯೇ?:**

ರಾಜ್ಯದ ಸಚಿವರುಗಳು ಬಜೆಟ್ ಕಲಾಪದಲ್ಲೂ ಶಾಸಕರ ಪ್ರಶ್ನೆಗಳಿಗೆ ಉತ್ತರಿಸಲಾರದ ಸ್ಥಿತಿ ತಲುಪಿದ್ದಾರೆ. ಅಲ್ಲದೆ, ಸಕಾಲಕ್ಕೆ ಅಧಿವೇಶನಕ್ಕೆ ಹಾಜರಾಗುವುದೂ ಇಲ್ಲ ಎಂದರೆ ಇವರಿಗೆ ಆಡಳಿತದ ಮೇಲೆ ಆಸಕ್ತಿಯೇ ಇಲ್ಲ. ಬಹುಶಃ ಸರ್ಕಾರ ನಡೆಸುವುದರ ಬಗೆಗೆ ನಿರಾಸಕ್ತಿ ಇದ್ದಂತಿದೆ ಎಂದು ಪ್ರಲ್ಹಾದ ಜೋಶಿ ಚಾಟಿ ಬೀಸಿದ್ದಾರೆ. ಪ್ರಸ್ತುತದಲ್ಲಿ ಕೆಲ ಸಚಿವರು, ಶಾಸಕರು 'ಸಿಎಂ ಬದಲಾವಣೆ" ವಿಚಾರದಲ್ಲಿಯೇ ಹೆಚ್ಚು ಸಕ್ರಿಯರಾದಂತೆ ಕಾಣುತ್ತದೆ.

ಇವರಿಗೆ ರಾಜ್ಯದ ಜನರ ಹಿತ, ರಾಜ್ಯದ ಅಭಿವೃದ್ಧಿಗಿಂತ ಗುಂಪುಗಾರಿಕೆ, ದೆಹಲಿ ಮತ್ತು ವಿದೇಶ ಪ್ರವಾಸವೇ ಪ್ರಮುಖವಾದಂತಿದೆ. ಎಲ್ಲಿ ಬೇಕಾದಲ್ಲಿ ಪ್ರವಾಸಕ್ಕೆ ಸಮಯವಿರುವ ಮಂತ್ರಿಗಳಿಗೆ ಸದನಕ್ಕೆ ಬರಲು ಸಮಯ ಇಲ್ಲವೇ ಜೋಶಿ ಪ್ರಶ್ನಿಸಿದ್ದಾರೆ.

'ಮಂತ್ರಿಗಳು ಸದನಕ್ಕೆ ಬರದಿರುವ ಬಗ್ಗೆ ಅದಾಗಲೇ ನಾಲ್ಕು ಭಾರಿ ಸೂಚನೆ ನೀಡಿದ್ದೇನೆ. ಇದು 5ನೇ ಬಾರಿ! ಕೊನೆಗೂ ಸುಧಾರಣೆ ಕಾಣಲೇ ಇಲ್ಲ' ಎನ್ನುವ ಮೂಲಕ ಖುದ್ದು ಸ್ಪೀಕರ್ ಅವರೇ ರಾಜ್ಯ ಸಚಿವರುಗಳ ಅಸಮರ್ಪಕ ಕಾರ್ಯ ವೈಖರಿ ಮತ್ತು ಎರಡೂವರೆ ವರ್ಷ ರಾಜ್ಯ ಕಾಂಗ್ರೆಸ್ ಸರ್ಕಾರದ ಅಸಮರ್ಥ ಆಡಳಿತವನ್ನು ಮನಗಂಡು 'ಫೇಲ್ ' ಮಾರ್ಕ್ಸ್ ನೀಡಿದ್ದಾರೆ' ಎಂದು ಜೋಶಿ ಟೀಕಿಸಿದ್ದಾರೆ.

**ಅಧಿಕಾರಿಗಳ ತಲೆದಂಡ ಅಭ್ಯಾಸ ಆಗಿಬಿಟ್ಟಿದೆ:**

ಇನ್ನು, ಈ ಸರ್ಕಾರಕ್ಕೆ ಸಚಿವರುಗಳ ತಪ್ಪಿಗೆ ಹಿರಿಯ ಅಧಿಕಾರಿಗಳ ತಲೆದಂಡ ಕೊಡುವುದು ಅಭ್ಯಾಸವಾಗಿಬಿಟ್ಟಿದೆ. ಮಂತ್ರಿಗಳ ವಿರುದ್ಧ ಸ್ಪೀಕರ್ ಗುಡುಗಿದ್ದಕ್ಕೆ ಈಗಲೂ ಹಿರಿಯ ಐಎಎಸ್ ಅಧಿಕಾರಿಗಳ ಸಸ್ಪೆಂಡ್ ಮತ್ತು ಕೆಲವರಿಗೆ ಶೋಕಾಸ್ ನೋಟಿಸ್ ಕೊಟ್ಟಿರುವುದು ಸರ್ಕಾರದ ದುರಾಡಳಿತವನ್ನು ಪ್ರದರ್ಶಿಸುತ್ತದೆ. ಅಲ್ಲದೇ, ಸಿಎಂ-ಡಿಸಿಎಂ "ಮುಖ್ಯಮಂತ್ರಿ" ಕುರ್ಚಿ ಕದನದಲ್ಲಿ ಆಡಳಿತದ ಮೇಲೆ ಹಿಡಿತ ಕಳೆದುಕೊಂಡಿರುವುದಕ್ಕೆ 'ಸ್ಪೀಕರ್ ಸಭಾತ್ಯಾಗ' ಸಾಕ್ಷಿಯಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

# ತಮಿಳುನಾಡು ಮಾದಕ ದ್ರವ್ಯಗಳ ತಾಣ: ಪಳನಿಸ್ವಾಮಿ ಟೀಕೆ

**ಚೆನ್ನೈ, ಮಾ. 17:** ತಮಿಳುನಾಡಿನ ಹಾಲಿ ಡಿಎಂಕೆ ಸರ್ಕಾರ ರಾಜ್ಯವನ್ನು ಮಾದಕ ದ್ರವ್ಯಗಳ ತಾಣವನ್ನಾಗಿ ಮಾಡಿದೆ ಎಂದು ಎಐಎಡಿಎಂಕೆ ನಾಯಕ ಎಡಪ್ಪಾಡಿ ಕೆ. ಪಳನಿಸ್ವಾಮಿ (ಇಪಿಎಸ್) ಟೀಕಿಸಿದ್ದಾರೆ. ಸಿಎಂ ಎಂ.ಕೆ. ಸ್ಟಾಲಿನ್ ನೇತೃತ್ವದ ಸರ್ಕಾರ ಜನಸಾಮಾನ್ಯರನ್ನು ರಕ್ಷಿಸುತ್ತಿದೆಯೇ ಅಥವಾ ಸಮಾಜವಿರೋಧಿ ಶಕ್ತಿಗಳಿಗೆ ಉತ್ತೇಜಿಸುತ್ತಿದೆಯೇ ಎನ್ನುವ ಸಂಶಯ ವ್ಯಕ್ತವಾಗುತ್ತಿದೆ ಎಂದವರು ಆಕ್ರೋಶ ಹೊರ ಹಾಕಿದ್ದಾರೆ. 2021ರಲ್ಲಿ ಸ್ಟಾಲಿನ್ ಅಧಿಕಾರ ವಹಿಸಿಕೊಂಡ ಬಳಿಕ ರಾಜ್ಯದಲ್ಲಿ ಗಾಂಜಾ, ಅಕ್ರಮ ಮದ್ಯ ಮಾರಾಟ ಹಾಗೂ ಡ್ರಗ್ ಮಾಫಿಯಾ ಏರಿಕೆಯಾಗಿದ್ದು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಕೂಡ ಮಾದಕ ವ್ಯಸನಕ್ಕೆ ಬಲಿಯಾಗುತ್ತಿರುವುದು ಮಾಧ್ಯಮ ವರದಿಗಳಿಂದ ಸಾಬೀತಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಕಳೆದ ಐದು ವರ್ಷಗಳ ಡಿಎಂಕೆ ಆಡಳಿತಾವಧಿಯಲ್ಲಿ ಸುಮಾರು 30 ಲಾಕಪ್ ಸಾವುಗಳು ನಡೆದಿವೆ. ಕಳೆದ ಎರಡು ತಿಂಗಳಲ್ಲೇ ನಾಲ್ವರು ದಲಿತ ಯುವಕರು ಪೊಲೀಸ್ ವಶದಲ್ಲಿ ಸಾವನ್ನಪ್ಪಿರುವುದು ಕಾನೂನು ಸುವ್ಯವಸ್ಥೆಯ ವೈಫಲ್ಯಕ್ಕೆ ಸಾಕ್ಷಿಯಾಗಿದೆ. ರಾಜ್ಯದಲ್ಲಿ ಮಹಿಳೆಯರು ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಹಾಗೂ ಕೊಲೆ ಪ್ರಕರಣಗಳು ಹಿಂದೆಂದೂ ಕಾಣದ ರೀತಿಯಲ್ಲಿ ಹೆಚ್ಚಿವೆ



ಎಂದು ಅವರು ಆರೋಪ ಹೊರಿಸಿದ್ದಾರೆ. ಜನವಿರೋಧಿ ಆಡಳಿತದಿಂದ ರಾಜ್ಯವನ್ನು ಮುಕ್ತ ಗೊಳಿಸಬೇಕಾದ ಸಮಯ ಬಂದಿದೆ. ಮುಂಬರುವ ದಿನಗಳಲ್ಲಿ ಈ ಅಸಮರ್ಥ ಸರ್ಕಾರವನ್ನು ಕಿತ್ತೊಗೆಯುವ ಮೂಲಕ ಶಾಂತಿ ಮತ್ತು ಸುರಕ್ಷತೆಯನ್ನು ಮರುಸ್ಥಾಪಿಸಲು ಜನರು ಕೈಜೋಡಿಸಬೇಕು ಎಂದು ಜನತೆಗೆ ಕರೆ ನೀಡಿದ್ದಾರೆ.

# ಪಿತೃತ್ವ ರಜೆಗೆ ಕಾನೂನು ತನ್ನಿ: ಕೇಂದ್ರಕ್ಕೆ ಸುಪ್ರೀಂ ಸೂಚನೆ




**ನವದೆಹಲಿವ,ಮಾ.17:** ಪಿತೃತ್ವ ರಜೆಯನ್ನು ಸಾಮಾಜಿಕ ಭದ್ರತಾ ಸೌಲಭ್ಯವೆಂದು ಪರಿಗಣಿಸಿ ಕಾನೂನು ರೂಪಿಸುವಂತೆ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಸೂಚಿಸಿದೆ. ಈ ರಜೆಯ ಅವಧಿಯು ಪೋಷಕರು ಮತ್ತು ಮಗು ಇಬ್ಬರ ಅಗತ್ಯತೆಗಳನ್ನು ಪೂರೈಸುವಂತಿರಬೇಕು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಮಗು 3 ತಿಂಗಳಿಗಿಂತ ಕಡಿಮೆ ವಯಸ್ಸಿನದ್ದಾಗಿದ್ದರೆ ಮಾತ್ರ ದತ್ತು ಪಡೆದ ತಾಯಂದಿರಿಗೆ ಹೆರಿಗೆ ರಜೆ ನೀಡಬೇಕು ಎಂಬ ನಿರ್ಬಂಧದ ಸಾಂವಿಧಾನಿಕತೆಯನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯ ವಿಚಾರಣೆ ವೇಳೆ ನ್ಯಾ. ಜೆ.ಬಿ ಪಾರ್ದೀವಾಲಾ ಮತ್ತು ಆರ್. ಮಹದೇವನ್ ಅವರನ್ನೊಳಗೊಂಡ ಪೀಠವು ಈ ಸೂಚನೆ ನೀಡಿದೆ.

ಸಾಮಾಜಿಕ ಭದ್ರತಾ ಸಂಹಿತೆ, 2020ರ ಸೆಕ್ಷನ್ 60(4) ಅಡಿಯಲ್ಲಿ ಮಗು 3 ತಿಂಗಳಿಗಿಂತ ಕಡಿಮೆ ವಯಸ್ಸಿನದ್ದಾಗಿದ್ದರೆ ಮಾತ್ರ ದತ್ತು ಪಡೆದ ತಾಯಿಗೆ 12 ವಾರಗಳ ಹೆರಿಗೆ ರಜೆ ನೀಡಬೇಕು ಎಂಬ ನಿಬಂಧನೆಯು ಅಸಂವಿಧಾನಿಕ ಎಂದು ಪೀಠ ತೀರ್ಪು ನೀಡಿದೆ. ಈ ನಿಬಂಧನೆಯನ್ನು ತಿದ್ದುಪಡಿ ಮಾಡಿ, ಕಾನೂನುಬದ್ಧವಾಗಿ ಮಗುವನ್ನು ದತ್ತು ಪಡೆದ ಮಹಿಳೆಯು ಮಗುವಿನ ವಯಸ್ಸಿನ ಮಿತಿಯಿಲ್ಲದೆ 12 ವಾರಗಳ ಹೆರಿಗೆ ರಜೆಗೆ ಅರ್ಹರಾಗಿರುತ್ತಾರೆ ಎಂದು ಘೋಷಿಸಿದೆ.

ಪಿತೃತ್ವ ರಜೆಯ ಅಗತ್ಯತೆಯ ಕುರಿತು ಹೇಳುವುದಾದರೆ, ಪಿತೃತ್ವ ರಜೆಯನ್ನು ಸಾಮಾಜಿಕ ಭದ್ರತಾ ಸೌಲಭ್ಯವೆಂದು ಗುರುತಿಸುವ ಕಾನೂನು ರೂಪಸಿಲು ನಾವು ಕೇಂದ್ರ ಸರ್ಕಾರಕ್ಕೆ ಒತ್ತಾಯಿಸುತ್ತೇವೆ. ಅಂತಹ ರಜೆಯ ಅವಧಿಯು ಪೋಷಕರು ಮತ್ತು ಮಗು ಇಬ್ಬರ ಅಗತ್ಯಗಳಿಗೆ ಸ್ಪಂದಿಸುವ ರೀತಿಯಲ್ಲಿ ನಿರ್ಧರಿಸಲ್ಪಡಬೇಕು ಎಂದು ಎಂದು ನ್ಯಾಯಮೂರ್ತಿ ಪಾರ್ದೀವಾಲಾ ಅವರು ತೀರ್ಪಿನಲ್ಲಿ ತಿಳಿಸಿದ್ದಾರೆ.

ಪಿತೃತ್ವ ರಜೆ ಎಂದರೆ ಮಗುವಿನ ಜನನ ಅಥವಾ ದತ್ತು ಸ್ವೀಕಾರದ ನಂತರ ತಂದೆಗೆ ನೀಡಲಾಗುವ ವೇತನ ಸಹಿತ ಅಥವಾ ವೇತನ ರಹಿತ ರಜೆಯಾಗಿದೆ. ಇದು ಮಗುವಿನ ಆರಂಭಿಕ ಆರೈಕೆಯಲ್ಲಿ ಪಾಲ್ಗೊಳ್ಳಲು ಮತ್ತು ಹೆರಿಗೆಯ ನಂತರದ ಹಂತದಲ್ಲಿ ತಾಯಿಗೆ ಬೆಂಬಲ ನೀಡಲು ಸಹಕಾರಿಯಾಗುತ್ತದೆ. ಪೋಷಣೆ ಎಂಬುದು ಇಬ್ಬರ ಹಂಚಿಕೆಯ ಜವಾಬ್ದಾರಿಯಾಗಿದ್ದು, ಮಗುವಿನ ಆರಂಭಿಕ ಜೀವನದಲ್ಲಿ ಪೋಷಕರಿಬ್ಬರ ಉಪಸ್ಥಿತಿಯು ಮಗುವಿನ ಉತ್ತಮ ಬೆಳವಣಿಗೆಗೆ ಪೂರಕ ಎಂಬ ಮಾನ್ಯತೆಯ ಮೇಲೆ ಈ ಪರಿಕಲ್ಪನೆಯು ಆಧಾರಿತವಾಗಿದೆ. ಇದು ಕೇವಲ ಮಹಿಳೆಯರಿಗೆ ಸೀಮಿತವಾಗಿರುವ ಸಾಂಪ್ರದಾಯಿಕ ಪೋಷಣೆಯ ಜವಾಬ್ದಾರಿಯನ್ನು ಪ್ರಶ್ನಿಸುವ ಮೂಲಕ ಲಿಂಗ ಸಮಾನತೆಯನ್ನು ಉತ್ತೇಜಿಸುತ್ತದೆ. ಜೊತೆಗೆ, ಮನೆಗೆಲಸದ ಜವಾಬ್ದಾರಿಗಳನ್ನು ಸಮಾನವಾಗಿ ಹಂಚಿಕೊಳ್ಳಲು ಮತ್ತು ಮಹಿಳೆಯರು ನಿರಂತರವಾಗಿ ಉದ್ಯೋಗದಲ್ಲಿ ಮುಂದುವರಿಯಲು ಸಹಾಯ ಮಾಡುತ್ತದೆ. ಭಾರತದಲ್ಲಿ ಇನ್ನೂ ಪಿತೃತ್ವ ರಜೆಯನ್ನು ಕಾನೂನುಬದ್ಧವಾಗಿ ಗುರುತಿಸಲಾಗಿಲ್ಲ, ಆದರೆ ಮಹಿಳೆಯರಿಗೆ 26 ವಾರಗಳವರೆಗೆ ವೇತನಸಹಿತ ಹೆರಿಗೆ ರಜೆಗೆ ಅವಕಾಶವಿದೆ. ಇಬ್ಬರಿಗಿಂತ ಕಡಿಮೆ ಮಕ್ಕಳನ್ನು ಹೊಂದಿರುವ ಮಹಿಳೆಯರಿಗೆ 26 ವಾರಗಳ ವೇತನಸಹಿತ ಹೆರಿಗೆ ರಜೆ ಮತ್ತು ಇಬ್ಬರು ಅಥವಾ ಅದಕ್ಕಿಂತ ಹೆಚ್ಚು ಮಕ್ಕಳನ್ನು ಹೊಂದಿರುವವರಿಗೆ 12 ವಾರಗಳ ರಜೆಯನ್ನು ಕಾನೂನು ಒದಗಿಸುತ್ತದೆ. ಇದರಲ್ಲಿ ಹೆರಿಗೆಗೆ ಮುನ್ನ 8 ವಾರಗಳವರೆಗೆ ರಜೆ ಪಡೆಯಲು ಅವಕಾಶವಿರುತ್ತದೆ.

# ಕಾಲವೇ ಎಲ್ಲದಕ್ಕೂ ಉತ್ತರ ನೀಡಲಿದೆ: ರಜನಿಕಾಂತ್



**ಚೆನ್ನೈ, ಮಾ. 17:** ತಮಿಳಿನ ಸೂಪರ್‌ಸ್ಟಾರ್ ರಜನಿಕಾಂತ್ ಅವರು ರಾಜಕೀಯಕ್ಕೆ ಪ್ರವೇಶಿಸಲು ಯತ್ನಿಸಿದಾಗ ಡಿಎಂಕೆಯಿಂದ ಬೆದರಿಕೆ ಬಂದಿತ್ತು ಎಂದು ಟಿವಿಕೆ ಪಕ್ಷದ ಪ್ರಧಾನ ಕಾರ್ಯದರ್ಶಿ ಆಧವ್ ಅರ್ಜುನ ಆರೋಪ ಮಾಡಿದ್ದಾರೆ, ಇದು ಈಗ ತಮಿಳುನಾಡಿನ ರಾಜಕೀಯದಲ್ಲಿ ಬಹಳ ದೊಡ್ಡ ಚರ್ಚೆಗೆ ಕಾರಣವಾಗಿದೆ.


ಈ ವಿವಾದವೆದ್ದ ಹಿನ್ನೆಲೆಯಲ್ಲಿ ಮೈಕ್ರೋಬ್ಲಾಗಿಂಗ್ ಖಾತೆ ಯಲ್ಲಿ ಹೇಳಿಕೆ ನೀಡಿರುವ ರಜನಿಕಾಂತ್, ಈ ಹೇಳಿಕೆ ಸತ್ಯಕ್ಕೆ ದೂರವಾದದ್ದು, ಎಲ್ಲದಕ್ಕೂ ಕಾಲವೇ ಉತ್ತರಿಸಲಿದೆ ಎಂದು ಹೇಳುವ ಮೂಲಕ ಆರೋಪವನ್ನು ರಜನಿಕಾಂತ್ ತಳ್ಳಿ ಹಾಕಿದ್ದಾರೆ.

ಅರ್ಜುನ ಅವರು ನನ್ನ ಬಗ್ಗೆ ಸುಳ್ಳು ಹೇಳಿಕೆ ನೀಡಿದ್ದಾರೆ. ಸಮಯವೇ ಎಲ್ಲದಕ್ಕೂ ಉತ್ತರ ನೀಡಲಿದೆ ಎಂದು ಹೇಳುವ ಮೂಲಕ ವಿವಾದಕ್ಕೆ ತೆರೆ ಎಳೆದಿದ್ದಾರೆ.

ರಜನಿಕಾಂತ್ ಅವರು 2017 ಡಿಸೆಂಬರ್‌ನಲ್ಲಿ ರಾಜಕೀಯ ಪ್ರವೇಶಿಸುವುದಾಗಿ ಘೋಷಿಸಿದ್ದರು. ಆದರೆ, ಅನಾರೋಗ್ಯದ ಕಾರಣದಿಂದ 2020ರ ಡಿಸೆಂಬರ್‌ನಲ್ಲಿ ರಾಜಕೀಯದಿಂದ ಹಿಂದೆ ಸರಿದರು ಎಂದು ವರದಿಯಾಗಿತ್ತು.

ನಟ ದಳಪತಿ ವಿಜಯ್ ಅವರು ತಮಿಳಗ ವೆಟ್ರಿ ಕಳಗಂ (ಟಿವಿಕೆ) ಪಕ್ಷದ ಮೂಲಕ ತಮಿಳುನಾಡು ರಾಜಕೀಯದಲ್ಲಿ ಸಂಚಲನ ಸೃಷ್ಟಿಸಿದ್ದಾರೆ. ಪ್ರಚಾರ ಸಮಾವೇಶಗಳಲ್ಲಿ ಭಾರಿ ಸಂಖ್ಯೆಯಲ್ಲಿ ಜನರು ಜಮಾಯಿಸುತ್ತಿದ್ದಾರೆ. ಟಿವಿಕೆ ಜೊತೆ ಚುನಾವಣಾ ಪೂರ್ವ ಮೈತ್ರಿ ಮಾಡಿಕೊಳ್ಳಲು ಬಿಜೆಪಿ ತಂತ್ರ ರೂಪಿಸಿತ್ತು. ಆದರೆ ಟಿವಿಕೆ ಈ ಆಫರ್ ಅನ್ನು ನಿರಾಕರಿಸಿದೆ ಎಂದು ಹೇಳಲಾಗಿದೆ. ತಮಿಳುನಾಡಿನ 234 ಸ್ಥಾನಗಳಿಗೆ ಏಪ್ರಿಲ್ 23ರಂದು ಚುನಾವಣೆ ನಡೆಯಲಿದ್ದು, ಮೇ 4ರಂದು ಫಲಿತಾಂಶ ಹೊರಬೀಳಲಿದೆ.

# ವಾರದಲ್ಲಿ 4 ದಿನ ಮಾತ್ರ ಕೆಲಸ: ಪೆಟ್ರೋಲ್ ಡೀಸೆಲ್ ಉಳಿಸಲು ಶ್ರೀಲಂಕಾ ಹೊಸ ನಿಯಮ



**ಕೊಲಂಬೊ,ಮಾ.17:** ಮಧ್ಯಪ್ರಾಚ್ಯ ಯುದ್ಧದಿಂದ ಉಂಟಾಗಿರುವ ತೈಲ ಬಿಕ್ಕಟ್ಟಿಗೆ ಶ್ರೀಲಂಕಾ ತತ್ತರಿಸಿದೆ. ತೈಲ ಉಳಿಸುವುದಕ್ಕಾಗಿ ವಾರದಲ್ಲಿ ನಾಲ್ಕು ದಿನ ಮಾತ್ರ ಕೆಲಸ, ಬುಧವಾರ ರಜೆ ದಿನವಾಗಿ ಘೋಷಿಸಿ ಆದೇಶ ಹೊರಡಿಸಿದೆ. ಶ್ರೀಲಂಕಾ ಸರ್ಕಾರವು ಸಾರ್ವಜನಿಕ ಸಂಸ್ಥೆಗಳಿಗೆ ಪ್ರತಿ ವಾರ ಒಂದು ಹೆಚ್ಚುವರಿ ರಜಾ ದಿನವನ್ನು ಘೋಷಿಸಿದೆ. ವಾರದಲ್ಲಿ ನಾಲ್ಕು ದಿನ ಮಾತ್ರ ಕೆಲಸ ಇರಲಿದೆ. ಮಾ.18ರಿಂದ ಶನಿವಾರ, ಭಾನುವಾರದಂತೆಯೇ ಬುಧವಾರವೂ ಸಾರ್ವಜನಿಕ ರಜಾದಿನ ಎಂದು ಸರ್ಕಾರ ಘೋಷಿಸಿದೆ.

ನಾವು ಕೆಟ್ಟ ಪರಿಸ್ಥಿತಿ ಎದುರಿಸಲು ಸಿದ್ಧರಾಗಬೇಕು. ಆದರೆ, ಉತ್ತಮವಾದದ್ದಕ್ಕಾಗಿ ಆಶಿಸಬೇಕು ಎಂದು ಅಧ್ಯಕ್ಷ ಅನುರ ಕುಮಾರ ದಿಸಾನಾಯಕೆ ಸೋಮವಾರ ಹಿರಿಯ ಅಧಿಕಾರಿಗಳೊಂದಿಗೆ ತುರ್ತು ಸಭೆಯಲ್ಲಿ ಮಾತನಾಡಿದ್ದಾರೆ. ವಾರದಲ್ಲಿ ನಾಲ್ಕು ದಿನಗಳ ಕೆಲಸ ನಿಯಮವು ಶಾಲೆಗಳು, ವಿಶ್ವವಿದ್ಯಾಲಯ ಸೇರಿದಂತೆ ಶಿಕ್ಷಣ ಸಂಸ್ಥೆಗಳಿಗೂ ಅನ್ವಯಿಸಲಿದೆ. ಆದರೆ, ಆರೋಗ್ಯ ಸೇವೆ, ಬಂದರು, ತುರ್ತು ಕಾರ್ಯಾಚರಣೆಗಳಂತಹ ಅಗತ್ಯ ಸೇವೆಗಳಿಗೆ ಈ ನಿಯಮ ಅನ್ವಯಿಸುವುದಿಲ್ಲ.

ಸರ್ಕಾರಿ ಕಚೇರಿಗಳು ಸತತ ಮೂರು ದಿನಗಳವರೆಗೆ ಮುಚ್ಚದಂತೆ ಅಧಿಕಾರಿಗಳು ಬುಧವಾರವನ್ನು ಹೆಚ್ಚುವರಿ ರಜೆ ದಿನವಾಗಿ ಆಯ್ಕೆ ಮಾಡಿಕೊಂಡಿದ್ದಾರೆ. ರಾಷ್ಟ್ರೀಯ ಇಂಧನ ಪಾಸ್ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ. ವಾಹನ ಚಾಲಕರು ನೋಂದಾಯಿಸಿಕೊಳ್ಳುವುದು ಮತ್ತು ಖರೀದಿಗೆ ಸೀಮಿತ ಪ್ರಮಾಣದ ಇಂಧನವನ್ನು ಹಂಚಿಕೆ ಮಾಡುವುದು ಕಡ್ಡಾಯವಾಗಿದೆ.

ಸಾರ್ವಜನಿಕ ಮತ್ತು ಖಾಸಗಿ ವಲಯದ ಸಂಸ್ಥೆಗಳು ಇಂಧನ ಉಳಿತಾಯ ಅಭ್ಯಾಸ ಕ್ರಮಗಳನ್ನು ಅಳವಡಿಸಿಕೊಳ್ಳುವಂತೆ ಸರ್ಕಾರ ಒತ್ತಾಯಿಸಿದೆ. 2022 ರಲ್ಲಿ ದೇಶ ಅನುಭವಿಸಿದ ತೀವ್ರ ಆರ್ಥಿಕ ಬಿಕ್ಕಟ್ಟು ಪುನರಾವರ್ತನೆಯಾಗದಂತೆ ನೋಡಿಕೊಳ್ಳಲು ಕೊಲಂಬೊದ ಅಧಿಕಾರಿಗಳು ಉತ್ಸುಕರಾಗಿದ್ದಾರೆ. ಇಂಧನ ಕೊರತೆಯಿಂದಾಗಿ ಪೆಟ್ರೋಲ್ ಬಂಕ್ಗಳಲ್ಲಿ ದೀರ್ಘ ಸರತಿ ಸಾಲುಗಳು, ವಿದ್ಯುತ್ ಕಡಿತ ಮತ್ತು ವ್ಯಾಪಕ ಸಾರ್ವಜನಿಕ ಅಶಾಂತಿ ಉಂಟಾಗಿತ್ತು.

# 7 ಹೊಸ ಯೋಜನೆಗಳೊಂದಿಗೆ 4,000 ಕಿ.ಮೀ. ಉದ್ದದ ಬುಲೆಟ್ ರೈಲುಜಾಲ



**ನವದೆಹಲಿ, ಮಾ.17:** 2027ರ ವೇಳೆಗೆ ಕಾರ್ಯಾರಂಭ ಮಾಡಲು ನಿರ್ಧರಿಸಲಾಗಿರುವ ದೇಶದ ಮೊದಲ ಬುಲೆಟ್ ರೈಲು ಯೋಜನೆಯ ಪ್ರಗತಿ ಸೇರಿದಂತೆ ರೈಲ್ವೆಯ ಕಾರ್ಯಕ್ಷಮತೆಯ ಸಮಗ್ರ ವಿವರವನ್ನು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮಂಗಳವಾರ ಲೋಕಸಭೆಯಲ್ಲಿ ಮಂಡಿಸಿದರು. ಆರ್ಥಿಕ ಮತ್ತು ಕಾರ್ಯಾಚರಣೆಯ ಲಾಭಗಳನ್ನು ಎತ್ತಿ ತೋರಿಸುತ್ತಾ, ರಾಷ್ಟ್ರೀಯ ಸಾರಿಗೆ ಸಂಸ್ಥೆಯು ಇಂಧನ ಪರಿವರ್ತನೆಯ ಮೂಲಕ ಗಮನಾರ್ಹ ಉಳಿತಾಯವನ್ನು ಸಾಧಿಸಿದೆ ಎಂದು ವೈಷ್ಣವ್ ಹೇಳಿದರು. "ಡೀಸೆಲ್‌ನಿಂದ ವಿದ್ಯುತ್ ಎಳೆತಕ್ಕೆ ಬದಲಾಯಿಸುವ ಮೂಲಕ, ರೈಲ್ವೆ ಸುಮಾರು 6,000 ಕೋಟಿ ರೂ.ಗಳನ್ನು ಉಳಿಸಿದೆ" ಎಂದು ಅವರು ಸದನಕ್ಕೆ ತಿಳಿಸಿದರು, ಸಿಬ್ಬಂದಿ ವೆಚ್ಚದ ನಂತರ ಇಂಧನವು ಎರಡನೇ ಅತಿದೊಡ್ಡ ವೆಚ್ಚವಾಗಿ ಉಳಿದಿದೆ ಎಂದು ಅವರು ಹೇಳಿದರು.

ಡೀಸೆಲ್ ಲೋಕೋಮೋಟಿವ್‌ಗಳನ್ನು ಕ್ರಮೇಣವಾಗಿ ತೆಗೆದುಹಾಕಲಾಗುತ್ತಿದೆ ಮತ್ತು ಅಂತಿಮವಾಗಿ ವಿದ್ಯುತ್ ಎಂಜಿನ್‌ಗಳಿಗೆ ದಾರಿ ಮಾಡಿಕೊಡಲಾಗುವುದು ಎಂದು ಅವರು ಗಮನಿಸಿದರು. ಪ್ರಮಾಣ ಮತ್ತು ಸಾಮರ್ಥ್ಯವನ್ನು ಒತ್ತಿ ಹೇಳಿದ ಸಚಿವರು, "ಭಾರತೀಯ ರೈಲ್ವೆ ಈಗ ವಿಶ್ವದ ಎರಡನೇ ಅತಿದೊಡ್ಡ ಸರಕು ಸಾಗಣೆದಾರವಾಗಿದೆ" ಎಂದು ಹೇಳಿದರು. 2014 ರಿಂದ, "ಸುಮಾರು 35,000 ಕಿ.ಮೀ. ರೈಲ್ವೆ ಹಳಿಗಳನ್ನು ಹಾಕಲಾಗಿದೆ ಮತ್ತು ಸುಮಾರು 27,000 ಕಿ.ಮೀ. ವಿದ್ಯುದ್ದೀಕರಿಸಲಾಗಿದೆ" ಎಂದು ಅವರು ಹೇಳಿದರು. ಏಳು ಹೊಸ ಬುಲೆಟ್ ರೈಲು ಯೋಜನೆಗಳನ್ನು ಪ್ರಸ್ತಾಪಿಸಲಾಗಿದೆ ಎಂದು ಅವರು ಮತ್ತಷ್ಟು ಘೋಷಿಸಿದರು. "ಈ ಸೇರ್ಪಡೆಗಳೊಂದಿಗೆ, ನೆಟ್‌ವರ್ಕ್ ಸುಮಾರು 4,000 ಕಿ.ಮೀ.ಗೆ ವಿಸ್ತರಿಸಲಿದೆ" ಎಂದು ವೈಷ್ಣವ್ ಹೇಳಿದರು, ಭಾರತದ ಮೊದಲ ಅಂತಹ ಯೋಜನೆಯ ವೆಚ್ಚದ ರಚನೆಯು ಜಾಗತಿಕ ಮಾನದಂಡಗಳೊಂದಿಗೆ ಹೊಂದಿಕೆಯಾಗುತ್ತದೆ ಎಂದು ಪ್ರತಿಪಾದಿಸಿದರು. ವಿಶಾಲ ದೃಷ್ಟಿಕೋನವನ್ನು ವಿವರಿಸುತ್ತಾ, ವೈಷ್ಣವ್ ಹೇಳಿದರು, "ಇಂದಿನ ಭಾರತವು ಮಹತ್ವಾಕಾಂಕ್ಷೆಯಾಗಿದೆ. ದೇಶದ ನಿರೀಕ್ಷೆಗಳು ಮೋದಿ ಜಿ ಅವರಿಂದ, ಮತ್ತು ವಿರೋಧ ಪಕ್ಷಗಳು ಸಹ ಅವರ ಕಡೆಗೆ ನೋಡುತ್ತವೆ." ಅವರು ರೈಲು ರೂಪಾಂತರವನ್ನು 2047 ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಗುರಿಯೊಂದಿಗೆ ಜೋಡಿಸಿದರು.